ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 105 ಸಂಚಿಕೆ- 105 | PAGE-8 ಪುಟ-8 | ಭಾನುವಾರ 01.06.2025 | RS.2/- ಬೆಲೆ 2/-

# ಶಿಕ್ಷಕರು ಆಸಕ್ತಿಯಿಂದ ಕೆಲಸ ಮಾಡಿದರೆ ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತಮ ಫಲಿತಾಂಶ: ಸಿಎಂ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮೇ 31:ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ಇಳಿಕೆ ಕಂಡಿರುವುದಕ್ಕೆ ಯಾರು ಹೊಣೆ? ಶಾಲೆಗಳಲ್ಲಿ ಶಿಕ್ಷಕರ ಕೊರತೆ ಹಾಗೂ ಇಲಾಖೆಯಲ್ಲಿ ಅಧಿಕಾರಿಗಳ ಕೊರತೆ ಎಂಬ ಕುಂಟುನೆಪಗಳನ್ನು ಹೇಳದೆ, ಆಸಕ್ತಿಯಿಂದ ಕೆಲಸ ಮಾಡಿದರೆ ಎಸ್.ಎಸ್.ಎಸ್.ಸಿ ಯಲ್ಲಿ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಜೊತೆಗಿನ ಎರಡನೇ ದಿನ ಸಭೆಯಲ್ಲಿ ಅವರು ಮಾತನಾಡುತ್ತಾ, ಶಾಲೆಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಡಿಡಿಪಿಐ ಅಧಿಕಾರಿಗಳು ಭೇಟಿ ನೀಡುತ್ತಿರುವ ಬಗ್ಗೆಯೂ ಅವರು ಪರಿಶೀಲಿಸಿದರು.

ಶಾಲೆಗಳಲ್ಲಿ ಶಿಕ್ಷಕರು ಹಾಗೂ ಡಿಡಿಪಿಐಗಳು ನಿಷ್ಠೆಯಿಂದ, ಆಸಕ್ತಿಯಿಂದ ಕಾರ್ಯನಿರ್ವಹಿಸಬೇಕು. ಅಧಿಕಾರಿಗಳು ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಿ ,ಪಾಠಗಳು ಸರಿಯಾಗಿ ನಡೆಯುತ್ತಿರುವ ಬಗ್ಗೆ ಪರೀಶೀಲಿಸಬೇಕು ಎಂದು ಸೂಚಿಸಿದರು.

ವಿವೇಕ ಕೊಠಡಿಗಳ ನಿರ್ಮಾಣಕ್ಕೆ ಶೀಘ್ರ ಹಣ ಬಿಡುಗಡೆಗೆ ಸೂಚನೆ:

ಜಿಲ್ಲೆಗಳಲ್ಲಿ ವಿವೇಕ ಕೊಠಡಿಗಳ ನಿರ್ಮಾಣ ಪ್ರಗತಿಯ ಬಗ್ಗೆ ಪರಿಶೀಲಿಸಿದ ಮುಖ್ಯಮಂತ್ರಿಗಳು ವಿವೇಕ ಕೊಠಡಿಗಳ ನಿರ್ಮಾಣಕ್ಕೆ ಶೀಘ್ರ ಹಣ ಬಿಡುಗಡೆ ಮಾಡಲು ತಿಳಿಸುತ್ತಾ, ಮಾರ್ಚ್ ಅಂತ್ಯಕ್ಕೆ ಬಿಡುಗಡೆ ಮಾಡುವ ಬದಲು ಶೀಘ್ರವಾಗಿ ಬಿಡುಗಡೆ ಮಾಡುವಂತೆ ಸಂಬಂಧಪಟ್ಟವರಿಗೆ ಸೂಚಿಸಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕಡಿಮೆ ಆಗುತ್ತಲೇ ಹೋಗುತ್ತಿದೆ. ವರ್ಷ ವರ್ಷವೂ ಎರಡು ಲಕ್ಷ ದಷ್ಟು ದಾಖಲಾತಿ ಕಡಿಮೆ ಆಗುತ್ತಿದೆ ಯಾಕೆ? ಇದನ್ನು ತಡೆಯಲು ಜಿಲ್ಲಾ ಕಾರ್ಯನಿರ್ವಾಹಕ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಪೊ?ಷಕರೊಂದಿಗೆ ನಿಯಮಿತ ಸಭೆಗಳನ್ನು ನಡೆಸಬೇಕು ಎಂದು ಸೂಚಿಸಿದರು.

ಕಲಿಕಾ ಮಟ್ಟ ಗಮನಿಸಿ :

ಬಿಇಒ ಗಳು ಮೂರರಿಂದ 9ನೇ ತರಗತಿವರೆಗೆ ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಕಲಿಕಾ ಮಟ್ಟವನ್ನು ಗಮನಿಸಬೇಕು

ಡಿಡಿಪಿಐಗಳು ನಿರಂತರ ಪರಿಶೀಲನೆ ಮಾಡಬೇಕು. ಹಾಲು ಮೊಟ್ಟೆ ಸಮವಸ್ತ್ರ ಎಲ್ಲಾ ಸೌಲಭ್ಯಗಳನ್ನು ನೀಡಿ ಫಲಿತಾಂಶ ಕಡಿಮೆ ಬಂದರೆ ಹೇಗೆ? ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

ಮಕ್ಕಳು ಡ್ರಾಪ್ ಔಟ್ ಆಗದಂತೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸಬೇಕು, ಪೊ?ಷಕರಲ್ಲಿ ಜಾಗೃತಿ ಮೂಡಿಸುವ ಕೆಲಸವೂ ಆಗಬೇಕು ಎಂದು ಸೂಚಿಸಿದರಲ್ಲದೇ ಮುಂದಿನ ಶೈಕ್ಷಣಿಕ ವರ್ಷಗಳಲ್ಲಿ ಡ್ರಾಪ್ ಔಟ್ ಸಂಖ್ಯೆ ಕಡಿಮೆ ಆಗಲೇಬೇಕು ನಿರ್ದೇಶನ ನೀಡಿದರು.

ಎಸ್ ಎಸ್ ಎಲ್ ಸಿ ಫಲಿತಾಂಶ ಶೇಕಡ 60ಕ್ಕಿಂತ ಕಡಿಮೆ ಇರುವ ಜಿಲ್ಲೆಗಳ ಡಿ.ಡಿ.ಪಿ.ಐಗಳಿಗೆ ನೋಟೀಸ್ ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ನೇಮಕಾತಿ ಮಾಡಿಕೊಳ್ಳಲು ಸೂಕ್ತ ಕ್ರಮ ವಹಿಸಲು ಸೂಚನೆ :

ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ನೇಮಕಾತಿ ಮಾಡಿಕೊಳ್ಳಲು ಸರಿಯಾಗಿ ಕ್ರಮ ವಹಿಸಲಾಗುತ್ತಿಲ್ಲ. ಅಧಿಕಾರಿಗಳು ಈ ಬಗ್ಗೆ ಗಮನಹರಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ನಿರುದ್ಯೋಗ ಸಮಸ್ಯೆ ಇರುವ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ನೇಮಕಾತಿ ಬಗ್ಗೆ ಆಸಕ್ತಿ ವಹಿಸಬೇಕು. ಇವರಿಗೆ ಗೌರವ ಧನ ನೀಡಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ನೇಮಕಾತಿಗೆ ಆಗದಿರುವುದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ಬಾಲ್ಯ ವಿವಾಹ ಪ್ರಕರಣಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸೂಚನೆ:

ಬಾಲ್ಯ ವಿವಾಹ ತಡೆಗಟ್ಟಲು ಜಿಲ್ಲಾ ಸಮಿತಿಗಳು ಸಕ್ರಿಯವಾಗಬೇಕು. 700 ಬಾಲ್ಯ ವಿವಾಹ ಪ್ರಕರಣಗಳು ಘಟಿಸಿದ್ದು, ಇದನ್ನು ತಡೆಗಟ್ಟಲು ಕ್ರಮ ತೆಗೆದುಕೊಳ್ಳಿ ಎಂದು ಮುಖ್ಯಮಂತ್ರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅಪೌಷ್ಟಿಕತೆ ಮಟ್ಟ ಇಳಿಕೆಗೆ ಕ್ರಮ ವಹಿಸಿ:

ವಿಜಯನಗರ ಜಿಲ್ಲೆಯಲ್ಲಿ ಅಪೌಷ್ಟಿಕತೆ ಮಟ್ಟ ಶೇಕಡ 5.53 ರಷ್ಟಿದೆ. ಬೀದರ್ ನಲ್ಲಿ ಶೇ.5.6 ರಷ್ಟಿದ್ದರೆ, ಬಳ್ಳಾರಿ ಜಿಲ್ಲೆಯಲ್ಲಿ ಶೇ.4.39 ರಷ್ಟಿದೆ.

ಮಕ್ಕಳ ಪೌಷ್ಟಿಕತೆಗಾಗಿ ಶಾಲೆಗಳಲ್ಲಿ ಒದಗಿಸಲಾಗುವ ಹಾಲು, ಮೊಟ್ಟೆ ಸಮರ್ಪಕವಾಗಿ ನೀಡಲಾಗುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು.

ಅಪೌಷ್ಟಿಕತೆ ಮಟ್ಟವನ್ನು ದಿಢೀರನೆ ಸರಿಮಾಡಲು ಆಗದಿದ್ದರೂ ಕ್ರಮೇಣ ಸರಿ ಮಾಡಲು ಅವಕಾಶಗಳಿವೆ. ಅಪೌಷ್ಟಿಕತೆ ಮಟ್ಟವನ್ನು ಶೇಕಡ 1 ಕ್ಕೆ ಇಳಿಸಲು ಕ್ರಮ ವಹಿಸಿ ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ಶೇಕಡಾವಾರು ತೀವ್ರ ಅಪೌಷ್ಟಿಕ ಮಕ್ಕಳ ಸಂಖ್ಯೆ ಹೆಚ್ಚಾಗಿರುವ ಜಿಲ್ಲೆಗಳ ಪ್ರತೀ ವರ್ಷ ನಿಮ್ಮ ನಿಮ್ಮ ಜಿಲ್ಲೆಗಳಲ್ಲಿ ಶೇ1 ರಷ್ಟು ಕಡಿಮೆ ಮಾಡಿಕೊಂಡು ಹೋಗಲು ಸಾಧ್ಯವಿದೆ. ಒಂದೇ ಸಾರಿಗೆ ನಿಲ್ಲಿಸಲು ಸಾಧ್ಯವಿಲ್ಲ ಎನ್ನುವುದಕ್ಕೆ ಸಾಮಾಜಿಕ ಕಾರಣಗಳೂ ಇವೆ. ಆದ್ದರಿಂದ ಪ್ರತೀ ವರ್ಷ ಶೇ1 ರಷ್ಟು ಪ್ರಮಾಣ ಕಡಿಮೆ ಮಾಡಿಕೊಂಡು ಬಂದರೆ ಅಪೌಷ್ಟಿಕ ಮಕ್ಕಳ ಸಂಖ್ಯೆಯನ್ನು ಕಡಿಮೆ ಮಾಡಬಹುದು ಎನ್ನುವ ಸೂಚನೆ ನೀಡಿದರು. ಬೀದರ್, ವಿಜಯನಗರ, ಬಳ್ಳಾರಿ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚಿಸಿದರು.

ಮಕ್ಕಳ ಹಿಮೋಗ್ಲೋಬಿನ್ ಪ್ರಮಾಣ ಸೇರಿ ಅವರ ಆರೋಗ್ಯ ತಪಾಸಣೆ ನಿರಂತರವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಹಾಳಿ, ಮೊಟ್ಟೆ, ಮಾತ್ರೆ ಎಲ್ಲವನ್ನೂ ಕೊಡುತ್ತಿದ್ದರೂ ಏಕೆ ಕೆಲವು ಕಡೆ ಮಹಿಳೆಯರ ಮತ್ತು ಮಕ್ಕಳ ಪೌಷ್ಟಿಕ ಮಟ್ಟ ಮಾತ್ರ ಸುಧಾರಿಸುತ್ತಿಲ್ಲ ಎನ್ನುವ ಬಗ್ಗೆ ವೈಜ್ಞಾನಿಕ ವರದಿ ನೀಡಿ, ವರದಿ ಆಧಾರದಲ್ಲಿ ಅಗತ್ಯ ಸುಧಾರಣಾ ಕ್ರಮ ಕೈಗೊಳ್ಳಬಹುದು ಎಂದು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಹಲವು ಯೋಜನೆಗಳಲ್ಲಿ ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ ತಾಂತ್ರಿಕ ತೊಂದರೆಗಳನ್ನು ಅಧಿಕಾರಿಗಳು ಮುಂದಿಟ್ಟಾಗ ಗರಂ ಆದ ಮುಖ್ಯಮಂತ್ರಿಗಳು, ಎಷ್ಟು ವರ್ಷಗಳಿಂದ ಇದೇ ಕತೆ ಹೇಳಿಕೊಂಡು ಕೂತಿರ್ತೀರಿ ? ಅಗತ್ಯ ಬಿದ್ದರೆ ಭೂ ಸ್ವಾಧೀನಕ್ಕಾಗಿಯೇ ವಿಶೇಷ ಅಧಿಕಾರಿಯನ್ನು ನೇಮಿಸಲು ನಾವು ಸಿದ್ದರಿದ್ದೇವೆ. ನೇಮಕ ಮಾಡಿಕೊಳ್ಳಿ. ಹಳೆ ಯೋಜನೆಗಳು ಪೂರ್ಣಗೊಳ್ಳದ ಹೊರತು ಹೊಸ ಹೆದ್ದಾರಿ ಯೋಜನೆಗಳು ನಮಗೆ ಸಿಗುವುದಿಲ್ಲ ಎಂದರು, ಇದಕ್ಕೆ ಧ್ವನಿಗೂಡಿಸಿದ ಸಚಿವ ಸತೀಶ್ ಜಾರಕಿಹೊಳಿಯವರು, 42 ಬಾಕಿ ಯೋಜನೆಗಳಲ್ಲಿ ನಾವು 22ಯೋಜನೆಗಳನ್ನು ಮುಗಿಸಿದ್ದೇವೆ. ಕೇಂದ್ರದಿಂದಲೇ ಬಹಳ ಸಮಸ್ಯೆ ಆಗುತ್ತಿದೆ. ಕೇಂದ್ರದ ಅಧಿಕಾರಿಗಳು ಹಲವು ಕಡೆ ಇನ್ನಷ್ಟು ಹೆಚ್ಚು ಕ್ರಿಯಾಶೀಲವಾಗಿ ಮಾಡಬೇಕಿದೆ ಎಂದರು.

ಎಲ್ಲೆಲ್ಲಿ ಬಾಟಲ್ ನೆಕ್ ಸಮಸ್ಯೆ ಇದೆ ಅವುಗಳನ್ನು ಮೊದಲ ಆಧ್ಯತೆ ನೀಡಿ ಬಗೆಹರಿಸಬೇಕು. ಎಸ್ಎಲ್ಎಒ ಗಳು ಜಿಲ್ಲಾಧಿಕಾರಿಗಳ ಅಧೀನದಲ್ಲಿ ಬರುವಂತೆ ಒಂದು ಸುತ್ತೋಲೆ ಹೊರಡಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು. ಮೇಲಿಂದ ಮೇಲೆ

(2ನೇ ಪುಟ ನೋಡಿ)

## ಬೀದರ ರೈಲ್ವೆ ನಿಲ್ದಾಣದ ಪುನರಾಭಿವೃದ್ಧಿ ಕಾಮಗಾರಿ ಪರಿಶೀಲನೆ ಮಾಡಿದ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ ಬೀದರ : ಮೇ.31: ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಶನಿವಾರ ಬೀದರ ರೈಲ್ವೆ ನಿಲ್ದಾಣದಲ್ಲಿ ನಡೆಯುತ್ತಿರುವ ಪುನರಾಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

ಅಮೃತ ಭಾರತ ನಿಲ್ದಾಣ

(2ನೇ ಪುಟ ನೋಡಿ)

## ಕುಳಗೇರಿ ಬಳಿ ಅಪಘಾತ: ತಂದೆ-ಮಗಳು ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.31-ಜಿಲ್ಲೆಯ ಕುಳಗೇರಿ ಕ್ರಾಸ್ ಬಳಿ ರಾಷ್ಟ್ರೀಯ ಹೆದ್ದಾರಿ 218 ರಲ್ಲಿ ಶನಿವಾರ ಬೆಳಿಗ್ಗೆ ನಡೆದ ರಸ್ತೆ ಅಪಘಾತದಲ್ಲಿ ತಂದೆ-ಮಗಳು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.

ಬಾದಾಮಿ ತಾಲೂಕಿನ ಎಸ್.ಎನ್.ತಿಮ್ಮಾಪೂರ ಗ್ರಾಮದ ನಿವಾಸಿ ಬಸವರಾಜ ವಿಠ್ಠಲ ಬಂಡಿವಡ್ಡರ(26) ತನ್ನ ಮಗಳು ಹುಲಿಗೆಮ್ಮ(03)ಳನ್ನು ಕರೆದುಕೊಂಡು ದ್ವಿಚಕ್ರ ವಾಹನದ ಮೇಲೆ ಹಳಗೇರಿ ಗ್ರಾಮದ ಹನುಮಾನ ದೇವರ ದರ್ಶನಕ್ಕೆ ಹೊರಟಾಗ ಅಪರಿಚಿತ ವಾಹನವೊಂದು ಇವರ ಬೈಕ್‌ಗೆ ಡಿಕ್ಕಿ ಹೊಡೆದು ಹೋಗಿದ್ದು ತಂದೆ-ಮಗಳು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ.

ಘಟನಾ ಸ್ಥಳಕ್ಕೆ ಬಾದಾಮಿ ಪಿಎಸ್ಐ ವಿಠ್ಠಲ್ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮಕ್ಕೈಗೊಂಡಿದ್ದಾರೆ.

## ಬಿಟಿಎಂ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡಿದ ರಾಮಲಿಂಗಾರೆಡ್ಡಿ:ಡಿಕೆಶಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.31:ವಿದ್ಯಾಭ್ಯಾಸವೇ ದೇಶದ ಅಭಿವೃದ್ಧಿಗೆ ನಾಂದಿ ಎಂದು ನಂಬಿ,22 ಸರ್ಕಾರಿ ಶಾಲೆಗಳನ್ನು ಆಧುನಿಕ ಹೈಟೆಕ್ ಶಾಲೆಗಳಾಗಿ ಪರಿವರ್ತಿಸುವ ಮೂಲಕ ಸರ್ಕಾರಿ ಶಾಲೆಗಳು ಯಾವುದರಲ್ಲಿ ಕಮ್ಮಿಯಿಲ್ಲ ಎಂದು ತೋರಿಸಿಕೊಟ್ಟಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರು ಬಿಟಿಎಂ ವಿಧಾನಸಭಾ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದ್ದಾರೆ. ಅವರ ಸಾಧನೆ ಪ್ರಶಂಸನೀಯ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದರು.

ಅವರು ಬಿಟಿಎಂ ಕ್ಷೇತ್ರದಲ್ಲಿನ ಶಾಲೆಗಳಿಗೆ ಭೇಟಿ ನೀಡಿದ ನಂತರ ಮಾತನಾಡಿದರು. ಈ ಸಂದರ್ಭದಲ್ಲಿ ಕ್ಷೇತ್ರದ ಶಾಸಕರು ಹಾಗೂ ಸಚಿವರಾದ ರಾಮಲಿಂಗಾರೆಡ್ಡಿ ಹಾಗೂ ಇತರರು ಉಪಸ್ಥಿತರಿದ್ದರು.

## ಶೀಘ್ರವೇ ಬೀದರ್-ಹೈದರಾಬಾದ್ ರೈಲು ಮಾರ್ಗ ಡಬ್ಲಿಂಗ್: ಸಚಿವ ವಿ. ಸೋಮಣ್ಣ ಭರವಸೆ





ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 31 : ರೈಲ್ವೆ ಖಾತೆ ರಾಜ್ಯ ಸಚಿವರಾದ ನಂತರ ಮೊದಲ ಬಾರಿಗೆ ವಿ. ಸೋಮಣ್ಣನವರು ಶನಿವಾರ ಬೀದರ್ ಜಿಲ್ಲೆಗೆ ಭೇಟಿ ನೀಡಿದರು. ಹೈದರಾಬಾದ್‌ನಿಂದ ವಿಶೇಷ ರೈಲಿನಲ್ಲಿ ನಗರದ ರೈಲು ನಿಲ್ದಾಣಕ್ಕೆ ಆಗಮಿಸಿದರು. ಅಮೃತ ಭಾರತ ಯೋಜನೆಯಡಿ ಕೈಗೆತ್ತಿಕೊಂಡಿರುವ ನಗರದ ರೈಲು ನಿಲ್ದಾಣದ ನವೀಕರಣ ಕಾಮಗಾರಿಯನ್ನು ವೀಕ್ಷಿಸಿ ರೈಲ್ವೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬೀದರ್-ಹೈದರಾಬಾದ್ ನಡುವೆ ಸದ್ಯ ಏಕಪಥವಿದೆ. 120 ಕಿ.ಮೀ ಈ ರೈಲು ಮಾರ್ಗವನ್ನು ಡಬ್ಲಿಂಗ್ ಮಾಡಲು ಯೋಜಿಸಲಾಗಿದೆ. ಇದಕ್ಕಾಗಿ ?400 ಕೊಟಿ ಖರ್ಚು ಮಾಡಲಾಗುವುದು. ?1,700 ಕೋಟಿಯಲ್ಲಿ ಹೈದರಾಬಾದ್-ಬೀದರ್ ಮಾರ್ಗ ಮಧ್ಯದಲ್ಲಿ ಕವಚ ಯೋಜನೆ ಜಾರಿಗೆ ತರಲಾಗುವುದು. ಎಲ್ಲ ಅನುದಾನ ಕೇಂದ್ರ ಸರ್ಕಾರವೇ ಭರಿಸಲಿದೆ ಎಂದು ಹೇಳಿದರು.

ಹೈದರಾಬಾದ್-ಬೀದರ್-ಕಲಬುರಗಿ ನಡುವೆ ಡೆಮು ರೈಲು ಆರಂಭಿಸಲು ಚಿಂತನೆ ನಡೆದಿದೆ. ಬೀದರ್-ಮೆಟಲ್‌ಕುಂಟಾ ಮಧ್ಯದಲ್ಲಿ ?50 ಕೋಟಿಯಲ್ಲಿ ಸುಸಜ್ಜಿತ ನಿಲ್ದಾಣ ಸ್ಥಾಪಿಸಲು ಉದ್ದೇಶಿಸಲಾಗಿದೆ. ಬೀದರ್-ಹೈದರಾಬಾದ್, ಬೀದರ್-ಬೆಂಗಳೂರು ನಡುವೆ

(2ನೇ ಪುಟ ನೋಡಿ)

## ಭ್ರಷ್ಟ ಅಧಿಕಾರಿಗಳ ಮೇಲೆ ರಾಜ್ಯದ 7 ಜಿಲ್ಲೆಗಳಲ್ಲಿ ಲೋಕಾ ದಾಳಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.31: ರಾಜ್ಯದ ಏಳು ಜಿಲ್ಲೆಗಳಲ್ಲಿಂದು ಲೋಕಾಯುಕ್ತ ಅಧಿಕಾರಿಗಳ ತಂಡ ಏಕಾಏಕಿ ದಾಳಿ ನಡೆಸಿದ್ದು, ಭ್ರಷ್ಟ ಅಧಿಕಾರಿಗಳಿಗೆ ಬಿಸಿಮುಟ್ಟಿಸಿದೆ.

ಬೆಳಗಾವಿ, ಬಾಗಲಕೋಟೆ, ಬಳ್ಳಾರಿ ದಾವಣಗೆರೆ , ಉಡುಪಿ, ಗದಗ, ಧಾರವಾಡ ಜಿಲ್ಲೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳ ತಂಡ ಬೆಳ್ಳಂಬೆಳಗ್ಗೆ ದಾಳಿ ನಡೆಸಿದೆ.

ಬೆಳಗಾವಿ ಸುವರ್ಣ ಸೌಧದ ದೇವರಾಜ್ ಅರಸು ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಸಿದ್ದಲಿಂಗಪ್ಪ, ಬಾಗಲಕೋಟೆಯ ಜಿಲ್ಲಾಡಳಿತ ಕಚೇರಿ ಲೆಕ್ಕಪತ್ರ ವಿಭಾಗದ ಎಫ್‌ಡಿಎ ಶೈಲ ಸುಭಾಷ್ ತತ್ರಾಣಿ, ಬಳ್ಳಾರಿಯ ಕಾರ್ಯಪಾಲಕ ಎಂಜಿನಿಯರ್ ಅಮೀನ್ ಮುಕ್ತಾರ್ ಅಹಮದ್, ದಾವಣಗೆರೆಯ ಶಿಗ್ಗಾಂವಿ ಪಂಚಾಯಿತಿ ಪಿಡಿಓ (ಕಆಔ) ರಾಮಕೃಷ್ಣ, ಉಡುಪಿ ಜಿಲ್ಲೆ ಕಾರ್ಕಳದ ಮೆಸ್ಕಾಂ ಅಕೌಂ-ಟೆಂಟ್ ಗಿರೀಶ್ ರಾವ್, ಗದಗದ ನಿರ್ಮಿತಿ ಕೇಂದ್ರದ ಯೋಜನಾಧಿಕಾರಿ ಗಂಗಾಧರ, ಧಾರವಾಡದ ಪಿಡಬ್ಲುಡಿ ಮುಖ್ಯ ಇಂಜಿನಿಯರ್ ಹೆಚ್.ಸುರೇಶ್ ಅವರ ಮನೆ, ಕಚೇರಿಗಳ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ.

ಗದಗ:ಗದಗ ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಮನೆ ಗಂಗಾಧರ ಶಿರೋಳ ಅವರ ಮನೆ, ಕಚೇರಿ ಹಾಗೂ ಅಳಿಯ, ಭಾವನ ಮನೆಗಳು ಸೇರಿ 6 ಕಡೆ ಲೋಕಾಯುಕ್ತ ತಂಡ ದಾಳಿ ನಡೆಸಿದೆ. ಗದಗ ನಗರದ ಅಳಿಯ ವಿಜಯ ಯಳಮೇಲಿ, ಭಾವ ನಾಗರಾಜ್ ಅಕ್ಕಿಮನೆ, ವಿಜಯನಗರ ಜಿಲ್ಲೆಯ ಹೂವಿನ ಹಡಗಲಿ ಹಾಗೂ ಹಾವೇರಿ ಜಿಲ್ಲೆಯಲ್ಲಿ ಸಂಬಧಿಕರ ಮನೆ ಮೇಲೆ ಲೋಕಾಯುಕ್ತ ಎಸ್ಪಿ ಹಣಮಂತರಾಯ, ಡಿವೈಎಸ್ಪಿ ವಿಜಯ ಬಿರಾದಾರ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಈ ವೇಳೆ ಅಪಾರ ಪ್ರಮಾಣದ

(2ನೇ ಪುಟ ನೋಡಿ)

## ಆಪರೇಷನ್ ಸಿಂಧೂರ ರಾಷ್ಟದ ಶಕ್ತಿಯ ಸಂಕೇತ: ಪ್ರಧಾನಿ



ಮಲ್ಲಮ್ಮ ನುಡಿ ವಾರ್ತೆ ಭೋಪಾಲ್: ಮೇ.31:ಪಾಕಿಸ್ತಾನದ ಗುಂಡಿನ ದಾಳಿಗಳಿಗೆ ಫಿರಂಗಿ ಗುಂಡುಗಳ ಮೂಲಕವೇ ನಾವು ಉತ್ತರಿಸುತ್ತೇವೆ ಎಂಬುದಕ್ಕೆ ಆಪರೇಷನ್ ಸಿಂಧೂರ ಸ್ಪಷ್ಟ ನಿರ್ದಶನವಾಗಿದೆ. ಇದು ರಾಷ್ಟದ ಶಕ್ತಿಯ ಸಂಕೇತವಾಗಿ ನಿಂತಿದೆ ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದರು. ಭೋಪಾಲ್‌ನಲ್ಲಿ ಲೋಕಮಾತಾ ದೇವಿ ಅಹಲ್ಯಾಬಾಯಿ ಮಹಿಳಾ ಸಶಕ್ತಿಕರಣ ಮಹಾ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಆಪರೇಷನ್ ಸಿಂಧೂರ ಭಯೋತ್ಪಾದನೆಯ ವಿರುದ್ಧದ ಅತಿದೊಡ್ಡ ದಾಳಿಯಾಗಿದೆ. ಪಾಕಿಸ್ತಾನದ ಗುಂಡಿನ ದಾಳಿಗಳಿಗೆ ಫಿರಂಗಿ ಗುಂಡುಗಳ ಮೂಲಕವೇ ಉತ್ತರಿಸುತ್ತೇವೆ ಎಂಬುದಕ್ಕೆ ಸ್ಪಷ್ಟ ನಿರ್ದಶನ ಆಗಿದೆ. ಇದು ರಾಷ್ಟದ ಶಕ್ತಿಯ ಸಂಕೇತವಾಗಿ ನಿಂತಿದೆ ಎಂದು ?ಆಪರೇಷನ್ ಸಿಂಧೂರ'ವನ್ನ ಬಣ್ಣಿಸಿದರು. ಭಾರತದ ಪ್ರತಿಕ್ರಿಯೆಯು ದೇಶದ ಸಾಮೂಹಿಕ ಸಂಕಲ್ಪವನ್ನು ಪ್ರತಿಬಿಂಬಿಸುವ ಜೊತೆಗೆ 140 ಕೋಟಿ ಭಾರತೀಯರ ಧ್ವನಿಯಾಗಿದೆ. ನೀವು ಗುಂಡು ಹಾರಿಸಿದ್ರೆ ಅದರ ಪರಿಣಾಮಗಳನ್ನು ಎದುರಿಸಲು ಸಿದ್ಧವಾಗಿರಿ ಎಂದು ಪಾಕ್ ಮತ್ತು ಪಾಕ್ ಪ್ರಾಯೋಜಿತ ಭಯೋತ್ಪಾದಕರಿಗೆ ಖಡಕ್ ಎಚ್ಚರಿಕೆ ನೀಡಿದರು. ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಭಾರತೀಯರ ರಕ್ತ ಹರಿಸಿದ್ದಲ್ಲದೇ, ನಮ್ಮ ಸಂಸ್ಕೃತಿಯ ಮೇಲೂ ದಾಳಿ ಮಾಡಿದ್ದಾರೆ. ಉಗ್ರರು ನಮ್ಮ ಸಮಾಜವನ್ನು ವಿಭಜಿಸಲು ಪ್ರಯತ್ನಿಸುವುದರ ಜೊತೆಗೆ ದೇಶದ ಮಹಿಳಾ ಶಕ್ತಿ (ನಾರಿ ಶಕ್ತಿಗೆ) ಗೆ ಸವಾಲು ಹಾಕುವ ಧೈರ್ಯ ಮಾಡಿದರು. ಇದೇ ಸವಾಲು ಉಗ್ರರು ಮತ್ತು ಅವರನ್ನು ಪೋಷಿಸುವವರಿಗೆ ಮರಣದಂಡನೆಯಾಗಿದೆ. ಪಾಕಿಸ್ತಾನ ಸೇನೆ ಊಹಿಸಲೂ ಸಾಧ್ಯವಾಗದಷ್ಟರ ಮಟ್ಟಿಗೆ ನಮ್ಮ ಸೇನೆಯು ಉಗ್ರರ ಅಡಗುತಾಣಗಳನ್ನು ನಾಶಪಡಿಸಿದೆ ಮೋದಿ ಸೇನಾ ಸಾಹಸವನ್ನ ಕೊಂಡಾಡಿದರು. ಇದೇ ವೇಳೆ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಮಹಿಳಾ ಅಧಿಕಾರಿಗಳ ಪಾತ್ರವನ್ನು ಒತ್ತಿ ಹೇಳಿದರು. ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಕೊಡುಗೆಯನ್ನು ಶ್ಲಾಘಿಸಿದರು. ಜೊತೆಗೆ ರಾಜಸ್ಥಾನದಿಂದ ಗುಜರಾತ್‌ವರೆಗೆ ನಮ್ಮ ಬಿಎಸ್‌ಎಫ್ ಹೆಣ್ಣುಮಕ್ಕಳು ಮುಂಚೂಣಿಯಲ್ಲಿ ನಿಂತು ಕಾರ್ಯನಿರ್ವಹಿಸಿದರು. ಉಗ್ರರ ಗುಂಡಿ ದಾಳಿಗೆ ಸೂಕ್ತ ಉತ್ತರವನ್ನೂ ನೀಡಿದ್ರು ಅಂತ ಮಹಿಳಾ ಅಧಿಕಾರಿಗಳ ಶೌರ್ಯ, ಸಾಹಸವನ್ನು ಬಣ್ಣಿಸಿದರು.

ಒಂದನೇ ಪುಟದಿಂದ

## ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತಮ ಫಲಿತಾಂಶ: ಸಿಎಂ

ಪರಿಶೀಲನೆ ನಡೆಸುತ್ತಿದ್ದರೆ ಪರಿಸ್ಥಿತಿ ಸುಧಾರಿಸಬಹುದು ಎಂದು ಸಚಿವ ಕೃಷ್ಣಬೈರೇಗೌಡರು ಸೂಚನೆ ನೀಡಿದರು.

ಎಸ್‌ಎಲ್‌ಎಒ ಗಳ ಪ್ರಾಕ್ಟೀಸ್ ಅಷ್ಟು ಸರಿ ಇಲ್ಲ. ಮಾರುಕಟ್ಟೆ ಬೆಲೆ, ಗೈಡೆನ್ಸ್ ಬೆಲೆಗೂ ಇವರು ತರುವ ಬೆಲೆಗೂ ಯದ್ವಾ ತದ್ವಾ ವ್ಯತ್ಯಾಸ ಇರುತ್ತದೆ. ಇದು ಸರ್ಕಾರದ ಮೇಲೆ ಅನಗತ್ಯ ಹೊರೆ ಬೀಳುತ್ತದೆ. ಇದರಲ್ಲಿ ಎಸ್ ಎಲ್ ಎ ಒ ಗಳ ವರ್ತನೆಗಳು, ಪ್ರಾಕ್ಟೀಸ್ ಸರಿ ಇಲ್ಲ. ಹೀಗಾಗಿ ಇವರನ್ನು ಜಿಲ್ಲಾಧಿಕಾರಿಗಳ ಅಧೀನಕ್ಕೆ ತರುವುದು ಉತ್ತಮ ಎನ್ನುವ ಅಭಿಪ್ರಾಯವನ್ನು ಸಭೆಯಲ್ಲಿ ಸಚಿವರುಗಳು ಮತ್ತು ಅಧಿಕಾರಿಗಳು ಅಭಿಪ್ರಾಯ ವ್ಯಕ್ತಪಡಿಸಿದರು. ಮುಖ್ಯಮಂತ್ರಿಗಳು ಈ ಬಗ್ಗೆ ಸಮಗ್ರ ಪರಿಶೀಲನೆ ಮಾಡಿ ಜಿಲ್ಲಾಧಿಕಾರಿಗಳ ಅಧೀನಕ್ಕೆ ತರುವಂತೆ ಸೂಚನೆ ನೀಡಿದರು.

ಅನರ್ಹ ಪಡಿತರ ಚೀಟಿದಾರರ ಸಂಖ್ಯೆ ವಿಪರೀತ ಹೆಚ್ಚುತ್ತಿರುವುದಕ್ಕೆ ಕಾರಣ ಏನು? ವೈಜ್ಞಾನಿಕ ಅಂಕಿಅಂಶಗಳು ಬೇರೆಯೇ ಹೇಳುತ್ತಿವೆ. ಯಾವ ಜಿಲ್ಲೆಯಲ್ಲೂ ಶೇ60 ಕ್ಕಿಂತ ಹೆಚ್ಚು ಅರ್ಹರು ಇರಲು ಸಾಧ್ಯವಿಲ್ಲ. ಇದರಲ್ಲಿ ಸ್ವಲ್ಪ ಪ್ರಮಾಣದಲ್ಲಿ ವ್ಯತ್ಯಾಸ ಇರಬಹುದು. ಆದರೆ ಶೇ.80, ಶೇ.90 ಅಂತೆಲ್ಲಾ ಇದ್ದರೆ ಅದನ್ನು ಯಾವ ಮಾನದಂಡದಲ್ಲೂ ಒಪ್ಪಲು ಸಾಧ್ಯವಿಲ್ಲ. ಇದರಿಂದ ದೊಡ್ಡ ಅನ್ಯಾಯ ಆಗುವುದು ನಿಜವಾದ ಅರ್ಹರಿಗೆ. ಅರ್ಹರಿಗೆ ಅನ್ಯಾಯ ಆಗುವುದನ್ನು ತಡೆಯಲು ನಕಲಿ, ಡೂಪ್ಲಿಕೇಟ್ ಮತ್ತು ಅನರ್ಹ ಕಾರ್ಡಗಳನ್ನು ತಡೆಯಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು.

ಶಿಕ್ಷಕರು, ಸರ್ಕಾರಿ ನೌಕರರ ಬಳಿಯೂ ಬಿಪಿಎಲ್ ಪಡಿತರ ಚೀಟಿಗಳಿವೆ. ಇವರಲ್ಲಿ ಹಲವರು ಪಡಿತರ ಪಡೆಯುವುದಿಲ್ಲ. ಆದರೆ ಆಸ್ಪತ್ರೆಗಳಿಗೆ ಹೋಗಲು ಮತ್ತು ಇನ್ನಿತರೆ ಅಗತ್ಯಗಳಿಗೆ ಕಾರ್ಡಗಳನ್ನು ಬಳಸುತ್ತಿದ್ದಾರೆ ಎನ್ನುವ ಮಾಹಿತಿಯನ್ನು ಅಧಿಕಾರಿಗಳು ಸಭೆಗೆ ನೀಡಿದರು.

ಅರ್ಹರು ಯಾವುದೇ ಕಾರಣಕ್ಕೂ ತಪ್ಪಬಾರದು. ಅರ್ಹರಿಗೆ ಸವಲತ್ತು ತಪ್ಪಬಾರದು, ಸಮಸ್ಯೆ ಆಗಬಾರದು. ಆದರೆ ಅರ್ಹರಿಗೆ ಸಮಸ್ಯೆ ಆಗದಂತೆ ಅನರ್ಹ ಕಾರ್ಡಗಳನ್ನು ರದ್ದಾಗುವ ದಿಕ್ಕಿನಲ್ಲಿ ಏನೇನು ಮಾಡಬಹುದು ಎನ್ನುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ಉತ್ತರ ಕೇಳಿದರು. ನಿಮ್ಮ ಪ್ರಾಯೋಗಿಕ ಅನುಭವದಲ್ಲಿ ಏನೇನು ಸಮಸ್ಯೆಗಳನ್ನು ಎದುರಿಸಿದ್ದೀರಿ, ಈ ಸಮಸ್ಯೆಗಳ ಪರಿಹಾರಕ್ಕೆ ಏನೇನು ಕ್ರಮ ಕೈಗೊಂಡಿದ್ದೀರಿ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

ಜಿಲ್ಲಾಧಿಕಾರಿಗಳು ನಿಯಮಿತವಾಗಿ ಡೈರಿ ಬರೆಯುವ ಅಭ್ಯಾಸ ಮಾಡಿಕೊಳ್ಳಬೇಕು, ಆ ಡೈರಿಯಲ್ಲಿ ಫೀಲ್ಡ್ ವರ್ಕ್ ಅನುಭವಗಳು, ಸಮಸ್ಯೆಗಳು, ಪರಿಹಾರ ಎಲ್ಲದರ ಬಗ್ಗೆಯೂ ಉಲ್ಲೇಖವಿರಬೇಕು ಎಂದು ಕಳೆದ ವರ್ಷದ ಸಭೆಯಲ್ಲಿ ಮತ್ತು ಎಲ್ಲಾ ಕೆಡಿಪಿ ಸಭೆಗಳಲ್ಲಿ ನಾನು ಸೂಚನೆ ನೀಡಿದ್ದೆ. ಇನ್ನೂ ಕೆಲವರು ಸಮರ್ಪಕವಾಗಿ ಡೈರಿಗಳನ್ನು ಬರೆದಿಲ್ಲ ಎನ್ನುವ ಮಾಹಿತಿ ಇದೆ. ನೀವು ಬರೆದ ಡೈರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಬಂದರೆ ನಾನೂ ಗಮನಿಸಬಹುದು ಎಂದು ಸೂಚನೆ ನೀಡಿದರು.

ಯುವನಿಧಿ ಫಲಾನುಭವಿ ನಿರುದ್ಯೋಗಿಗಳಿಗೆ ಉದ್ಯೋಗ, ತರಬೇತಿ ಸಿಗಬೇಕು. ಮಾರುಕಟ್ಟೆಯ ಬೇಡಿಕೆಗೆ ತಕ್ಕಂತೆ ತರಬೇತಿ ನೀಡಿ, ಉದ್ಯೋಗ ಕೈಗೆ ಸಿಗುವಂತಾಗಬೇಕು. ತರಬೇತಿ ಪಡೆದವರೆಲ್ಲರಿಗೂ ಉದ್ಯೋಗ ಸಿಗದೇ ಹೋಗಬಹುದು. ಆದರೆ ತರಬೇತಿ ಮಾತ್ರ ಹೆಚ್ಚೆಚ್ಚು ನಿರುದ್ಯೋಗಿ ಮತ್ತು ಯುವನಿಧಿ ಫಲಾನುಭವಿಗಳಿಗೆ ನೀಡಬೇಕು.

ಕುರಿಗಾಹಿಗಳ ಮೇಲೆ ಅರಣ್ಯ ಇಲಾಖೆಯವರು ಅವೈಜ್ಞಾನಿಕವಾಗಿ ಕೇಸು ದಾಖಲಿಸುವುದು ಮತ್ತು ಅನಗತ್ಯ ತೊಂದರೆ ಕೊಡುವ ಬಗ್ಗೆ ವರದಿಗಳು, ದೂರುಗಳು ಬಂದಿವೆ. ಇದನ್ನು ನಿಲ್ಲಿಸಬೇಕು. ಕುರಿಗಳು ತಲೆ ಎತ್ತಿ ಮೇಯುವುದಿಲ್ಲ. ಅವು ತಲೆ ಬಗ್ಗಿಸಿಕೊಂಡು ಮೇಯುವುದರಿಂದ ಅರಣ್ಯ ಸಿಬ್ಬಂದಿಯ ತಪ್ಪು ಗ್ರಹಿಕೆಯಿಂದ ಕುರಿಗಾಹಿಗಳಿಗೆ ತೊಂದರೆ ಆಗುತ್ತಿದೆ ಇದನ್ನು ತಪ್ಪಿಸಲು ಸೂಚಿಸಿದರು.

ನೀವೆಲ್ಲಾ ಯುವ ಜಿಲ್ಲಾಧಿಕಾರಿಗಳಿದ್ದೀರಿ. ನಿಮಗೆ ಫೀಲ್ಡ್ ಎಕ್ಸ್‌ಪೀರಿಯನ್ಸ್ ಚನ್ನಾಗಿ ಇರುತ್ತದೆ. ನೀವು ಕೆಲಸ ಮಾಡುವ ಜಿಲ್ಲೆಗಳಲ್ಲಿ ಹೆಜ್ಜೆ ಗುರುತುಗಳನ್ನು ಉಳಿಸಿ ಹೋಗುವ ದಿಕ್ಕಿನಲ್ಲಿ ಇನ್ನೋವೇಟೀವ್ ಆಗಿ ಕೆಲಸ ಮಾಡಿ ತೋರಿಸಿ. ನಿಮ್ಮ ಹೆಸರು ಜಿಲ್ಲೆಗಳಲ್ಲಿ, ರಾಜ್ಯದಲ್ಲಿ ಅಚ್ಚಳಿಯದೆ ಉಳಿಯುವ ರೀತಿಯಲ್ಲಿ ದಾಖಲೆ ಮಾಡಿ ತೋರಿಸಿ ಎಂದು ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಹುರಿದುಂಬಿಸಿದರು.

ಕುರಿಗಾಹಿಗಳಿಗೆ ಕುರಿಗಳ ಮತ್ತು ತಮ್ಮ ಜೀವದ ರಕ್ಷಣೆಗೆ ಬಂದೂಕು ಪರವಾನಗಿ ಕೊಡಬೇಕು ಎಂದು ಸೂಚಿಸಿದ್ದೆ. ಇದಿನ್ನೂ ಕೆಲವು ಕಡೆ ಜಾರಿಗೆ ಬಂದಿಲ್ಲ. ಕುರಿಗಳ್ಳರು ಕುರಿಗಳನ್ನು ಕದಿಯುವ ಜೊತೆಗೆ, ಕುರಿಗಾಹಿಗಳನ್ನು ಕೊಲೆ ಮಾಡಿರುವ ಘಟನೆಗಳೂ ಕೂಡ ನಡೆದಿವೆ. ಹೀಗಾಗಿ ಬಂದೂಕು ಪರವಾನಗಿ ಕೊಡುವುದನ್ನು ಸಮರ್ಪಗೊಳಿಸಬೇಕು ಎನ್ನುವ ಸೂಚನೆ ನೀಡಿದರು. ಈ ವೇಳೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು, ಕುರಿಗಾಹಿಗಳಿಗೆ ಬಂದೂಕು ನೀಡುವ ಕಾರ್ಯದ ಬಗ್ಗೆ ನಿಗಾ ಇಡಲು ಹಿರಿಯ ಅಧಿಕಾರಿಯೊಬ್ಬರನ್ನು ನಿಯೋಜಿಸುವುದಾಗಿ ತಿಳಿಸಿದರು.

ಉತ್ತರ ಕರ್ನಾಟಕ ಭಾಗದ ಹಲವು ಜಿಲ್ಲೆಗಳಲ್ಲಿ ಜಿಂಕೆಗಳಿಂದ ರೈತರ ಬೆಳೆಗಳಿಗೆ ಹಾನಿ ಉಂಟಾಗುತ್ತಿದೆ. ಇದನ್ನು ತಡೆಯಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು.

ರಾಜ್ಯದಲ್ಲಿ 15,16,731 ಎಕ್ರೆ ಅರಣ್ಯೀಕರಣಕ್ಕೆ ಜಮೀನು ಲಭ್ಯವಿದೆ. 8.5 ಕೋಟಿ ಸಸಿಗಳನ್ನು ಕಳೆದ ಎರಡು ವರ್ಷಗಳಲ್ಲಿ ನೆಡಲಾಗಿದೆ. ಪ್ರತಿ ವರ್ಷ ಎಷ್ಟು ಎಕ್ರೆ ಅರಣ್ಯೀಕರಣವಾಗಿದೆ? ಕಳೆದ 10ವರ್ಷಗಳಲ್ಲಿ ಎಷ್ಟು ಎಕ್ರೆ ಅರಣ್ಯೀಕರಣ ಮಾಡಲಾಗಿದೆ ಎಂಬ ಮಾಹಿತಿಯನ್ನು ಒದಗಿಸಬೇಕು.ಅರಣ್ಯೀಕರಣಕ್ಕೆ ಲಭ್ಯವಿರುವ ಜಮೀನಿನಲ್ಲಿ ಸಂಪೂರ್ಣ ಸಸಿಗಳನ್ನು ನೆಡಲು ಕ್ರಿಯಾ ಯೋಜನೆ ಸಿದ್ಧಪಡಿಸಿ, ಹಂತ ಹಂತವಾಗಿ ಅನುಷಾ??ನಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.ಆನೆ ಮತ್ತು ಮಾನವ ಸಂಘರ್ಷ ತಡೆಯಲು ಸಮರ್ಪಕ ಕ್ರಮಗಳನ್ನು ಕೈಗೊಳ್ಳಬೇಕು. ಆನೆ ಕಾರ್ಯಪಡೆಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ಆನೆಗಳಿಗೆ ಸರಿಯಾದ ಆಹಾರ ಕಾಡಿನಲ್ಲೇ ಲಭ್ಯವಾಗುವಂತೆ ಮಾಡಬೇಕು. ಇದಕ್ಕೆ ಪೂರಕವಾಗಿ ಲಂಟಾನಾ ಕಳೆಗಳನ್ನು ತೆಗೆಯುವ ಕೆಲಸವಾಗಬೇಕು. ಇದೇ ರೀತಿ ಕುಡಿಯುವ ನೀರಿನ ಲಭ್ಯತೆಯೂ ಕಾಡಿನಲ್ಲಿ ಸಾಕಷ್ಟು ಪ್ರಮಾಣದಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.ಆನೆ, ಮಾನವ ಸಂಘರ್ಷಕ್ಕೆ ಊಂಟಜಥಿ ಯೋಜನೆ: ಸಚಿವ ಲಾಡ್‌ರಾಜ್ಯದಲ್ಲಿ ಹಲವು ಕಡೆ ಮಾನವ ಪ್ರಾಣಿ ಸಂಘರ್ಷದ ವೇಳೆ ಪ್ರಾಣಹಾನಿ ಆಗಿರುವ ಬಗ್ಗೆ ಮತ್ತು ಇದಕ್ಕೆ ವೈಜ್ಞಾನಿಕ ಪರಿಹಾರ ಒದಗಿಸುವ ಬಗ್ಗೆ ಗಂಭೀರ ಚರ್ಚೆ ಸಭೆಯಲ್ಲಿ ನಡೆಯಿತು. ಈ ವೇಳೆ ಸಚಿವ ಸಂತೋಷ್ ಲಾಡ್ ಅವರು, "ಊಂಟಜಥಿ ಜಿಜಟಿಭಿಟಿರ, ಜೇನು ಕೃಷಿ" ಬಗ್ಗೆ ಮುಖ್ಯಮಂತ್ರಿಗಳಿಗೆ ವಿವರಿಸಿದರು.

ಆನೆಗಳು ಜೇನು ನೊಣ ಇರುವ ಪ್ರದೇಶಕ್ಕೆ ಬರುವುದಿಲ್ಲ. ಹೀಗಾಗಿ ಆನೆ ಬ್ಯಾರಿಕೇಡ್ ಹಾಕಿರುವ ಮಾರ್ಗದುದ್ದಕ್ಕೂ ಜೇನು ಕೃಷಿ ಮಾಡಿದರೆ ರೈತರಿಗೂ ಅನುಕೂಲ, ಆನೆಗಳ ಕಾಟವೂ ತಪ್ಪುತ್ತದೆ ಎಂದು ವಿವರಿಸಿದರು.

ಸಣ್ಣ ನೀರಾವರಿ ಇಲಾಖೆ ಕೆರೆಗಳಲ್ಲಿ ಮೀನು ಸಾಕಣೆ ಮತ್ತು ಹರಾಜು ಪ್ರಕ್ರಿಯೆಯನ್ನು ಇ ಟೆಂಡರ್ ಮೂಲಕ ನಿರ್ವಹಿಸಬೇಕು. ಕೆರೆಗಳ ಅಭಿವೃದ್ಧಿ ಮಾಡಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ಇದು ಆದಾಯದ ಮೂಲವೂ ಆಗುತ್ತದೆ ಎಂದು ತಿಳಿಸಿದರು.ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವರಾದ ಕೆ.ಹೆಚ್.ಮುನಿಯಪ್ಪ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ.ಪಾಟೀಲ, ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್, ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ಇಂಧನ ಸಚಿವರಾದ ಕೆ.ಜೆ.ಜಾರ್ಜ್, ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರಾದ ಪ್ರಿಯಾಂಕ್ ಖರ್ಗೆ, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಸಚಿವರಾದ ಮಧುಬಂಗಾರಪ್ಪ, ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಡಾ.ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ರಾಜಕೀಯ ಸಚಿವರಾದ ಗೋವಿಂದರಾಜು ಸೇರಿದಂತೆ ವಿವಿಧ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಉಪಸ್ಥಿತರಿದ್ದರು.

## ಮಾಡಿದ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ

ಯೋಜನೆಯಡಿ 24.35 ಕೋಟಿ ರೂಪಾಯಿ ವೆಚ್ಚದಲ್ಲಿ ಬೀದರ ರೈಲ್ವೆ ನಿಲ್ದಾಣದ ಪುನಾರಾಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿ, ಶೀಘ್ರವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು ಹಾಗೂ ನಿಲ್ದಾಣದಲ್ಲಿ ನಡೆಯುತ್ತಿರುವ 12 ಮೀಟರ ಅಗಲದ ಪಾದಚಾರಿ ಮೇಲ್ಸೇತುವೆ, ಲಿಫ್ಟ್, ಎಸ್ಕಲೇಟರಗಳು, ಬುಕ್ಕಿಂಗ್ ಕೌಂಟರ್, ಪಾರ್ಕಿಂಗ್ ಮತ್ತು ಸುತ್ತಮುತ್ತಲಿನ ಪ್ರದೇಶದ ಕಾಮಗಾರಿ ಪರಿಶೀಲನೆ ಹಾಗೂ ಪ್ರಯಾಣಿಕರ ಲಭ್ಯವಿರುವ ಸೌಲಭ್ಯಗಳು, ಪ್ರಯಾಣಿಕರು ಸುಗಮ ಸಂಚಾರ, ಸುರಕ್ಷಿತೆ ಮತ್ತು ಭದ್ರತೆಗಾಗಿ ಅಧಿಕಾರಿಗಳು ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು.ಈ ಕಾಮಗಾರಿಗಳು ಗಮನಾರ್ಹ ರಚನಾತ್ಮಕ ಬದಲಾವಣೆಗಳನ್ನು ಒಳಗೊಂಡಿರುವುದರಿಂದ ಜನಸಂದಣಿ ನಿರ್ವಹಣೆ , ಭದ್ರತಾ ವ್ಯವಸ್ಥೆ, ಈ ಕಾಮಗಾರಿಗಳಿಂದ ಪ್ರಯಾಣಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ಇದಕ್ಕೂ ಮೊದಲು ಸಿಕಿಂದರಾಬಾದ ವಿಭಾಗದ ನಾಗಲಪಲ್ಲಿ–ಬೀದರ ವಿಂಡೋ ಟ್ರೈಲಿಂಗ್ ತಪಾಸಣೆ ನಡೆಸಿದರು.ಈ ಸಂದರ್ಭದಲ್ಲಿ ಸಂಸದರಾದ ಸಾಗರ ಈಶ್ವರ ಖಂಡ್ರೆ, ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್. ಪಾಟೀಲ್, ಬಸವಕಲ್ಯಾಣ ಶಾಸಕರಾದ ಶರಣು ಸಲಗಾರ, ಮಾಜಿ ಸಚಿವರಾದ ಬಂಡೆಪ್ಪ ಕಾಶಂಪೂರೆ ಸೇರಿದಂತೆ ಸ್ಥಳೀಯ ನಾಯಕರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದರು.

## ಡಬ್ಲಿಂಗ್: ಸಚಿವ ವಿ. ಸೋಮಣ್ಣ ಭರವಸೆ

ವಂದೇ ಭಾರತ್ ಆರಂಭಿಸಬೇಕೆಂಬ ಬೇಡಿಕೆ ಇದೆ. ಅದನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಸಿಕಂದರಾಬಾದ್‌ನಿಂದ ಬೀದರ್‌ವರೆಗೆ 50 ಎಲ್‌ಸಿ ಗೇಟ್‌ಗಳು ಬರುತ್ತವೆ. ಮೂರು ವರ್ಷಗಳಲ್ಲಿ ಇವುಗಳನ್ನು ಮುಚ್ಚುವಂತೆ ಸೂಚಿಸಲಾಗಿದೆ. ಎಲ್ಲ ಕಡೆಗಳಲ್ಲಿ ಕೆಳಸೇತುವೆ ಹಾಗೂ ಮೇಲ್ಸೇತುವೆ ನಿರ್ಮಿಸಲಾಗುವುದು ಎಂದು ಹೇಳಿದರು. ಪೌರಾಡಳಿತ ಸಚಿವ ರಹೀಂ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಡಾ. ಸಿದ್ದಲಿಂಗಪ್ಪ ಪಾಟೀಲ ಮತ್ತಿತರರು ಹಾಜರಿದ್ದರು.ಕಮಲ್ ಹಾಸನ್ ವಿಷಾದ ವ್ಯಕ್ತಪಡಿಸದಿರುವುದು ಸರಿಯಲ್ಲ 'ತಾನು ಏನು ಮಾತನಾಡಿದ್ದೇನೆ ಅದರ ಬಗ್ಗೆ ವಿಷಾದ ವ್ಯಕ್ತಪಡಿಸದೇ ಇರುವ ನಟ ಕಮಲ್ ಹಾಸನ್‌ಅವರ ನಿಲುವು ಸರಿಯಾದುದಲ್ಲ' ಎಂದು ಸಚಿವ ವಿ. ಸೋಮಣ್ಣ ಹೇಳಿದರು. ಇದು ಒಕ್ಕೂಟ ವ್ಯವಸ್ಥೆಯ ದೇಶ ಯಾರು ಕೂಡ ಯಾರ ಬಗ್ಗೆಯೂ ಹಗುರವಾಗಿ ಮಾತನಾಡುವುದು ಸರಿಯಲ್ಲ ಎಂದರು.ಸಿಎಂಗೆ ಪತ್ರ–ಸೋಮಣ್ಣ 'ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಜನೌಷಧಿ ಕೇಂದ್ರಗಳನ್ನು ಮುಚ್ಚದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದೇನೆ' ಎಂದು ಸಚಿವ ವಿ. ಸೋಮಣ್ಣ ಹೇಳಿದರು. ಅನಂತಕುಮಾರ ಅವರು ಹಿಂದೆ ಕೇಂದ್ರ ಸಚಿವರಿದ್ದಾಗ ಜನೌಷಧಿ ಕೇಂದ್ರಗಳನ್ನು ಆರಂಭಿಸಿದ್ದರು. ಅವುಗಳು ಜೀವರಕ್ಷಕದಂತೆ ಕೆಲಸ ನಿರ್ವಹಿಸುತ್ತಿವೆ. ಅವುಗಳನ್ನು ಬಂದ್ ಮಾಡಿದರೆ ಯಾವುದೇ ಪ್ರಯೋಜನವಿಲ್ಲ ಎಂದರು.

## 7 ಜಿಲ್ಲೆಗಳಲ್ಲಿ ಲೋಕಾ ದಾಳಿ

ಚಿನ್ನಾಭರಣ, ಬೆಳ್ಳಿ, ವಾಹನಗಳು, ಆಸ್ತಿಪತ್ರಗಳು ದೊರೆತಿದ್ದು ಶೋಧ ಕಾರ್ಯ ಮುಂದುವರಿದಿದೆ.ಕಲಬುರಗಿ:ಕಲಬುರಗಿ ನಗರದ ಹುಸೇನಿ ಗಾರ್ಡನ್ ಬಡಾವಣೆಯಲ್ಲಿರುವ ಬಳ್ಳಾರಿ ಲೋಕೋಪಯೋಗಿ

ಇಲಾಖೆಯ ಸರ್ಕಲ್ ಆಫೀಸ್ ಅಧೀಕ್ಷಕ ಇಂಜಿನಿಯರ್ ಅಮೀನ್ ಮುಕ್ತಾರ್ ನಿವಾಸದ ಮೇಲೆ ಇಂದು ನಸುಕಿನಲ್ಲೇ

ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕಲಬುರಗಿ ಮೂಲದವರೇ ಆಗಿರುವ ಅಮೀನ್ ಮುಕ್ತಾರ್ ಈ ಹಿಂದೆ ಇದೇ ಇಲಾಖೆಯ ಎಕ್ಸಿಕ್ಯುಟಿವ್ ಇಂಜಿನಿಯರ್ ಆಗಿ ಸಹ ಸೇವೆ ಸಲ್ಲಿಸಿದ್ದಾರೆ. ಇಂದು ನಸುಕಿನಲ್ಲಿ ಮನೆಯ ಬಾಗಿಲು ತಟ್ಟಿದ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ಮುಂದಯವರೆಸಿದ್ದು, ಅಮೀನ್ ಅವರ ಸಹೋದರ ಡಾ.ಆರೀಫ್ ಅವರಿಗೆ ಸೇರಿದ ಏಷ್ಯನ್ ಲೈಫ್ ಸ್ಟೈಲ್ ಅಪಾರ್ಟ್‌ಮೆಂಟ್ ಮೇಲೆ ಸಹ ದಾಳಿ ನಡೆಸಿದ್ದಾರೆ. ಇದರ ಜೊತೆಗೆ, ಬಳ್ಳಾರಿ ಮತ್ತು ಬಸವಕಲ್ಯಾಣದಲ್ಲೂ ದಾಳಿ ನಡೆದಿದೆ. ಆದಾಯಕ್ಕೂ ಹೆಚ್ಚು ಆಸ್ತಿ ಗಳಿಕೆ ಆರೋಪದ ಅಡಿ ಲೋಕಾಯುಕ್ತ ಅಧಿಕಾರಿಗಳು

ದಾಳಿ ಕೈಗೊಂಡಿದ್ದಾರೆ. ಬಾಗಲಕೋಟೆ:ಇಲ್ಲಿನ ಜಿಲ್ಲಾಡಳಿತ ಕಚೇರಿ ಲೆಕ್ಕಪತ್ರ ವಿಭಾಗದ ಎಫ್‌ಡಿಎ ಶ್ರೀಶೈಲ್ ತತ್ರಾಣಿ ಅವರ ಅಮೀನಗಢ ಪಟ್ಟಣದಲ್ಲಿರುವ ಮನೆ ಹಾಗೂ ಆಭರಣ ಮಳಿಗೆ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಬಾಗಲಕೋಟೆ ಲೋಕಾಯುಕ್ತ ಡಿಎಸ್‌ಪಿ ನೇತೃತ್ವದಲ್ಲಿ ದಾಳಿ ನಡೆದಿದ್ದು, ಮಹತ್ವದ ದಾಖಲೆಗಳು ಪತ್ತೆಯಾಗಿವೆ ಎಂದು ತಿಳಿದುಬಂದಿದೆ. ಹಾವೇರಿ:ಹಾವೇರಿ ಜಿಲ್ಲೆ ಶಿಗ್ಗಾಂವಿ ತಾಲ್ಲೂಕಿನ ಬಾಡ ಗ್ರಾಮ ಪಂಚಾಯತಿ ಕಚೇರಿಯ ಮೇಲೆ ದಾಳಿ ಮಾಡಿದ್ದಾರೆ. ಗ್ರಾಮ ಪಂಚಾಯತಿ ಪಿಡಿಓ ರಾಮಕೃಷ್ಣಪ್ಪ ಗುಡಗೇರಿ ಎಂಬ ಪಿಡಿಓ ಸಂಬಂಧಿಸಿದ ಮನೆ ಮತ್ತು ಕಚೇರಿಯಲ್ಲಿ ದಾಖಲೆಗಳನ್ನ ಪರಿಶೀಲನೆ ನಡೆಸಿದ್ದಾರೆ.

ಧಾರವಾಡದ ಮನೆ ಮತ್ತು ಬಾಡ ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ದಾವಣಗೆರೆ ಮತ್ತು ಹಾವೇರಿ ಲೋಕಾಯುಕ್ತರ ಪೊಲೀಸ್ ಸಿಬ್ಬಂದಿ ದಾಖಲೆಗಳನ್ನ ಪರಿಶೀಲನೆ ನಡೆಸಿದ್ದಾರೆ. ಇದರೊಂದಿಗೆ ಬಳ್ಳಾರಿ, ಉಡುಪಿ, ದಾವಣಗೆರೆ ಜಿಲ್ಲೆಗಳಲ್ಲೂ ಭ್ರಷ್ಟ ಅಧಿಕಾರಿಗಳ ಮನೆ, ಕಚೇರಿಗಳ ಮೇಲೆ ದಾಳಿ ನಡೆದಿದ್ದು, ಅಪಾರ ಪ್ರಮಾಣದ ಚಿನ್ನಾಭರಣ, ಅಕ್ರಮ ಆಸ್ತಿ ಹಾಗೂ ಮಹತ್ವದ ದಾಖಲೆಗಳು ಪತ್ತೆಯಾಗಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

## ಡಾ. ಎಚ್.ಎಸ್.ವಿ ಕನ್ನಡ ನಾಡು ಕಂಡ ಪ್ರಯೋಗಶೀಲ ಲೇಖಕ



ಮಲ್ಲಮ್ಮ ನುಡಿ ವಾರ್ತೆ

ಔರಾದ್ :ಮೇ.31: ಒಬ್ಬ ಕವಿ ಪ್ರತಿ ಕ್ಷಣವೂ ಒಬ್ಬ ಕವಿಯಾಗಿ ಹೇಗಿರಬೇಕು ಎಂಬುದನ್ನು ತೋರಿಸಿಕೊಟ್ಟ ಡಾ. ಎಚ್.ಎಸ್ ವೆಂಕಟೇಶಮೂರ್ತಿ ಕನ್ನಡ ನಾಡು ಕಂಡ ಪ್ರಯೋಗಶೀಲ ಲೇಖಕರಾಗಿದ್ದು, ಅವರ ಅಗಲಿಕೆಯಿಂದ ಕನ್ನಡ ಸಾರಸ್ವತ ಲೋಕ ಬರಡಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಾಲಾಜಿ ಅಮರವಾಡಿ ಹೇಳಿದರು.

ಪಟ್ಟಣದ ಕನ್ನಡ ಭವನದಲ್ಲಿ ಶನಿವಾರ ಆಯೋಜಿಸಿದ ಡಾ. ಎಚ್.ಎಸ್ ವೆಂಕಟೇಶಮೂರ್ತಿ ಅವರ ನುಡಿ ನಮನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಹುತ್ವ ಸಂಸ್ಕೃತಿಯ ಆರಾಧಕರಾಗಿರುವ ಎಚ್ಚೆಸ್ವಿ, ಭಾವಪೂರ್ಣ ಗೀತೆಗಳನ್ನು ರಚಿಸಿ, ಹಾಡಿಸಿ ಸುಗಮ ಸಂಗೀತದ ಮೂಲಕ ಕನ್ನಡಿಗರ ಮನಗೆದ್ದರು. ತಮ್ಮ ನಿತ್ಯದ ಬದುಕಿನ ಭಾಗಗಳನ್ನೆ ಕಾವ್ಯವಾಗಿ ಪರಿವರ್ತಿಸಿಕೊಂಡು ಸಂಭ್ರಮಿಸುತ್ತಿರುವ ಅವರು, ನಮಗೆ ಕಾವ್ಯ ಚಿಂತನೆಯನ್ನು ಕಲಿಸಿ ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಸದಾ ನಂದಾದೀಪವಾಗಿ ಬೆಳಗಲಿದ್ದಾರೆ ಎಂದರು.

ಗೌರವ ಕಾರ್ಯದರ್ಶಿ ಜಗನ್ನಾಥ ದೇಶಮುಖ ಎಚ್. ಎಸ್ ವೆಂಕಟೇಶಮೂರ್ತಿ ಅವರ ಜೀವನ ಸಾಧನೆ ಹಾಗೂ ಸಾಹಿತ್ಯ ಕೊಡುಗೆಯ ಕುರಿತು ಮಾತನಾಡಿದರು.ಈ ಸಂದರ್ಭದಲ್ಲಿ ಕಸಾಪ ಸದಸ್ಯರಾದ ರವೀಂದ್ರ ಮುಕ್ತೆದಾರ್, ಸಂತೋಷ ಚಾಂಡೇಶ್ವರೆ, ಯುವ ಘಟಕದ ಅಧ್ಯಕ್ಷ ಅಂಬಾದಾಸ ನಳಗೆ, ಅಮರಸ್ವಾಮಿ ಸ್ಥಾವರಮಠ, ಶಮಶೊದ್ದಿನ್ ಮುಲ್ಲಾ, ಶಿವಕಾಂತ ಕೊಷ್ಟಿ, ಅನೀಲ ಮೇತ್ರೆ, ಅನೀಲ ದೇವಕತೆ ಸೇರಿದಂತೆ ಇನ್ನಿತರರಿದ್ದರು.

## ಬೀಳ್ಕೊಡುಗೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.31: ಹಿರಿಯ ಪ್ರಯೋಗಾಲಯ ತಾಂತ್ರಿಕ ಅಧಿಕಾರಿ ರಾಜು ಕುಲಕರ್ಣಿ ಅವರು ಸರಳ ಸರಜ್ಜನಿಕೆಯ ಎಲ್ಲಾ ಅಧಿಕಾರಿಗಳು ಹಾಗೂ ರೋಗಿಗಳೊಂದಿಗೆ ಉತ್ತಮ ಬಾಂಧ್ಯವನ್ನು ಇಟ್ಟುಕೊಂಡು ತಮ್ಮ ಒಟ್ಟು 39 ವರ್ಷಗಳು ಸುಧೀರ್ಘ ಸೇವೆ ಸಲ್ಲಿಸಿ ಸಾರ್ವಜನಿಕರ ಪ್ರೀತಿಗೆ ಪಾತ್ರರಾಗಿದ್ದು ಇಲಾಖೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಧ್ಯಾನೇಶ್ವರ ನಿರುಗಡೆ ತಿಳಿಸಿದರು.

ಅವರು ಶನಿವಾರ ಜಿಲ್ಲಾ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿ ಸಭಾಂಗಣದಲ್ಲಿ ಹಿರಿಯ ಪ್ರಯೋಗಾಲಯ ತಾಂತ್ರಿಕ ಅಧಿಕಾರಿ ರಾಜು ಕುಲಕರ್ಣಿ ಅವರವಯೋನಿವೃತ್ತಿ ಪ್ರಯುಕ್ತ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಇಲಾಖೆಗೆ ಅತ್ಯುತ್ತಮ ನಿಶ್ಪಕ್ಷಪಾತವಾಗಿ ಸಲ್ಲಿಸಿದ ಸೇವೆಯುಸ್ಮರಣೀಯವಾಗಿರುತ್ತದೆ. ಇಂತಹ ಸಿಬ್ಬಂದಿಗಳ ಸೇವೆಯು ಮುಂದಿನ ದಿನಗಳಲ್ಲಿಯೂ ಅಗತ್ಯವಾಗಿರುತ್ತದೆ ಎಂದು ತಿಳಿಸಿದರು.

ನಿವೃತ್ತಿ ಸನ್ಮಾನ ಸ್ವೀಕರಿಸಿದ ಹಿರಿಯ ಪ್ರಯೋಗಾಲಯ ತಾಂತ್ರಿಕ ಅಧಿಕಾರಿ ರಾಜು ಕುಲಕರ್ಣಿ ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ಕೇಂದ್ರಗಳಲ್ಲಿ ಹಾಗೂ ರಕ್ತ ನಿಧಿ ಕೇಂದ್ರದಲ್ಲಿ ಸಲ್ಲಿಸಿದ ಸೇವೆಯುವ ನನಗೆ ಜೀವನದ ಅವಿಸ್ಮರಣೀಯ ಸೇವೆಯಾಗಿದ್ದು, ಇಲಾಖೆಯ ವಿವಿಧ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯು ತುಂಬಾ ತೃಪ್ತಿಕರವಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಬೀದರಜಿಲ್ಲಾರೋಗವಾಹನಆಶ್ರಿತ ರೋಗಗಳನಿಯಂತ್ರಣಾಧಿಕಾರಿ ಡಾ.ರಾಜಶೇಖರ ಪಾಟೀಲ್, ಡಾ.ಶಂಕರೆಪ್ಪಾ ಬೊಮ್ಮ, ಡಾ.ಶಿವಶಂಕರ ಬಿ, ಡಾ.ಕಿರಣ ಪಾಟೀಲ್, ಡಾ.ಅನೀಲಕುಮಾರ ಚಿಂತಾಮಣಿ, ಡಾ.ದಿಲೀಪ್ ಡೋಂಗ್ರೆ, ಸತ್ತಾರ ಪಟೇಲ್, ರಾಜಕುಮಾರ ಬೀರಾದರ, ವೀರಶಟ್ಟಿಚನಶಟ್ಟಿ,ಸತೀಷಕುಮಾರ ಪಾಂಡೆ, ಜಾವೇದ್ ಕಲ್ಯಾಣಕರ್, ಜೇತುಲಾ ಪವಾರ್, ಸಮೀ ಪಟೇಲ್, ಶಿವಾನಂದ ಸ್ವಾಮಿ ತಸ್ಲೀಮ್ ಬೇಗಂ, ಮುಹ್ಮದ ಅಬ್ದುಲ್‌ರಫೀ, ಕಾಶಿನಾಥ, ಮುಹ್ಮದ ಅಬುಬಕರ್, ಬಾಬುರಾವ, ಸಮೀಯುದ್ದಿನ್, ಅಮರಗಂದಿಗುಡಿ, ದೇವಿದಾಸ ರಾಜಶೇಖರ್ ತಂಬಾಕೆ ಹಾಗೂ ಇತರೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದರು.

ಜಿಲ್ಲಾಆರೋಗ್ಯಶಿಕ್ಷಣಾಧಿಕಾರಿಗಳಾದ ಸಂಗಪ್ಪಾ ಕಾಂಬ್ಳೆ ಬೀಳ್ಕೊಡುಗೆ ಸಮಾರಂಭಕ್ಕೆ ಸಂಚಾಲನೆ ನೀಡಿ ಮಾತನಾಡುತ್ತಾ ಇಲಾಖೆಗೆ ಅತ್ಯೂತ್ತಮ ಸೇವೆಯನ್ನು ನೀಡಿದ ಇವರಿಗೆ ಶುಭಾಷಯಗಳನ್ನು ಕೋರುತ್ತಾ ಮುಂದಿನ ನಿವೃತ್ತಜೀವನವು ಆರೋಗ್ಯ ಪೂರ್ಣವಾಗಿರಲೆಂದು ಹಾರೈಸಿ ವಂದಸಿದರು.

## ಛಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ಗುಪ್ತಾ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.31:ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ ಸಚಿವ ಕುರಿತು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ನೀಡಿರುವ ಅವಹೇಳನಕಾರಿ ಹೇಳಿಕೆಯನ್ನು ಕಾಂಗ್ರೆಸ್ ಮುಖಂಡ ಎಲ್.ಜಿ.ಗುಪ್ತಾ ತೀವ್ರವಾಗಿ ಖಂಡಿಸಿದ್ದಾರೆ.

ರಾಜ್ಯ,ರಾಷ್ಟ್ರ ಸೇರಿದಂತೆ ವಿಶೇಷವಾಗಿ ಕಲ್ಯಾಣ–ಕರ್ನಾಟಕ ಭಾಗ ಆರ್ಥಿಕ, ಶೈಕ್ಷಣಿಕ, ಔದ್ಯೋಗಿಕ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು



ಸಚಿವ ಪ್ರಿಯಾಂಕ್ ಖರ್ಗೆ ಅವರ ಕೊಡುಗೆ ಯಾರೂ ಮರೆಯುವಂತಿಲ್ಲ.ನಾನು ಮೊದಲು ಏನಿದ್ದೆ,ಹೇಗಿದ್ದೆ ಅನ್ನುವುದನ್ನು ಅರಿತುಕೊಳ್ಳಬೇಕು.ಇನ್ನೊಬ್ಬರ ಬಗ್ಗೆ ಟೀಕೆ ಮಾಡುವುದು ಎಷ್ಟರ ಮಟ್ಟಿಗೆ ಔಚಿತ್ಯ ಎನ್ನುವುದನ್ನು ಅರ್ಥಮಾಡಿಕೊಳ್ಳಬೇಕು.ನಾರಾಯಣ ಸ್ವಾಮಿ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನ ಶ್ವಾನಕ್ಕೆ ಹೋಲಿಸಿ ಸ್ವತಃ ತಾವೇ ಕೀಳು ಮಟ್ಟಕ್ಕೆ ಇಳಿದಿದ್ದಾರೆ. ಎಮ್‌ಎಲ್‌ಸಿಯಾಗಿ ಈ ರೀತಿ ಹೇಳಿಕೆ ಕೊಡುವುದು ಅವರ ಸ್ಥಾನಕ್ಕೆ ಶೋಭೆತರುವಂತಹದ್ದಲ್ಲ. ಛಲವಾದಿ ನಾರಾಯಣಸ್ವಾಮಿ ಬಹಿರಂಗವಾಗಿ ಖರ್ಗೆ ಕುಟುಂಬಕ್ಕೆ ಕ್ಷಮೆಯಾಚಿಸದಿದ್ದರೆ ಸಮಸ್ಥ ಖರ್ಗೆ ಅಭಿಮಾನಿ ಬಳಗದ ವತಿಯಿಂದ ಹೋರಾಟ ನಡೆಸಬೇಕಾಗುತ್ತದೆ ಎಂದು ಗುಪ್ತಾ ಎಚ್ಚರಿಸಿದ್ದಾರೆ.

## ಕಮಲನಗರ ಕೆಪಿಎಸ್ ಶಾಲೆಗೆ ಶಾಸಕ ಪ್ರಭು ಚವ್ಹಾಣ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.31:ಕಮಲನಗರದಲ್ಲಿ ಸರ್ಕಾರಿ ಪ್ರೌಢಶಾಲೆಯ ಕೊರತೆಯಿಂದ ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಡಕಾಗಿತ್ತು. ಸಂಬಂಧಪಟ್ಟ ಸಚಿವರು ಮತ್ತು ಅಧಿಕಾರಿಗಳಿಗೆ ಹತ್ತಾರು ಪತ್ರಗಳನ್ನು ಬರೆದಿದ್ದೇನೆ. ಖುದ್ದಾಗಿ ಭೇಟಿ ನೀಡಿದ್ದೇನೆ. ಎಲ್ಲ ಪ್ರಯತ್ನಗಳಿಂಗಾಗಿ ಕೆಪಿಎಸ್ ಶಾಲೆ ಮಂಜೂರಾಗಿದೆ. ಇನ್ನು ಮುಂದೆ ತಾಲ್ಲೂಕಿನ ಬಡಮಕ್ಕಳು ಯಾವುದೇ ಶುಲ್ಕದಹೊರೆಯಿಲ್ಲದೇ ನಿರಾತಂಕವಾಗಿ ವಿದ್ಯಾಭ್ಯಾಸ ಮಾಡಬಹುದು ಎಂದು ಹೇಳಿದರು.ಪಟ್ಟಣದಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಕಮಲನಗರ ಕರ್ನಾಟಕ ಪಬ್ಲಿಕ್ ಶಾಲೆಗೆ(ಕೆಪಿಎಸ್) ಶನಿವಾರ ರಿಬ್ಬನ್ ಕತ್ತರಿಸುವ ಮೂಲಕ ಹಾಗೂ ಮಕ್ಕಳಿಕೆ ಸಿಹಿ ತಿನ್ನಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.ಈ ಶಾಲೆಯನ್ನು ಉಳಿಸಿಕೊಂಡು ಹೋಗುವ ಹೊಣೆಗಾರಿಗೆ ಜನತೆ ಮತ್ತು ಶಿಕ್ಷಕರ ಮೇಲಿದೆ. ಈ ಬಗ್ಗೆ ಯೋಜನೆ ರೂಪಿಸಿಕೊಳ್ಳಬೇಕು. ಶಾಲೆಯ ಶಿಕ್ಷಕರೊಂದಿಗೆ ಮನೆ–ಮನೆಗೆ ಸುತ್ತಾಡಿ ದಾಖಲಾತಿ ಪಡೆಯಬೇಕು. ಈ ವರ್ಷವೇ ಶೇ.100ರಷ್ಟು ದಾಖಲಾತಿಯಾಗಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಟ್ಟಿದ್ದು ಶಿಕ್ಷಣಕ್ಕಾಗಿ ಏನೇನು ಬೇಕು ಎಲ್ಲವನ್ನೂ ಒದಗಿಸಿದ್ದೇನೆ. ಆದರೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಶಿಕ್ಷಕರು ಸರಿಯಾಗಿ ಕೆಲಸಮಾಡಬೇಕೆಂದು ಹೇಳಿದರು.ಹಿಂದೆ ಕ್ಷೇತ್ರದಲ್ಲಿ ಶಿಕ್ಷಣ ತೀವ್ರ ಹಿಂದುಳಿದಿತ್ತು. ನಾನು ಶಾಸಕನಾದ ನಂತರ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು, ಶಿಕ್ಷಕರ ಮನೋಬಲ ವೃದ್ಧಿಸುವುದು, ಸಭೆಗಳನ್ನು ನಡೆಸುವ ಮೂಲಕ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಸಾಕಷ್ಟು ಸುಧಾರಣೆ ಕಾಣಿಸಿದೆ. ಆದರೆ ಪ್ರಸಕ್ತ ಸಾಲಿನ ಫಲಿತಾಂಶ ತೀವ್ರ ಕುಸಿದಿದ್ದು ಬಹಳಷ್ಟು ನೋವುಂಟಾಗಿದೆ. ಫಲಿತಾಂಶ ಸುಧಾರಣೆಗೆ ಉಪ ನಿರ್ದೇಶಕರು ಮುತುವರ್ಜಿ ವಹಿಸಬೇಕು. ಸರಿಯಾಗಿ ಕೆಲಸ ಮಾಡದ ಶಿಕ್ಷಕರನ್ನು ಅಮಾನತುಗೊಳಿಸುವುದು ಅಥವಾ ವರ್ಗಾವಣೆಯಂತಹ ಕಠಿಣ ಕ್ರಮ ಜರುಗಿಸಬೇಕೆಂದು ನಿರ್ದೇಶನ ನೀಡಿದರು. ಕ್ಷೇತ್ರದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಸಮಸ್ಯೆ ಸಾಕಷ್ಟಿದೆ. ಹೆಚ್ಚು ಮಕ್ಕಳಿರುವ ಕಡೆ ಶಿಕ್ಷಕರ ಕೊರತೆಯಿದೆ. ಮಕ್ಕಳಿಲ್ಲದ ಕಡೆ ಹೆಚ್ಚು ಶಿಕ್ಷಕರಿದ್ದಾರೆ. ಇದರಿಂದ ಮಕ್ಕಳ ಕಲಿಕೆಯ ಮೇಲೆ ಪರಿಣಾಮ ಬೀರುತ್ತಿದೆ. ಈ ಅವ್ಯವಸ್ಥೆ ಸುಧಾರಿಸುವಂತೆ ಸಾಕಷ್ಟು ಬಾರಿ ಹೇಳಿದರೂ ಯಾವುದೇ ಬದಲಾವಣೆ ಕಾಣಿಸಿಲ್ಲವೆಂದು ಇಲಾಖೆಯ ಕಾರ್ಯವೈಖರಿಯ ಬಗ್ಗೆ ಬೇಸರ ಹೊರಹಾಕಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಲೀಂ ಪಾಶಾ ಪ್ರಾಸ್ತಾವಿಕ ಮಾತನಾಡಿ, ಶಾಸಕರ ಪ್ರಯತ್ನದಿಂದ ತಾಲ್ಲೂಕಿಗೆ ಕೆಪಿಎಸ್ ಶಾಲೆ ಮಂಜೂರಾಗಿದೆ. ಇದನ್ನು ಉಳಿಸಲು ಸಾರ್ವಜನಿಕರು ಮುಂದಾಗಬೇಕು. ಇಲ್ಲಿ ಎಲ್.ಕೆ.ಜಿ ಯಿಂದ ಎಸ್ಸೆಸ್ಸೆಲ್ಸಿ ವರೆಗೆ ಎಲ್ಲ ಮಾಧ್ಯಮಗಳಲ್ಲಿ ಶಿಕ್ಷಣ ಕೊಡಲಾಗುತ್ತದೆ. ಲಕ್ಷಾಂತರ ವ್ಯಯಿಸಿ ಖಾಸಗಿ ಶಾಲೆಗೆ ಹೋಗುವ ಬದಲು ಕೆಪಿಎಸ್ ಶಾಲೆಗೆ ಮಕ್ಕಳನ್ನು ದಾಖಲು ಮಾಡಬೇಕು ಎಂದು ಕೋರಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ರಂಗೇಶ, ಗ್ರಾಮ ಪಂಚಾಯತ್ ಅಧ್ಯಕ್ಷೆ ಸುಶೀಲಾಬಾಯಿ ಮಹೇಶ ಸಜ್ಜನಶೆಟ್ಟಿ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಬಸವರಾಜ ಪಾಟೀಲ, ಶಿವಾನಂದ ವಡ್ಡೆ, ಗಿರೀಶ ವಡೆಯರ್, ಸೂರ್ಯಕಾಂತ ಬಿರಾದಾರ, ಶಿವಕುಮಾರ ಝುಲ್ಪೆ, ಮಲ್ಲಿಕಾರ್ಜುನ ದಾನಾ, ರಂಗರಾವ ಜಾಧವ ಸೇರಿದಂತೆ ಇತರರಿದ್ದರು. ಇದೇ ವೇಳೆ ಶಾಸಕರು ಮಕ್ಕಳಿಗೆ ಸಿಹಿ ತಿನ್ನಿಸಿದರು.

# ಎನ್‌ಎಸ್‌ಎಸ್ ಶಿಬಿರದ ಸಮಾರೋಪ ಸಮಾರಂಭ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮೆ 31 ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ಅಕ್ಕಮಹಾದೇವಿ ಮಹಿಳಾ ಪದವಿ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ

ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭ ಅಕ್ಕನಾಗಮ್ಮ ಗವಿಯಲ್ಲಿ ಜರುಗಿತು.

ಮುಖ್ಯ ಅತಿಥಿಗಳಾದ ಶ್ರೀ ಬಸವೇಶ್ವರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ಡಾ. ರುದ್ರಮಣಿ ಮಠಪತಿಯವರು ಮಾತನಾಡಿ ಶಶಕ್ತ ಭಾರತಕ್ಕೆ ಯುವಕರ ಪಾತ್ರ ಪ್ರಮುಖವಾದದ್ದು ಹೆಣ್ಣು ಮಕ್ಕಳು ಕೂಡ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು. ಶ್ರೀ ಬಸವೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಭೀಮಾಶಂಕರ್ ಬಿರಾದರ್ ಸ್ವಯಂ ಸೇವಕಿಯ ರನ್ನು ಉದ್ದೇಶಿಸಿ ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯರಾದ ಮಾಯ ಮೂರಾಳೆ ಅವರು ಅಧ್ಯಕ್ಷತೆ ವಹಿಸಿದ್ದರು.

ಸ್ನಾತ ಕೊಜತ್ತರ ಕಾಲೇಜಿನ ಪ್ರಚಾರದ ಡಾ. ಶಾಂತಲಾ ಪಾಟೀಲ್, ಎನ್‌ಎಸ್‌ಎಸ್ ಎ ಮತ್ತು ಬಿ ಘಟಕದ ಅಧಿಕಾರಿಗಳಾದ

ದಶರಥ. ಟಿ.ಹಳ್ಳಿಖೇಡೆ.

ಜಗನ್ನಾಥ್‌ರೆಡ್ಡಿ ಕಲ್ಲೂರೆ ಕಾಲೇಜಿನ ಸಿಬ್ಬಂದಿಯವರು ಸೇರಿದಂತೆ ಅನೇಕರು ಉಪಸ್ಥಿರಿದ್ದರು. ಪ್ರಕಾಶ ರಾಠೋಡ ನಿರೂಪಿಸಿದರು.

ಸುನೀಲ ದೇವಪ್ಪ ಸ್ವಾಗತಿಸಿದರು. ವೆಂಕಟರಾವ ಗುನ್ನಾಳೆ ವಂದಿಸಿದರು.

## ಬಸವ ಭಾರತ ಉತ್ಸವದ ಕರಪತ್ರ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಅಯೋಜಿಸಿದ ಬಸವ ಭಾರತ ಉತ್ಸವದ ಕರಪತ್ರಗಳನ್ನು ಬಿಡುಗಡೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಜಿ. ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾಕ್ಷರಿ ಮಹಾಸ್ವಾಮಿಜಿ. ಹರಳಯ್ಯಗವಿಯ ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ. ಸಾಯಗಾಂವದ ಪೂಜ್ಯ ಶ್ರೀ ಶಿವಾನಂದ ದೇವರು. ಕ್ಷೇತ್ರ ಸಮಿತಿಯ ಮುಖ್ಯ ಸಂಚಾಲಕರು ಆದ ಮಾಜಿ ಸಂಸದ ಡಾ. ಬಸವರಾಜ ಪಾಟೀಲ ಸೇಡಂ. ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ. ಡಾ. ಅಮರನಾಥ ಸೋಲಪುರೆ. ಡಾ. ಮಹೇಶ್ ಪಾಟೀಲ. ಚನ್ನಬಸವ ಬಳತೆ. ಸೂರ್ಯಕಾಂತ ಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶ್ರೀಕಾಂತ ಸೂಗಿಯ ನಿಸ್ವಾರ್ಥ ಸೇವೆ ಅನನ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತ ಸರಕಾರಿ ಶಾಲೆಯಲ್ಲಿ ಸುಧೀರ್ಘ ಕಾಲ ಸಲ್ಲಿಸಿದ ನಿಸ್ವಾರ್ಥ ಸೇವೆ ಅನನ್ಯವಾಗಿದೆ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವೀಂದ್ರರೆಡ್ಡಿ ಮಾಲಿ ಪಾಟೀಲ್ ಹೇಳಿದರು.

ತಾಲೂಕಿನ ಹಂದಿಕೇರಾ ಗ್ರಾಮದ ಸರಕಾರಿ ಶಾಲೆಯಲ್ಲಿ ಶನಿವಾರ ನಡೆದ ಮುಖ್ಯಶಿಕ್ಷಕ ಶ್ರೀಕಾಂತ ಸೂಗಿ ಅವರ ವಯೋಸೇವಾ ನಿವೃತ್ತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಶ್ರೀಕಾಂತ ಸೂಗಿ ಅವರು ತಮ್ಮ ಸೇವಾ ಅವಧಿಯಲ್ಲಿ ಪಠ್ಯ ಚಟುವಟಿಕೆ ಕುರಿತು ಮಕ್ಕಳಿಗೆ ಉತ್ತಮ ಬೋದನೆ ಮಾಡುವುದರ ಜತೆಗೆ ಪರಿಸರ ಸಂರಕ್ಷಣೆ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುತ್ತಾ ಅವರನ್ನು ಉತ್ತಮ ನಾಗರಿಕರನ್ನಾಗಿ ಮಾಡಿದ್ದಾರೆ. ಹೀಗಾಗಿ ಇತರೆ ಶಿಕ್ಷಕರು ಕೂಡಾ ಅವರ ಮಾರ್ಗದರ್ಶನದಲ್ಲಿ ಮುನ್ನಡೆದು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಸಲಹೆ ನೀಡಿದರು.

ವಯೋಸೇವಾ ನಿವೃತ್ತರಾದ ಮುಖ್ಯಶಿಕ್ಷಕ ಶ್ರೀಕಾಂತ ಸೂಗಿ ಮಾತನಾಡಿ, ಸೇವಾ ಅವಧಿಯಲ್ಲಿ ನನಗೆ ಸಹಕಾರ ನೀಡಿದ ವೃತ್ತಿ ಬಾಂಧವರು ನೀಡಿದ ಸಹಾಯ, ಸಹಾಕರ ಎಂದು ಮರೆಯುವಂತಿಲ್ಲ. ಸೇವಾ ನಿವೃತ್ತಿ ಹಿನ್ನಲೆ ನನಗೆ ಸನ್ಮಾನಿಸಿ ಗೌರವಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಸಿದ್ದಲಿಂಗ ನಿರ್ಣಾ, ನಿವೃತ್ತ ವೇದಿಕೆ ತಾಲೂಕು ಸಂಚಾಲಕ ಶಶಿಧರ ಪಾಟೀಲ್, ವೀರಣ್ಣ ಕುಂಬಾರ್, ಶ್ರೀಧರ ಚವ್ಹಾಣ, ಮಡೇಪ್ಪ ಕುಂಬಾರ್, ತ್ಯಾತರಾವ ಕಾಂಬಳೆ, ಶಿವರಾಜ ಮೇತ್ರೆ, ಭಕ್ತರಾಜ ಚಿತ್ತಾಪೂರೆ, ನಾಗರಾಜ ಶಿರಮುಂಡಿ, ಮಲ್ಲಪ್ಪ ಜಿಗಜಿವಣಿ, ಬಜರಂಗ ಉಪ್ಪಳೆ ಇದ್ದರು.

ಚನ್ನಬಸವೇಶ್ವರ ಗುರುಕುಲದಲ್ಲಿ ಕೇಂದ್ರದ ರೈಲ್ವೆ ಸಚಿವ ವಿ.ಸೋಮಣ್ಣನವರ ಅಭಿನಂದನಾ ಸಮಾರಂಭ

# ಭಾರತದಾದ್ಯಂತ ಬಸವ ಜಯಂತಿ ಆಚರಣೆಗೆ ಪ್ರಯತ್ನ





ಕೇಂದ್ರದ ಸಚಿವ ವಿ.ಸೋಮಣ್ಣನವರ ರಾಜಕೀಯ, ಸಾಮಾಜಿಕ ಕ್ಷೇತ್ರದ ಬೆಳವಣಿಗೆಯಲ್ಲಿ ಸಿದ್ಧಗಂಗಾ ಶ್ರೀಮಠದ ಕೊಡುಗೆ ದೊಡ್ಡದಿದೆ.
ಸಚಿವರಾಗಿ ರಾಷ್ಟ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ದುರ್ಬಲ ವರ್ಗದವರು, ನೊಂದವರ ಪಾಲಿನ ಆಶ್ರಯದಾತರಾಗಿದ್ದಾರೆ.

**–ಗುರುಬಸವ ಪಟ್ಟದ್ದೇವರು**
**ಪೀಠಾಧಿಪತಿ, ಹಿರೇಮಠ ಸಂಸ್ಥಾನ ಭಾಲ್ಕಿ**

ಮಲ್ಲಮ್ಮ ನುಡಿ ವಾತೆ

ಭಾಲ್ಕಿ, ವಿಶ್ವಕ್ಕೆ ಸಮಾನತೆ ಸಂದೇಶ ಸಾರಿದ ವಿಶ್ವಗುರು ಬಸವಣ್ಣನವರ ಬಸವ ಜಯಂತಿಯನ್ನು ಮುಂಬರುವ ದಿನಗಳಲ್ಲಿ ಕೇಂದ್ರ ಸರಕಾರದ ವತಿಯಿಂದ ಭಾರತದಾದ್ಯಂತ ಆಚರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಕೇಂದ್ರದ ರೈಲ್ವೆ ಮತ್ತು ಜಲಶಕ್ತಿ ಇಲಾಖೆ ಸಚಿವ ವಿ.ಸೋಮಣ್ಣ ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಶನಿವಾರ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಸವತತ್ವವನ್ನು ಉಸಿರಾಗಿಸಿಕೊಂಡಿದ್ದಾರೆ. ಅವರ ಮನವಿ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಸಂಸತ್‌ನ ಸ್ಪೀಕರ್‌ಗೆ ಮನವಿ ಪತ್ರ ಬರೆದು ಬಸವ ಜಯಂತಿಯನ್ನು ಕೇಂದ್ರದಿಂದ ಆಚರಿಸಲು ಮನವಿ ಮಾಡಿಕೊಳ್ಳಲಾಗಿತ್ತು. ಅದರಂತೆ ಈ ಬಾರಿ ಸಂಸತ್‌ನಲ್ಲಿ ಬಸವ ಜಯಂತಿ ಆಚರಿಸಲಾಗಿದೆ.

ಭಾರತದಾದ್ಯಂತ ಗೌತಮ ಬುದ್ಧ, ಮಹಾವೀರರ ಜಯಂತಿಯನ್ನು ಆಚರಿಸಲಾಗುತ್ತದೆ. ಅದೇ ಮಾದರಿಯಲ್ಲಿ ಕೇಂದ್ರ ಸರಕಾರದ ವತಿಯಿಂದ ರಾಷ್ಟ್ರದಾದ್ಯಂತ ಬಸವ ಜಯಂತಿ ಆಚರಿಸಲು ಪಕ್ಷಾತೀತವಾಗಿ ಎಲ್ಲರೂ ಮುತುವರ್ಜಿ ವಹಿಸಬೇಕು.

**– ಡಾ.ಬಸವಲಿಂಗ ಪಟ್ಟದ್ದೇವರು**
**ಅಧ್ಯಕ್ಷ, ಅನುಭವ ಮಂಟಪ ಬಸವಕಲ್ಯಾಣ**

ಬರುವ ದಿನಗಳಲ್ಲಿ ಬಸವಣ್ಣನವರ ಶ್ರೀರಕ್ಷೆ ಮತ್ತು ಪೂಜ್ಯರ ಆಶೀರ್ವಾದಿಂದ ಭಾರತದಾದ್ಯಂತ ಬಸವ ಜಯಂತಿ ಆಚರಿಸಲು ಕೇಂದ್ರಕ್ಕೆ ಮನವರಿಕೆ ಮಾಡಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಳೆದ 40 ವರ್ಷಗಳಿಂದ ಹಿರೇಮಠ ಸಂಸ್ಥಾನಕ್ಕೂ ನನಗೂ ಅವಿನಾಭಾವ ಸಂಬಂಧ ಇದೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪರಿಶ್ರಮದಿಂದ ಇದೀಗ ಶ್ರೀಮಠ ರಾಜ್ಯದ ಪ್ರತಿಷ್ಠಿತ ಮಠಗಳಲ್ಲೊಂದಾಗಿ ಬೆಳೆದಿದೆ. ಈ ಭಾಗದಲ್ಲಿ ಪೂಜ್ಯರು ಶೈಕ್ಷಣಿಕ, ಸಾಮಾಜಿಕ ಮತ್ತು ಧಾರ್ಮಿಕ ಕ್ಷೇತ್ರಗಳಲ್ಲಿ ಅದ್ಭುತ ಕೊಡುಗೆ ನೀಡುತ್ತಿದ್ದಾರೆ.

ಹೆತ್ತವರಿಗೆ ಬೇಡವಾದ ಮಕ್ಕಳನ್ನು ಅನ್ನ, ಆಶ್ರಯ, ಶಿಕ್ಷಣ ಕಲ್ಪಿಸಿ ದೇವಸ್ವರೂಪಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ನಾನು ಅನುಭವ ಮಂಟಪ ನೋಡಲಿಲ್ಲ. ಬಸವಣ್ಣನವರನ್ನು ಕಂಡಿಲ್ಲ. ಆದರೆ ಪೂಜ್ಯರಲ್ಲಿನ ಸಮಾನತೆ ತತ್ವ ಮತ್ತು ಬಸವಣ್ಣವರ ವಿಚಾರಾಧಾರೆಗಳಿಂದ ಪ್ರೇರೆಪಿತನಾಗಿದ್ದೇನೆ.

ರಾಜ್ಯದಾದ್ಯಂತ ಹಲವು ಮಠಗಳನ್ನು ಸುತ್ತಿದ್ದೇನೆ. ಆದರೆ ಹಿರೇಮಠ ಸಂಸ್ಥಾನದ ಸಮಾಜ ಸೇವೆ ಎಲ್ಲ ಮಠಗಳಿಂದ ವಿಭಿನ್ನವಾಗಿದೆ. ನನ್ನ ಏಳಿಗೆಯಲ್ಲಿ ಸಿದ್ಧಗಂಗೆ ಮಠದ ಕೊಡುಗೆ ದೊಡ್ಡದಿದೆ. ಅದರ ಜತೆಗೆ ಭಾಲ್ಕಿ ಶ್ರೀಮಠದ ಆಶೀರ್ವಾದವೂ ನನ್ನ ಬೆನ್ನಿಗಿದೆ. ಹಾಗಾಗಿ ವಿಧಾನಸಭೆ ಚುನಾವಣೆಯಲ್ಲಿ ಸೋಲು ಕಂಡಿದ್ದ ನಾನು ಬಸವಣ್ಣನವರ, ಮಠಾಧೀಶರ ಆಶೀರ್ವಾದಿಂದ ಸಂಸತ್ ಸದಸ್ಯ, ಕೇಂದ್ರದ ಸಚಿವನಾಗಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದೆ ಎಂದು ಸಂತಸ ವ್ಯಕ್ತ ಪಡಿಸಿದ್ದರು.

ಸಾನ್ನಿಧ್ಯ ವಹಿಸಿದ್ದ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಕೇಂದ್ರದಿಂದ ಆಚರಿಸುವಂತೆ ಕೇಂದ್ರದ ಸಚಿವ ವಿ.ಸೋಮಣ್ಣನವರಿಗೆ ಪತ್ರ ಬರೆದು ಮನವಿ ಮಾಡಿದ್ದೆ ಅದರಂತೆ ಈ ಬಾರಿ ಸಂಸತ್‌ನಲ್ಲಿ ಬಸವ ಜಯಂತಿ ಆಚರಿಸಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಚಿವ ರಹೀಂಖಾನ, ಸಂಸದ ಸಾಗರ ಖಂಡ್ರೆ, ಶಾಸಕರಾದ ಪ್ರಭು ಚವ್ಹಾಣ, ಡಾ.ಶೈಲೇಂದ್ರ ಬೆಲ್ದಾಳೆ, ಶರಣು ಸಲಗರ, ಡಾ.ಸಿದ್ಧಲಿಂಗಪ್ಪ ಪಾಟೀಲ್, ಮಾರುತಿರಾವ ಮುಳೆ, ಮಾಜಿ ಸಂಸದ ಉಮೇಶ ಜಾಧವ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್, ಹಿರಿಯ ಉದ್ಯಮಿ ಗುರುನಾಥ ಕೊಳ್ಳೂರ, ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ನಿರ್ದೇಶಕ ಶಶಿಧರ ಕೋಸಂಬೆ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ ಸೇರಿದಂತೆ ಹಲವರು ಇದ್ದರು. ಮಧುಕರ ಗಾವಂಕರ್ ನಿರೂಪಿಸಿ, ವಂದಿಸಿದರು.

# ವಿಶ್ವ ತಂಬಾಕು ದಿನ–2025 ಜಾಗೃತ ರ‍್ಯಾಲಿ




ಮಲ್ಲಮ್ಮ ನುಡಿ ವಾರ್ತೆ

ಬೀದರ, ಮೇ.31:– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿಂದು ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ಹಮ್ಮಿಕೊಂಡಿದ್ದ ವಿಶ್ವ ತಂಬಾಕು ರಹಿತ ದಿನಾಚರಣೆ ಜಾಗೃತಿ ಜಾಥಾಕ್ಕೆ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರ್ಜುನ ಬನಸೋಡೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಷಣ್ಮುಖಯ್ಯಾ ಬಿ.ಸ್ವಾಮಿ, ಶಿವರಾಜ ಬಿ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಜ್ಞಾನೇಶ್ವರ ನಿರುಗಡೆ ಅವರು ರಿಬ್ಬನ್ ಕತ್ತರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು.

ಈ ಜಾಥಾದಲ್ಲಿ ಜಿಲ್ಲೆಯ ಎಲ್ಲಾ ಕಾರ್ಯಕ್ರಮ ಅಧಿಕಾರಿಗಳು, ಎಸ್,ಬಿ.ಪಾಟೀಲ್ ದಂತ ಮಹಾವಿದ್ಯಾಲಯದ ಪ್ರಾಶುಂಪಾಲರು ಹಾಗೂ ವಿಧ್ಯಾರ್ಥಿಗಳು, ಜಿಲ್ಲಾ ನರ್ಸಿಗ್ ಕಾಲೇಜು ವಿಧ್ಯಾರ್ಥಿ–ವಿಧ್ಯಾರ್ಥಿನಿಯರು, ವಸಂತ ನರ್ಸಿಗ್ ಕಾಲೇಜುಗಳ ವಿದ್ಯಾರ್ಥಿ–ವಿಧ್ಯಾರ್ಥಿನಿಯರು ಹಾಗೂ ಸಿಬ್ಬಂದಿ ವರ್ಗದವರು ಜಾಗೃತಿ ಜಾಥಾದಲ್ಲಿ ಭಾಗವಹಿಸಿದ್ದರು.

ಜಾಥಾವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಿಂದ ಬೀದರ ನಗರದ ಜನವಾಡ್ ವಾಟರ್ ಟ್ಯಾಂಕ್, ಅಂಬೇಡ್ಕರ್ ಸರ್ಕಲ್, ಮುಖಾಂತರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯಾಲಯದ ವರೆಗೆ ಸಂಚರಿಸಿತು. ಜಾಥಾದಲ್ಲಿ ವಿದ್ಯಾರ್ಥಿಗಳು "ಆಕರ್ಷಕ ಉತ್ಪನಗಳು ಕರಾಳ ಉದ್ದೇಶಗಳು" ಎಂಬ ಜಾಗೃತಿ ಘೋಷಣೆಗಳನ್ನು ಕೂಗುತ್ತಾ, ನಾಮಫಲಕ, ಬ್ಯಾನರ್, ಕರಪತ್ರ, ಹಾಗೂ ಸಿಗರೇಟ್‌ನ ಶವ ಯಾತ್ರೆಯನ್ನು ತೋರಿಸುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸು ಮೂಖಾಂತರ ಜಾಗೃತಿ ಜಾಥಾವನ್ನು ಅಂತ್ಯಗೊಳಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಶಂಕರೇಪ್ಪಾ ಬೊಮ್ಮಾ ಮತ್ತು ಜಿಲ್ಲೆಯ ಎಲ್ಲಾ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಶಿವಶಂಕರ ಬಿ ಡಾ. ಕಿರಣ ಪಾಟೀಲ್, ಡಾ.ಅನೀಲ ಚಿಂತಾಮಣಿ, ಡಾ. ದೀಲಿಪ್ ಡೋಂಗ್ರೆ, ಉಪಸ್ಥಿತರಿದ್ದರು.

ಸಂಗಪ್ಪಾ ಕಾಂಬಳೆ ಕಾರ್ಯಕ್ರಮದ ನಿರೂಪಣೆ ನೀಡಿದರು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಪ್ರಕಾಶ ವಗ್ಗೆ ಹಾಗೂ ಮಹೇಶ ಬಬಭಡೆ, ಹಾಗು ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವಿಶ್ವ ಮಾದಕ ವಸ್ತು ರಹಿತ ದಿನಾಚರಣೆ ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ ,ಯುವ ಸಮುದಾಯ ಗುಟಕಾ, ಸಿಗರೆಟ್, ಧೂಮಪಾನ ಸೇವನೆಯಿಂದ ದುಶ್ಚಟದಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳುವಂತೆ ಡಾ. ವಿವೇಕ ವಾಗಲೆ ಅವರು ಯಲಬುರ್ಗಾ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜರುಗಿದ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ, ಆರೋಗ್ಯ ಇಲಾಖೆ ಇವುಗಳ ಸಹಕಾರದಲ್ಲಿ ವಿಶ್ವ ಮಾದಕವಸ್ತು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು. ಐ ಟಿ ಐ ಸಂಸ್ಥೆಯ ಪ್ರಾಚಾರ್ಯ ವೀರಭದ್ರಪ್ಪ ಕಾಳಗಿ ಅವರು ದೀಪ ಬೆಳಗಿಸಿ ಮಾತನಾಡಿ ವಿವಿಧ ಚಟಗಳಿಗೆ ಅಂಟಿಕೊಳ್ಳದೆ ಉತ್ತಮರ ಸಂಘ ಮಾಡಿಕೊಂಡು ಸುಂದರ ಬದುಕು ನಿಮ್ಮದಾಗಿಸಿಕೊಳ್ಳಿ ಎಂದರು . ಮೋಜು ಮಸ್ತಿಗಾಗಿ ವಿದ್ಯಾರ್ಥಿಗಳು ಸಿಗರೇಟ್ , ಗುಟಕಾ ಅತಿಯಾಗಿ ಸೇವನೆ ಮಾಡುತ್ತಾರೆ ಇದರಲ್ಲಿ ಸಾಕಷ್ಟು ವಿಷವಿರುತ್ತದೆ ಇದರ ಅರಿವು ಇದ್ದರು ಸಹ ಸೇವನೆ ಮಾಡಿ ಇದರಿಂದ ಕ್ಯಾನ್ಸರ್ ರೋಗಕ್ಕೆ ತುತ್ತಾಗಿ ಜೀವನ ಪರ್ಯಂತಾರ ತೊಂದರೆ ಅನುಭವಿಸಿ ಸಾವನ್ನಪ್ಪುತ್ತಾರೆ ಆದ್ದರಿಂದ ವಿದ್ಯಾರ್ಥಿಗಳು ರೋಗ ರುಜಿನಗಳಿಂದ ತೆ–ೂಂದರೆ ಅನುಭವಿಸಿ ಮರಣ ಹೊಂದುತ್ತಾರೆ , ಯುವ ಸಮುದಾಯ ದುಶ್ಚಟಗಳಿಂದ ದೂರ ಇರುವಂತೆ ಡಾ. ಮಾರುತಿ ದೊಡ್ಡಮನಿ ಮಾತನಾಡಿದರು. ಒಂದು ಸಿಗರೇಟ್ ಸೇವನೆ ಮಾಡಿದರೆ ಏಳು ನಿಮಿಷ ನಮ್ಮ ಆಯುಷ್ಯ ಕಡಿಮೆಯಾಗುತ್ತದೆ ಮತ್ತು ಆರೋಗ್ಯ ಹದಗೆಡುತ್ತದೆ ಆದ್ದರಿಂದ ನಮ್ಮ ಆರೋಗ್ಯ ಸಂಪತ್ತನ್ನು ಕಾಪಾಡಬೇಕು, ಕೋಟಿ ಸಂಪತ್ತುಗಿಂತ ಆರೋಗ್ಯ ಸಂಪತ್ತು ಮುಖ್ಯವಾದದ್ದು ಎಂದು ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಶರಣಬಸಪ್ಪ ದಾನಕೈ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ವೇಳೆ ಮೇಲ್ವಿಚಾರಕಿ ಕಾವ್ಯ, ಜ್ಞಾನ ವಿಕಾಸ ಸಮಿತಿಯ ಸಮನ್ವಯಾಧಿಕಾರಿ ರತ್ನ ಪಾಟೀಲ, ಸೇವಾ ಪ್ರತಿನಿಧಿ ವಿಜಯಲಕ್ಷ್ಮಿ, ಒಕ್ಕೂಟದ ಅಧ್ಯ–ಕ್ಷೆ ರತ್ತಮ್ಮ ತಳಕಲ್ಲ, ಆರೋಗ್ಯ ಇಲಾಖೆಯ ಕಾಳಪ್ಪ ಬಡಿಗೇರ, ಚಂದ್ರಶೇಖರ ನಾಯಕ, ಶಂಕರ ಪುರಾಣಿಕ ಹಾಗೂ ಐಟಿಐ ಸಿಬ್ಬಂದಿಗಳಾದ ಮಂಜುನಾಥ ಮುರಡಿ, ಚನ್ನಬಸಮ್ಮ ಹಿರೇಮಠ ಸೇರಿದಂತೆ ಇತರರು ಇದ್ದರು.

# ಜೂನ್ 2 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.31–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಕೆಳಕಂಡ ಫೀಡರ್ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ಇದೇ ಜೂನ್ 2 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ. **ದರ್ಗಾ ಫೀಡರ್:** ಬಹುಮನಿ ಚೌಕ್, ಹೋಲಿ ಕಟ್ಟಾ, ಸರಾಫ್ ಬಜ್ಹಾರ್, ಗಣೇಶ ಮಂದಿರ, ಚಪ್ಪಲ್ ಬಜ್ಹಾರ್, ಕ್ಲಾತ್ ಬಜ್ಹಾರ್, ಸಜ್ಜನ್ ಕಾಂಪ್ಲೆಕ್ಸ್, ಫೂಲ್ ಮಾರ್ಕೆಟ್, ಮಕ್ತಾಮ್‌ಪುರ, ಜವಾಹರ್ ಹಿಂದ್ ಶಾಲೆ, ಬಕರಿಕಮೇಳಾ, ಮೋತಿ ವೈನ್ ಶಾಪ್, ನಯಾ ಮೊಹಲ್ಲಾ, ಸಂತ್ರಾಸವಾಡಿ ಲೊವರ್ ಲೇನ್, ಜಾಜಿ ಬ್ಲಾಕ್, ನ್ಯಾಷನಲ್ ಚೌಕ್, ಹಳೆ ಡಂಕಾ, ಓಲ್ಡ್ ಡಂಕಾ, ನೂರ್ ಬಾಗ್, ಡೆಕ್ಕನ್ ಪೇಪರ್, ಹಫ್ತ್ ಗುಂಬಜ್, ಜಲೀಮ್ ಕಂಪೌಂಡ್, ಮಕ್‌ಬರಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಮೀಜುಗುರಿ ಫೀಡರ್: ಕರ್ನಾಟಕ ಐಸ್ ಪ್ಯಾಕ್ಟರಿ, ತಾಜ್ ಐಸ್ ಪ್ಯಾಕ್ಟರಿ, ನಯಾ ಮೋಹಲ್ಲಾ, ಹಜ್ ಕಮಿಟಿ ಹಿಂದುಗಡೆ, ಮೀಜುಗುರಿ ವಾಟರ್ ಟ್ಯಾಂಕ್ ಹಿಂದುಗಡೆ , ಮುಸ್ಲಿಂ ಚೌಕ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಗಂಜ್ ಫೀಡರ್: ಸಂಜೀವ ಗಾಂಧಿನಗರ, ಆರ್ಯ ನಗರ, ಗಂಜ್ ಅಡತ್, ಬಂಬೂ ಬಜಾರ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. **ಹೌಸಿಂಗ್ ಬೋರ್ಡ ಫೀಡರ್:** ಗಂಜ್ ಬ್ಯಾಂಕ್ ಕಾಲೋನಿ, ಗಂಜ ಬಸ್‌ಸ್ಟ್ಯಾಂಡ ಎದುರುಗಡೆ, ಭವಾನಿ ಗುಡಿ, ಈಶ್ವರಗುಡಿ, ರಾಮಮಂದಿರ. ಬಿಯಾನಿ, ಜಿ.ಓ.ಎಸ್ ಪ್ರದೇಶ, ಲಾಹೋಟಿ ಕಲ್ಯಾಣ ಮಂಟಪ ಹಿಂಭಾಗ ಪ್ರದೇಶ, ಆದರ್ಶ ಸ್ಕೂಲ್ ಪ್ರದೇಶ ಕೆ.ಎಚ್.ಬಿ ಕಾಲೋನಿ, ನಗರೇಶ್ವರ ಶಾಲೆ ಎದುರುಗಡೆ ಪ್ರದೇಶ, ಕಲಂತ್ರಿ ಬಿಲ್ಡಂಗ್ ಪ್ರದೇಶ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಸಿನಿಮಾ ಫೀಡರ್: ಬಂಬೂ ಬಜಾರ, ಭೂವಿಗಲ್ಲಿ, ಚಪ್ಪರ ಬಂದಿ, ಐಯರ್‌ವಾಡಿ, ಕಾವೇರಿ ನಗರ, ನೆಹರು ನಗರ, ಮಹಾರಾಜ ಹೊಟೇಲ್, ಲಕ್ಷ್ಮೀ ನಗರ, ಅಕ್ಕ ತಂಗಿ ಟೆಂಪಲ್, ಕೆ.ಹೆಚ್.ಬಿ. ಕಾಲೋನಿ, ಲಂಗೋಟೆ ಫೀರ್ ದರ್ಗಾ, ಪಾಲಾದಿ ಗ್ಯಾಸ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. **ಬ್ರಹ್ಮಪೂರ ಫೀಡರ್:** ಶಹಬಜಾರ, ಶೆಟ್ಟಿಕಾಂಪ್ಲೆಕ್ಸ್, ಗದ್ಲೆಗಾಂವ, ಶಹಬಜಾರ ನಾಕಾ, ಶಹಬಜಾರ ಜಿ.ಡಿ.ಎ, ಕೈಲಾಶ ನಗರ, ಮಾಣೀಕೇಶ್ವರಿ ಕಾಲೋನಿ, ಲಾಲಗೇರಿ, ಗಂಗಾನಗರ, ಅಗ್ನಿಶಾಮಕದಳ, ಜನತಾ ಲೇಔಟ, ಕಾಳೆ ಲೇಔಟ, ಮಹಾಲಕ್ಷ್ಮೀ ಲೇಔಟ, ಚೌಡೇಶ್ವರಿ ಕಾಲೋನಿ, ಎನ್.ಆರ್. ಕಾಲೋನಿ, ಬಾಳೆ ಲೇಔಟ, ಅಗ್ರೀಕಲ್ಚರ ಲೇಔಟ, ಜಿ.ಡಿ.ಎ ವಕ್ಕಲಗೇರಾ, ಜಿ.ಡಿ.ಎ. ಶಹಬಜಾರ, ಹರಿಜನವಾಡಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು

ದುಬೈ ಕಾಲೋನಿ ಫೀಡರ್: ಎಮ್ ಜಿ. ಟಿ.ಟಿ, ಆಶ್ರಯ ಕಾಲೋನಿ, ದುಬೈ ಕಾಲೋನಿ ಶೇಖ ರೋಜಾ ಜಿಡಿಎ, ಕಸ್ತೂರಿ ನಗರ, ಸ್ವಾರ್ಗೆಟ್ ನಗರ, ಸುವರ್ಣ ನಗರ ಜಿ.ಡಿ.ಎ, ವೈಷ್ಣವಿ ದೇವಿ ಮಂದಿರ ಸುತ್ತಮುತ್ತಲಿನ ಪ್ರದೇಶ, ಚಿಂಚೋಳಿ ಕ್ರಾಸ್, ಭೀರಲಿಂಗೇಶ್ವರ ಮಂದಿರ ಏರಿಯಾ, ಶಿವಲಿಂಗೇಶ್ವರ ಮಂದಿರ ಸುತ್ತಲಿನ ಪ್ರದೇಶ, ಆಯುರ್ವೇದಿಕ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

**ಗೋಳಾ ಚೌಕ್ ಫೀಡರ್:** ಗಡಂಗ, ಗೋಳಾ ಚೌಕ್, ಮೋಮಿನಪುರಾ, ರಂಗಿನ್ ಮಸೀದಿ ಪುಟಾಣಿ ಗಲ್ಲಿ, ಹುಮನಾಬಾದ್ ಬೇಸ್, ಡಾ॥ ಚಿಂಚೋಳಿ ಆಸ್ಪತ್ರೆ, ಇಂದ್ರಾ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.31– ಕಲಬುರಗಿ ಜಿಲ್ಲಾಧಿಕಾರಿಗಳಿಂದ ಅನುಮೋದನೆಗೊಂಡಿರುವ ಶೇ. 5ರ 2023–24ನೇ ಸಾಲಿನ ವಿಕಲಚೇತನರ ಕಲ್ಯಾಣ ಕಾರ್ಯಕ್ರಮದಡಿ ವಿಕಲಚೇತನರಿಗೆ ತ್ರಿಚಕ್ರ ವಾಹನ (ಬಾಕಿ ಉಳಿದ ಎರಡು ತ್ರಿಚಕ್ರ ವಾಹನಗಳಿಗೆ ಮಾತ್ರ) ವಿತರಣೆ ಮಾಡಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಅಭ್ಯರ್ಥಿಗಳು ವಿಕಲಚೇತನರಾಗಿರಬೇಕು. ಕಲಬುರಗಿ ನಗರದ ನಿವಾಸಿಯಾಗಿರಬೇಕು. ಯುಐಡಿ ಕಾರ್ಡ್ ಹೊಂದಿರಬೇಕು. ವಾಹನ ಪರವಾನಿಗೆ (ಲೈಸೆನ್ಸ್) ಹೊಂದಿರಬೇಕು. ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಆವಕ ಶಾಖೆಯಿಂದ ಪಡೆದು ಭರ್ತಿ ಮಾಡಿ ದೃಢೀಕರಿಸಿದ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ 2025ರ ಜೂನ್ 17ರ ಸಂಜೆ 4.30 ಗಂಟೆಯೊಳಗಾಗಿ ಸದರಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾಗನರ ಪಾಲಿಕೆಯ ಶೇ 5ರ ಶಾಖೆಯನ್ನು ಹಾಗೂ http://www.kalaburagicity.mrc.gov ವೆಬ್‌ಸೈಟ್‌ನಲ್ಲಿ ಸಂಪರ್ಕಿಸಲು ಕೋರಲಾಗಿದೆ.

# ಗಬ್ಬೂರಿನ ವಿಕಲಚೇತನ ಮಹಿಳೆ ಹೊನ್ನಮ್ಮ ಕಾಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.31–ಜಿಲ್ಲೆಯ ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮದ ನಿವಾಸಿಯಾದ ವಿಕಲಚೇತನ ಹೊನ್ನಮ್ಮ ತಂದೆ ಸಾಬಯ್ಯ (24) ಎಂಬ ಮಹಿಳೆಯು ಮೇ 26ರ ಬೆಳಿಗ್ಗೆ 8 ಗಂಟೆಗೆ ಗಬ್ಬೂರ ಹೊಸ ಬಸ್ ನಿಲ್ದಾಣದ ಹತ್ತಿರ ಇರುವ ಆಂಜನೇಯ ದೇವಸ್ಥಾನದಲ್ಲಿ ಇದ್ದ ವಿಕಲಚೇತನರ ಕಾರ್ಯಕ್ರಮದಲ್ಲಿ ಭಾಗಿಯಾಗಿ ನಂತರ ಕಾಣೆಯಾದ ಬಗ್ಗೆ ಗಬ್ಬೂರು ಠಾಣಾ ಗುನ್ನೆ ನಂ–87/2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಹೊನ್ನವ್ವಳು ಹೊಲಿಗೆಯಂತ್ರದಿಂದ ಬಟ್ಟೆ ಹೊಲಿದು ಜೀವನ ನಡೆಸ್ತಿದ್ದಳು. ಈ ಮಧ್ಯೆ ವಿಕಲಚೇತನರಿಗೆ ಸಂಬಂಧಿಸಿದ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಿದ್ದಳು. ಮೇ 26ರ ಬೆಳಿಗ್ಗೆ 8 ಗಂಟೆಗೆ ತಮ್ಮ ತಂದೆ ಸಾಬಯ್ಯ ಜೊತೆಗೆ ಕಾರ್ಯಕ್ರಮಕ್ಕೆ ಹೋದವಳು ಕಾರ್ಯಕ್ರಮ ಬಳಿಕ ಕಾಣೆಯಾಗಿದ್ದಾಳೆ. ಚಹರೆ ಪಟ್ಟಿ: ಹೊನ್ನಮ್ಮ ಅವರು ಸದೃಢ ದೇಹ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಇದ್ದು, 5.0 ಅಡಿ ಎತ್ತರ, ವಕ್ರವಾದ ಕಾಲುಗಳಿದ್ದು, ನಡೆಯಲ್ಲಿ ಏರುಪೇರಾಗುತ್ತದೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಚೂಡಿದಾರ ಉಡುಪು ಧರಿಸಿದ್ದು, ಕನ್ನಡ ಮಾತನಾಡುತ್ತಾಳೆ. ಈ ಮಹಿಳೆಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗಬ್ಬೂರು ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 9480803860, ದೇವದುರ್ಗ ಸಿಪಿಐ ಮೊಬೈಲ್ ಸಂಖ್ಯೆ: 9480803835ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗಬ್ಬೂರ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಸಹಾಯಹಸ್ತ ಕಾರ್ಯ ಶ್ಲಾಘನೀಯ: ಭವಾನಿಸಿಂಗ್ ಠಾಕೂರ್





ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31 : ರಾಜ್ಯ ಮಟ್ಟದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ ದತ್ತಿನಿಧಿ ಪ್ರಶಸ್ತಿ, ಸನ್ಮಾನ, ಪ್ರತಿಭಾ ಪುರಸ್ಕಾರಗಳು, ಅರ್ಹ ಪತ್ರಕರ್ತರಿಗೆ ಗುರುತಿಸುವಿಕೆ ಕಾರ್ಯ ಪ್ರಾಮಾಣಿಕವಾಗಿ ನಡೆಯುತ್ತಿದೆ. ಅದೇ ರೀತಿ ಬೀದರ ಜಿಲ್ಲೆಯಲ್ಲಿ ಪತ್ರಕರ್ತರ ಮಕ್ಕಳಿಗೆ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ನೀಡಿ ಮಕ್ಕಳಿಗೆ ಪ್ರೋತ್ಸಾಹಿಸುವುದರ ಜೊತೆಗೆ ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಗುರುತಿಸಿ ಆಪತ್ ರಕ್ಷಕ ನಿಧಿಯಿಂದ ಸಹಾಯಧನ ನೀಡುತ್ತಿರುವುದು ಖುಷಿ ತಂದಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಿಂದ ನಡೆದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ 70 ಪ್ರತಿಶತಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಕೇರಳ ಕಾಸರಗೂಡಿನಲ್ಲಿ ಇತ್ತೀಚೀಗೆ ದತ್ತಿನಿಧಿ ಪ್ರಶಸ್ತಿಗೆ ಭಾಜನರಾದ ಹಿರಿಯ ಪತ್ರಕರ್ತ ಮೌಲಾನಾಸಾಬ್ (ಹಾಜಿಪಾಶಾ) ಅವರಿಗೆ ಸನ್ಮಾನ ಹಾಗೂ ಸಂಕಷ್ಟಕ್ಕೆ ಒಳಗಾದ ಪತ್ರಕರ್ತೆ ಕೀರ್ತಿ ಸೇನಾ ಅವರಿಗೆ ಆಪತ್‌ರಕ್ಷಕ ನಿಧಿಯಿಂದ ಸಹಾಯಧನ ವಿತರಣೆ ಮಾಡಿ ಮಾತನಾಡಿದರು. ಇಂದು ಪತ್ರಿಕಾರಂಗ ಕವಲುದಾರಿಯಲ್ಲಿ ಸಾಗುತ್ತಿದೆ. ಸ್ವಹಿತಾಸಕ್ತಿಗಾಗಿ ಪತ್ರಕರ್ತರು ಕಾರ್ಯ ಮಾಡದೆ ಸಮಾಜ ಸೇವೆ ಉದ್ದೇಶ ಇಟ್ಟುಕೊಂಡು ಸೇವೆ ಮಾಡುವ ಅವಶ್ಯಕತೆ ಇದೆ. ಇಂತಹ ಪತ್ರಕರ್ತರಿಗೆ ಸಮಾಜದಲ್ಲಿ ಸೂಕ್ತ ಸ್ಥಾನಮಾನ ಮತ್ತು ಗೌರವ ಲಭಿಸುತ್ತದೆ. ಬಡವರ ಜ್ವಲಂತ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಕಾರ್ಯ ಪತ್ರಕರ್ತರು ಮಾಡಬೇಕಾಗಿದೆ. ಪತ್ರಕರ್ತರ ಮೇಲೆ ಜನ ಇಂದಿಗೂ ಭರವಸೆ ಇಟ್ಟುಕೊಂಡಿದ್ದಾರೆ. ಪತ್ರಕರ್ತರು ಪ್ರಬುದ್ಧರು ಎನ್ನುವ ಭಾವನೆ ಜನರಲ್ಲಿದೆ. ಅದನ್ನು ನಾವು ಉಳಿಸಿಕೊಳ್ಳುವ ಅವಶ್ಯಕತೆಯಿದೆ. ಪತ್ರಕರ್ತರೆಂಬ ಅಹಂಕಾರ ನಮ್ಮಲ್ಲಿರದೆ ಸಮಾಜಸೇವಕನೆಂಬ ಭಾವ ಮೂಡಬೇಕು. ಇಂದು ಸನ್ಮಾನ, ಪ್ರತಿಭಾ ಪುರಸ್ಕಾರಗಳು ಮತ್ತು ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಸಹಾಯಹಸ್ತ ಚಾಚುತ್ತಿರುವುದನ್ನು ನೋಡಿದರೆ ರಾಜ್ಯದಲ್ಲಿ ಬೀದರ ಪತ್ರಕರ್ತರ ಸಂಘ ಉತ್ತಮವಾಗಿ ಕಾರ್ಯ ಮಾಡುತ್ತಿದೆ ಎಂಬ ಸಂತಸದ ಭಾವ ಮೂಡಿದೆ ಎಂದರು.

ಹಿರಿಯ ಪತ್ರಕರ್ತ ಬಾಬು ವಾಲಿ ಮಾತನಾಡಿ, ಬೀದರ ಜಿಲ್ಲೆಯಲ್ಲಿ ಪತ್ರಕರ್ತರು ಮತ್ತು ಪತ್ರಕರ್ತರ ಸಂಘ ಕ್ರಿಯಾಶೀಲ ರೀತಿಯಲ್ಲಿ ಕೆಲಸ ಮಾಡುತ್ತಿದೆ. ಒಳ್ಳೆಯ ಉದ್ದೇಶ ಇಟ್ಟುಕೊಂಡು ಪತ್ರಿಕಾ ರಂಗಕ್ಕೆ ಬಂದವರು ಕೊನೆವರೆಗು ಇರುತ್ತಾರೆ. ಕೆಟ್ಟ ಉದ್ದೇಶ ಇಟ್ಟುಕೊಂಡವರು ಮಧ್ಯದಲ್ಲಿಯೇ ಹೊರ ನಡೆಯುತ್ತಾನೆ. ಬೀದರ ಜಿಲ್ಲಾ ಪತ್ರಕರ್ತರಲ್ಲಿ ಐಕ್ಯತೆಯಿದೆ. ಸೌಹಾರ್ದತೆಯಿಂದ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾದ್ಯಕ್ಷ ಡಿ.ಕೆ ಗಣಪತಿ ಮಾತನಾಡಿ, ಸಂಘದ ಚುಕ್ಕಾಣಿ ಯಾರೇ ಹಿಡಿಯಲಿ. ಸೌಹಾರ್ದತೆಯಿಂದ ಮತ್ತು ಐಕ್ಯತೆಯಿಂದ ಮುನ್ನಡೆಸಿಕೊಂಡು ಹೋಗುವ ಅವಶ್ಯಕತೆ ಇದೆ. ದತ್ತಿನಿಧಿ ಪ್ರಶಸ್ತಿಗೆ ಭಾಜನರಾದ ಹಾಜಿಪಾಶಾ ಅವರು ಸ್ವಾಭಿಮಾನಿ ಪತ್ರಕರ್ತರಾಗಿದ್ದಾರೆ. ಅವರು ಯಾವತ್ತೂ ಯಾರಿಗೂ ಕೈಯೊಡ್ಡಿ ಬೇಡಿದವರಲ್ಲ. ಹೀಗಾಗಿ ಅವರನ್ನು ಸನ್ಮಾನಿಸುವುದರ ಜೊತೆಗೆ ಮಕ್ಕಳ ಪ್ರತಿಭೆ ಗುರುತಿಸಿ ಸನ್ಮಾನಿಸಲಾಗಿದೆ. ಸಂಘವನ್ನು ಇದೇ ರೀತಿ ಮುನ್ನಡೆಸಿಕೊಂಡು ಹೋಗೋಣ. ಸದ್ಯ ಚುನಾವಣೆ ಬಗ್ಗೆ ಯಾರೂ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚಿಸಬೇಡಿ ಎಂದರಲ್ಲದೆ ರಾಜ್ಯದಲ್ಲಿ ಸಂಘವನ್ನು ಒಂದು ಮಾದರಿ ಸಂಘವನ್ನಾಗಿ ಮಾಡೋಣ ಎಂದರು.

ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ ಕಾಮಶೆಟ್ಟಿ ಮಾತನಾಡಿದರು. ವೇದಿಕೆ ಮೇಲೆ ಹಿರಿಯ ಪತ್ರಕರ್ತರಾದ ಗಂಧರ್ವ ಸೇನಾ, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರಾದ ಅಪ್ಪಾರಾವ ಸೌದಿ, ಸಂಘದ ನಿಕಟಪೂರ್ವ ಅಧ್ಯಕ್ಷ ಅಶೋಕಕುಮಾರ ಕರಂಜಿ, ಜಿಲ್ಲಾ ಉಪಾಧ್ಯಕ್ಷ ಶ್ರೀನಿವಾಸ ಚೌಧರಿ, ಮಾಳಪ್ಪ ಅಡಸಾರೆ ಉಪಸ್ಥಿತರಿದ್ದರು. ಸಂಘದ ಉಪಾಧ್ಯಕ್ಷ ನಾಗಶೆಟ್ಟಿ ಧರಂಪೂರ ಸ್ವಾಗತಿಸಿದರು. ಪ್ರದಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ನಿರೂಪಿಸಿದರು. ಪೃಥ್ವಿ-ರಾಜ್ ಎಸ್ ವಂದಿಸಿದರು.

ಸಂಕಷ್ಟಕ್ಕೆ ಒಳಗಾದ ಕೀರ್ತಿ ಸೇನಾ ಅವರಿಗೆ ಪರಿಹಾರ ಚೆಕ್ ವಿತರಣೆ ಮಾಡಲಾಯಿತು. ದತ್ತಿನಿಧಿ ಪ್ರಶಸ್ತಿಗೆ ಭಾಜನರಾದ ಮೌಲಾನಾ ಸಾಬ್ (ಹಾಜಿಪಾಶಾ) ಅವರನ್ನು ಸನ್ಮಾನಿಸಲಾಯಿತು. ಪ್ರತಿಭಾ ಪುರಸ್ಕಾರಕ್ಕೆ ಭಾಜನರಾದ ಪಿ.ಯು.ಸಿ ವಿದ್ಯಾರ್ಥಿಗಳಾದ ತನಿಶ್ ತಂದೆ ಓಂಕಾರ ಮಠಪತಿ. ಕು. ದಿವ್ಯಮಣಿ ತಂದೆ ಗೋಪಿಚೆಂದ ತಾಂದಳೆ, ವಿನಯ ತಂದೆ ಸಂಜೆಯ ದಂತಕಾಳೆ ಹಾಗೂ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಾದ ಕು. ಜಗದೇಶ್ವರಿ ತಂದೆ ನಾಗಶೆಟ್ಟಿ ದರಂಪುರ್, ಆದಿತ್ಯ ತಂದೆ ನಾಗೇಶ ಪ್ರಭಾ, ಶರಣಬಸವ ತಂದೆ ಮಲ್ಲಿಕಾರ್ಜುನ್ ಮರಕಲೆ ಇವರನ್ನು ಸನ್ಮಾನಿಸಲಾಯಿತು.

## ಸುಂದರಮ್ಮ ಮೈಲಾರೆ ನಿಧಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31: ಭಾಲ್ಕಿ ತಾಲ್ಲೂಕಿನ ಮಾಸಿಮಾಡ ಗ್ರಾಮದ ಹಿರಿಯರಾದ ಸುಂದರಮ್ಮ ವೀರಶೆಟ್ಟಿ ಮೈಲಾರೆ (94) ಶನಿವಾರ ನಿಧನರಾದರು.

ಅವರಿಗೆ ಬೀದರನ ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಸೇರಿ ಇಬ್ಬರು ಪುತ್ರರು ಹಾಗೂ ಐವರು ಪುತ್ರಿಯರು ಇದ್ದಾರೆ.

ಸ್ವಗ್ರಾಮ ಮಾಸಿಮಾಡದ ಅವರ ಹೊಲದಲ್ಲಿ ಸಂಜೆ ಅಂತ್ಯಕ್ರಿಯೆ ಜರುಗಿತು.



ಭಾಲ್ಕಿ: ಪಟ್ಟಣದ ಪುರಸಭೆ ಮುಂಭಾಗದಲ್ಲಿ ಪೌರಕಾರ್ಮಿಕರು ವಿವಿಧ ಬೇಡಿಕೆಗಳ ಈಡೇರಿ-ಕೆಗೆ ಆಗ್ರಹಿಸಿ ನಡೆಸುತ್ತಿರುವ ನಿರ್ದಿಷ್ಟ ಅವಧಿ ಮುಷ್ಕರ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ನಿವೃತ್ತ ನೌಕರ ಸಂಘದ ತಾಲೂಕಾಧ್ಯಕ್ಷ ಬಸವರಾಜ ಮರೆ ಬೆಂಬಲ ವ್ಯಕ್ತಪಡಿಸಿದರು. ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ಬಿರಾದಾರ್, ಉಪಾಧ್ಯಕ್ಷ ಶಾಂತವೀರ ಪಾಟೀಲ್, ಬಾಬುರಾವ್ ಬಿಚ್ಕುಂದೆ, ರಾಜಣ್ಣ ಶೇರಿಕಾರ್, ಶಿವಾನಂದ ಗುಂದಗೆ, ಅಶೋಕ್ ಕಾರಬಾರಿ, ಬಸವರಾಜ ಅಂಬರ ಶೆಟ್ಟಿ ಇತರರು ಉಪಸ್ಥಿತರಿದ್ದರು.

## ಗುರು ನಾನಕ ಶಾಲೆಯಲ್ಲಿ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31: 10ನೇ ಸಿಬಿಎಸ್‌ಇ ಪರೀಕ್ಷೆಯಲ್ಲಿ ಶಾಲೆಗೆ ಟಾಪರ್ ಆಗಿ ಹೊರಹೊಮ್ಮಿದ ಪ್ರತಿಭಾವಂತ ಮಕ್ಕಳಿಗೆ ಸಂಸ್ಥೆ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ ಅವರು ಆತ್ಮೀಯವಾಗಿ ಸನ್ಮಾನಿಸಿ ಶುಭಹಾರೈಸಿದರು. ಶಾಲೆಯಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಮಾತನಾಡಿದ ಕೌರ ಅವರು ವಿದ್ಯಾರ್ಥಿಗಳ ಈ ಅದ್ಭುತ ಸಾಧನೆಗೆ ಅವರ ಸತತವಾದ ಕಠಿಣ ಪರಿಶ್ರಮ, ಪೋಷಕರ ಸಹಕಾರ ಹಾಗೂ ಶಿಕ್ಷಕರ ಪರಿಣಾಮಕಾರಿ ಬೋಧನೆ ಮತ್ತು ಆಡಳಿತ ಮಂಡಳಿಯ ಸುವ್ಯವಸ್ಥಿತ ಮಾರ್ಗದರ್ಶನದಿಂದ ಸಾಧ್ಯವಾಗಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಮಕ್ಕಳು ಈ ಸಾಧನೆ ಒಂದೆ ದಿನದಲ್ಲಿ ಕಷ್ಟಪಟ್ಟು ಮಾಡಿದಲ್ಲ. ಇದು ನಿರಂತರವಾದ ಅವರ ಪರಿಶ್ರಮ ಹಾಗೂ ತಂದೆ-ತಾಯಿಗಳ, ಶಿಕ್ಷಕ ವೃಂದದವರ ಸತತ ಸಹಕಾರ, ಬೋಧನೆಗಳ ಪರಿಣಾಮವಾಗಿ ಸಾಧ್ಯವಾಗಿದೆ. ನಮ್ಮ ಶಾಲೆ ಬುನಾದಿಯಿಂದಲೇ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದರಿಂದಲೇ ಈ ರೀತಿಯ ಪ್ರತಿಭಾವಂತ ಮಕ್ಕಳು ಹೊರಹೊಮ್ಮುವುದಕ್ಕೆ ಸಾಧ್ಯವಾಗುತ್ತಿದೆ. ನಮ್ಮ ಆಡಳಿತ ಮಂಡಳಿಯ ಗು-ರಿಯು ಇದೇ ಆಗಿದೆ. ಇನ್ನೂ ಹೆಚ್ಚಿನ ರೀತಿಯಲ್ಲಿ ಇಂತಹ ಪ್ರತಿಭಾವಂತ ಮಕ್ಕಳನ್ನು ಹುಟ್ಟು ಹಾಕಿ ದೇಶ ಸೇವೆಗೆ ಕಳುಹಿಸುವ ಸಂಕಲ್ಪ ನಮ್ಮದಾಗಿದೆ ಎಂದು ತಮ್ಮ ಕನಸ್ಸನ್ನು ಬಿಚ್ಚಿಟ್ಟ ಅವರು ಸನ್ಮಾನಿತ ಮಕ್ಕಳು ಮುಂದಿನ ಜೀವನವನ್ನು ಉಜ್ವಲಗೊಳಿಸುವದರತ್ತ ಗಮನ ಹರಿಸಿ ಐಎಎಸ್, ಐಪಿಎಸ್ ನಲ್ಲಿ ಯಶಸ್ಸು ಸಾಧಿಸಿ ತಂದೆ ತಾಯಿಗಳಿಗೆ, ಶಾಲೆಗೆ ಕೀರ್ತಿ ತರುವಂತೆ ಶುಭಹಾರೈಸಿದರು. ತಮ್ಮ ಮುಂದಿನ ಭವಿಷ್ಯ ರೂಪಿಸಿಕೊಳ್ಳುವ ದಿನಗಳು ಇದೀಗ ಪ್ರಾರಂಭವಾಗಿದ್ದು, ತಾವು ಸರಿಯಾದ ದಿಕ್ಕಿನಲ್ಲಿ ಯೋಚಿಸಿ ಹೆಜ್ಜೆ ಇಡುವಂತೆ ವಿದ್ಯಾರ್ಥಿಗಳು ಮತ್ತು ಅವರ ಪೋಷಕರಿಗೆ ತಿಳಿಹೇಳಿ, ಮುಂದು ಎರಡು ವರ್ಷಗಳು ತಮ್ಮ ಭವಿಷ್ಯ ರೂಪಿಸುವ ವರ್ಷಗಳಾಗಿದ್ದು ಬಹು ಎಚ್ಚರಿಕೆಯಿಂದ ಅದನ್ನು ನಿಭಾಯಿಸಿಕೊಂಡು ಆಕಾಶದ ಎತ್ತರಕ್ಕೆ ಬೆಳೆಯುವಂತೆ ಕ-ರೆಕೊಟ್ಟರು.

ವಿದ್ಯಾರ್ಥಿ ಅನಿಷಾ ಯಾದವ್ ಈ ಸಂದರ್ಭದಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತ ಈ ಸಾಧನೆಗೆ ಪೋಷಕರ, ಶಿಕ್ಷಕರ ಹಾಗೂ ತನ್ನ ಕಠಿಣ ಪರಿಶ್ರಮ ಕಾರಣವಾಗಿದೆ. ತಮ್ಮ ಈ ಸಾಧನೆಗೆ ಸನ್ಮಾನಿಸಿ ಗೌರವಿಸುತ್ತಿರುವುದು ನಮಗೆ ಮತ್ತಷ್ಟು ಪ್ರೇರಣೆ ನೀಡಿದಂತಾಗಿದೆ. ಈ ಶಾಲೆಯಲ್ಲಿ ಶಿಕ್ಷಕರು ನೀಡುತ್ತಿರುವ ಗುಣಮಟ್ಟದ ಶಿಕ್ಷಣವೆ ಇದಕ್ಕೆ ಸಾಕ್ಷಿಯಾಗಿದೆ ಎಂದರು. ಈ ಸಂದರ್ಭದಲ್ಲಿ ಶ್ರೀ ನಾನಕ ಝಿರಾ ಸಾಹೇಬ್ ಫೌಂಡೇಷನ್ ಅಧ್ಯಕ್ಷ ಡಾ॥ ಎಸ್. ಬಲಬೀರ ಸಿಂಗ್, ಪ್ರಾಂಶುಪಾಲರಾದ ನಳಿನಿ ಡಿ.ಜಿ., ಮುಖೋಪಾಧ್ಯಯರಾದ ಶ್ರೀಮತಿ ಆರೀಫ್ ಹಾದಿ, ಅಮಜದ ಅಲಿ, ಹನುಮಾನ ಮತ್ತು ಪ್ರತಿಭಾವಂತ ಮಕ್ಕಳ ಪೋಷಕರು ಹಾಗೂ ಶಿಕ್ಷಕರ ವೃಂದ ಉಪಸ್ಥಿತರಿದ್ದರು.

## ಪಶು ವೈದ್ಯಕೀಯ ವಿವಿ ವಿಲೀನಕ್ಕೆ ವಿರೋಧ



ಮಲ್ಲಮ್ಮ ನುಡಿ ವಾರ್ತೆ

ಬೀದರ ಮೇ. 31: ತಾಲ್ಲೂಕಿನ ಕಮಠಾಣ ಸಮೀಪ ಇರುವ ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯವನ್ನು ಕೃಷಿ ವಿಶ್ವವಿದ್ಯಾಲಯದಲ್ಲಿ ವಿಲೀನಗೊಳಿಸುವುದಕ್ಕೆ ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಅಭಿಪ್ರಾಯ ಆಲಿಕೆಗೆ ಶನಿವಾರ ಪಶು ವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದ ಟಿ.ಎಂ. ವಿಜಯಭಾಸ್ಕರ್ ಅಧ್ಯಕ್ಷತೆಯ ಐವರ ಕೃಷಿ, ತೋಟಗಾರಿಕೆ ಹಾಗೂ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಪುನರ್‌ಸಂಘಟನೆ ಉನ್ನತಾಧಿಕಾರ ಸಮಿತಿಗೆ ಅವರು ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ರಚಿಸಲಾಗಿದ್ದ ಡಾ. ನಂಜುಂಡಪ್ಪ ವರದಿ ಹಾಗೂ ಜನರ ಬೇಡಿಕೆ ಹಿನ್ನೆಲೆಯಲ್ಲಿ ಬೀದ???ನಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪಿಸಲಾಗಿದೆ. ಸಮಗ್ರತೆಯ ಹೆಸರಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯವನ್ನು ಕೃಷಿ ವಿಶ್ವವಿದ್ಯಾಲಯದೊಂದಿಗೆ ವಿಲೀನಕ್ಕೆ ಮುಂದಾಗಿರುವುದು ಸರಿಯಲ್ಲ ಎಂದು ಸಮಿತಿಯ ಅಧ್ಯಕ್ಷ ಟಿ.ಎಂ. ವಿಜಯಭಾಸ್ಕರ್ ಅವರ ಗಮನ ಸೆಳೆದರು. ಪಶು ವೈದ್ಯಕೀಯ ವಿಶ್ವವಿದ್ಯಾಲಯ ಜಿಲ್ಲೆಯ ಪಶು ಸಂಪತ್ತು ಹಾಗೂ ರೈತರ ಏಳಿಗೆಗೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತಿದೆ. ದೇಸಿ ತಳಿಗಳ ಸಂವರ್ಧನೆಗೆ ಶ್ರಮಿಸುತ್ತಿದೆ. ಕರ್ನಾಟಕ, ನೆರೆ-ಯ ತೆಲಂಗಾಣ ಹಾಗೂ ಮಹಾರಾಷ್ಟ್ರದ ಪಶುಗಳಿಗೆ ವೈದ್ಯಕೀಯ ಸೇವೆ ಜತೆಗೆ ಪಶು ಪಾಲನೆಗೆ ಸಂಬಂಧಿಸಿದಂತೆ ರೈತರಿಗೆ ಮಾರ್ಗದರ್ಶನ ನೀಡುತ್ತಿದೆ ಎಂದು ಹೇಳಿದರು. ರಾಜ್ಯದ ಏಕೈಕ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಇದಾಗಿದೆ. ಹಿಂದುಳಿದ ಪ್ರದೇಶ ಎಂಬ ಕಾರಣಕ್ಕೆ ಸರ್ಕಾರ ಈ ಭಾಗ-ಕ್ಕೆ ವಿಶ್ವವಿದ್ಯಾಲಯ ಕೊಟ್ಟು, ಈಗ ಕಸಿದುಕೊಂಡರೆ ಅದಕ್ಕೆ ಅರ್ಥವೇ ಇರುವುದಿಲ್ಲ. ಹಾಗೆ ಮಾಡಿದರೆ ಈ ಭಾಗಕ್ಕೆ ದೊಡ್ಡ ಅನ್ಯಾಯವಾಗಲಿದೆ ಎಂದು ತಿಳಿಸಿದರು. ವಿಲೀನಗೊಳಿಸಿದರೆ ಪಶುವೈದ್ಯಕೀಯ ವಿಶ್ವವಿದ್ಯಾಲಯ ಮಹತ್ವ ಕಳೆದುಕೊಳ್ಳುತ್ತದೆ. ಹೈನುಗಾರಿಕೆ ಕ್ಷೇತ್ರಕ್ಕೆ ಕೊಡಲಿ ಪೆಟ್ಟು ಬೀಳುತ್ತದೆ. ಪಶು ವೈದ್ಯಕೀಯ ಕ್ಷೇತ್ರದೊಂದಿಗೆ ರಾಜ್ಯದ ಆರ್ಥಿಕ ಬೆಳವಣಿಗೆ ಮೇಲೂ ಪರಿಣಾಮ ಉಂಟಾಗುತ್ತದೆ. ಈಗಾಗಲೇ ವಿಶ್ವವಿದ್ಯಾಲಯವನ್ನು ವಿಲೀನ ಮಾಡದಂತೆ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಲಾಗಿದೆ. ವಿಲೀನಕ್ಕೆ ತಮ್ಮ ವಿರೋಧವಿದೆ ಎಂದು ಹೇಳಿದರು. ರಾಜ್ಯ ಸರ್ಕಾರ ಕೂಡಲೇ ವಿಲೀನ ಪ್ರಕ್ರಿಯೆಯನ್ನು ಕೈಬಿಡಬೇಕು. ಇಲ್ಲವಾದರೆ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ತಿಳಿಸಿದರು.

ಅಭಿಪ್ರಾಯ ಸಂಗ್ರಹದ ವೇಳೆ ಪಶು ವೈದ್ಯಕೀಯ ಕ್ಷೇತ್ರದಲ್ಲಿ ತೊಡಗಿಸಿಕೊಂಡವರು, ರೈತರು ಹಾಗೂ ವಿಶ್ವವಿದ್ಯಾಲಯದ ಸಿಬ್ಬಂದಿ ವಿಶ್ವವಿದ್ಯಾಲಯವನ್ನು ವಿಲೀನಗೊಳಿಸಬಾರದೆಂದು ಸಮಿತಿ ಎದುರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಶಿವಯ್ಯ ಸ್ವಾಮಿ ಹೇಳಿದ್ದಾರೆ.

ವಿಶ್ವವಿದ್ಯಾಲಯದ ಕುಲಪತಿ ಕೆ.ಸಿ. ವೀರಣ್ಣ, ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ. ಸಾಲಿಮಠ, ಪ್ರಮುಖರಾದ ಓಂಪ್ರಕಾಶ ರೊಟ್ಟೆ, ಜಗದೀಶ್ವರ ಬಿರಾದಾರ ಇದ್ದರು.

## ಪ್ರತಿ ವಾರ್ಡನಲ್ಲಿ ಯೋಗ ಕೇಂದ್ರ: ಭವರಲಾಲ್ ಆರ್ಯ

# ಯೋಗಮಯ ಬೀದರ: ಪತಂಜಲಿ ಗುರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31 : ಜಿಲ್ಲೆಯನ್ನು ಸಂಪೂರ್ಣ ಯೋಗಮಯ ಮಾಡುವುದು ಪತಂಜಲಿ ಯೋಗ ಸಮಿತಿಯ ಗುರಿಯಾಗಿದೆ ಎಂದು ಸಮಿತಿಯ ಕರ್ನಾಟಕ ಉಸ್ತುವಾರಿಯಾದ ಖ್ಯಾತ ಅಂತರರಾಷ್ಟ್ರೀಯ ಯೋಗ ಗುರು ಭವರಲಾಲ್ ಆರ್ಯ ಹೇಳಿದರು.

ನಗರದ ಸಪ್ನಾ ಮಲ್ಟಿಪ್ಲೆಕ್ಸ್ ಸಭಾಂಗಣದಲ್ಲಿ ಶನಿವಾರ ಪ್ರಾಣಾಯಾಯ, ಧ್ಯಾನ, ಯೋಗ ವಿಶೇಷ ಶಿಬಿರ ಹಾಗೂ ಯೋಗ ಶಿಕ್ಷಕರಿಗೆ ಪ್ರಮಾಣ ಪತ್ರ ವಿತರಣೆ ಸಮಾರಂಭವನ್ನು ಸಸಿಗೆ ನೀರೆರೆದು ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕಾಗಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಯೋಗದ ಕುರಿತು ಜನ ಜಾಗೃತಿ ಮೂಡಿಸಲಾಗುವುದು. ಬೀದರ್ ನಗರದ ಎಲ್ಲ 35 ವಾರ್ಡಗಳಲ್ಲಿ ಯೋಗ ತರಬೇತಿ ಕೇಂದ್ರಗಳನ್ನು ಆರಂಭಿಸಲಾಗುವುದು. ಕೇಂದ್ರಗಳಿಗೆ ಯೋಗ ಪ್ರಭಾರಿಗಳನ್ನು ನೇಮಕ ಮಾಡಲಾಗುವುದು ಎಂದು ತಿಳಿಸಿದರು. ಯೋಗ ಒಂದು ತಪಸ್ಸಾಗಿದೆ. ಇದಕ್ಕೆ ಜಾತಿ, ಧರ್ಮದ ಭೇದವಿಲ್ಲ. ಪ್ರತಿಯೊಬ್ಬರೂ ಯೋಗವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ನಕಾರಾತ್ಮಕ ಮನೋಭಾವದಿಂದ ಸಕಾರಾತ್ಮಕ ಮನೋಭಾವದೆಡೆಗೆ ಕರೆದೊಯ್ಯುವ ಶಕ್ತಿ ಯೋಗಕ್ಕೆ ಇದೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷ ಯೋಗೇಂದ್ರ ಯದಲಾಪುರೆ ಮಾತನಾಡಿ, ಎಲ್ಲರೂ ಭೋಗಿ-ರೋಗಿಗಳಾಗದೆ, ಯೋಗಿಗಳಾಗಿ ಸಮಾಜ ಹಾಗೂ ದೇಶಕ್ಕೆ ಉಪಯೋಗಿ ಆಗಬೇಕು ಎಂದು ಹೇಳಿದರು. ನಿತ್ಯ ಶ್ರದ್ಧೆಯಿಂದ ಯೋಗ ಮಾಡುವುದರಿಂದ ಅನೇಕ ದೈಹಿಕ ಹಾಗೂ ಮಾನಸಿಕ ಲಾಭಗಳಿವೆ. ಯೋಗದಿಂದ ಸಾತ್ವಿಕ ಗುಣಗಳನ್ನು ಸಹ ಬೆಳೆಸಿಕೊಳ್ಳಲು ಸಾಧ್ಯವಿದೆ ಎಂದು ತಿಳಿಸಿದರು. ಶಿಬಿರಾರ್ಥಿಗಳಿಗೆ ಯೋಗ ಮಾರ್ಗದರ್ಶಿ ಕಿರು ಹೊತ್ತಿಗೆ ವಿತರಿಸಲಾಯಿತು. ಐ ಎನ್ ಒ ನವದೆಹಲಿ ಕಚೇರಿ ಪ್ರಭಾರಿ ತ್ರಿಭವನ್, ರಾಜ್ಯ ಸಂಚಾಲಕ ಗುರುನಾಥ ರಾಜ-ಗೀರಾ, ಜಿಲ್ಲಾ ಘಟಕದ ಅಧ್ಯಕ್ಷ ಗೋರಕನಾಥ ಕುಂಬಾರ, ಪ್ರಧಾನ ಕಾರ್ಯದರ್ಶಿ ಸಂತೋಷ್ ಪಾಟೀಲ, ಸಂಚಾಲಕಿ ಡಾ. ಮಂಜುಳಾ ಮುಚಳಂಬೆ, ಪ್ರಮುಖರಾದ ಕಂಟೆಪ್ಪ ಗಂದಿಗುಡಿ, ರಾಜಕುಮಾರ ಕಮಠಾಣೆ, ಅಣ್ಣೆಪ್ಪ ಸ್ವಾಮಿ, ಜಗನ್ನಾಥ ಭಂಗೂರೆ, ವಿಜಯಕುಮಾರ ಬಾಬಣೆ, ನವೀನ್ ಘುಳೆ, ಶಿವಕುಮಾರ ಸಂಗೋಳಗಿ, ವೈಜಿನಾಥ ಸ್ವಾಮಿ, ರಾಘವೇಂದ್ರ ಕುಲಕರ್ಣಿ, ರಮೇಶ ಬಿರಾದಾರ, ಹುಲೆಪ್ಪ ಬರದಾಬಾದೆ, ಶಿವಮೂರ್ತಿ ಬಟನಾಪುರೆ, ದೇವೇಂದ್ರ, ವೀರೇಶ, ಶಿವಶರಣಪ್ಪ ಮೂಲಗೆ, ಶಿವಶರಣಪ್ಪ ದಾನಾ, ಉಮಾದೇವಿ ಹೂಗಾರ್, ರಾಜೇಶ್ವರಿ ಕಲಮ್, ಲಲಿತಾ ಗಾದಗೆ, ನಾಗರಾಜ ಕಮಠಾಣೆ, ರವಿ ತೆಲಗಾಣೆ, ಗುರುನಾಥ ಮೂಲಗೆ, ಸತ್ಯವಾನ್ ಮುರ್ಕಿ, ಮಲ್ಲಿಕಾರ್ಜುನ ನೆಲವಾಡ, ಕೃಷ್ಣ ರೆಡ್ಡಿ, ಅಶೋಕ ರೆಡ್ಡಿ, ಭಗವಂತ ಎಂಪಳ್ಳಿ, ನಂದಾ ಬಿರಾದಾರ, ಮಹಾನಂದ ಬರದಾಬಾದೆ, ವಿದ್ಯಾವತಿ ಸಜ್ಜನ್, ಶಾರದಾ, ಅನಿತಾ ಪರೀಟ್, ಲಲಿತಾ ಸ್ವಾಮಿ, ಜಿಲ್ಲೆಯ ಎಲ್ಲ ತಾಲ್ಲೂಕುಗಳ ಪತಂಜಲಿ ಯೋಗ ಸಮಿತಿಯ ಪದಾಧಿಕಾರಿಗಳು, ಯೋಗ ಸಾಧಕರು ಹಾಗೂ ಯೋಗಾಸಕ್ತರು ಹಾಜರಿದ್ದರು.

### ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಳದ ಪ್ರಯತ್ನ

# 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮ

## ಅನುಷ್ಠಾನದಲ್ಲಿ 'ಶಕ್ತಿ ನೆಲ' ರಾಯಚೂರ ಜಿಲ್ಲೆ ಮುಂದೆ

ಮಕ್ಕಳಿಗೆ ಶಿಕ್ಷಣ ಕೊಡಲು ಪೋಷಕರು ಸರ್ಕಾರಿ ಶಾಲೆಗಳತ್ತ ಆತ್ಮವಿಶ್ವಾಸದಿಂದ ಹೆಜ್ಜೆ ಇಡಲು ಪ್ರೇರಣೆ ನೀಡುವ ನಿಟ್ಟಿನಲ್ಲಿ ರೂಪಿಸಿರುವ, ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಬಲವರ್ಧನೆಯ ಕಾರ್ಯಕ್ರಮವಾದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಅನುಷ್ಠಾನದಲ್ಲಿ ಕಲ್ಯಾಣ ಕರ್ನಾಟಕ ಭಾಗದ 'ಶಕ್ತಿ ನೆಲ' ಖ್ಯಾತಿಯ ರಾಯಚೂರ ಜಿಲ್ಲೆಯು ಅತ್ಯುತ್ತಮ ಪ್ರಗತಿ ಸಾಧಿಸಿದೆ.

2025-26ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ, ಪ್ರಾಥಮಿಕ, ಪೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜು ಮಕ್ಕಳ ದಾಖಲಾತಿ ಹೆಚ್ಚಿಸಲು ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ ಏರ್ಪಡಿಸಿ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕುರಿತಂತೆ ಸವಿವರವಾದ ಸುತ್ತೋಲೆಯನ್ನು ಮಾನ್ಯ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು 2025ರ ಏಪ್ರೀಲ್ 25ರಂದು ಹೊರಡಿಸಿ ಸೂಚನೆ ನೀಡಿದ್ದರು.

ತಮ್ಮ ಮಕ್ಕಳ ಭವಿಷ್ಯವು ಉಜ್ವಲವಾಗಬೇಕು ಎಂಬುದು ಪ್ರತಿಯೊಬ್ಬ ಪೋಷಕರ ಆಶಯವಾಗಿರುತ್ತದೆ. ಪೋಷಕರ ತಲೆಯಲ್ಲಿರುವ ಇಂತಹ ವಿಚಾರಗಳನ್ನು ಗಮನದಲ್ಲಿರಿಸಿಕೊಂಡು ಶಾಲಾ ಶಿಕ್ಷಣ ಇಲಾಖೆಯು ರೂಪಿಸುವ ಕಾರ್ಯಕ್ರಮಗಳನ್ನು ಶಿಸ್ತುಬದ್ಧವಾಗಿ ಅನುಷ್ಠಾನಗೊಳಿಸಿ ಇಲಾಖೆಯ ಆಶಯವನ್ನು ಅರ್ಥೈಸಿಕೊಂಡು ಕಾರ್ಯಕ್ಷಮತೆಯಿಂದ ಮತ್ತು ಕಾಳಜಿಯಿಂದ ರಾಯಚೂರ ಜಿಲ್ಲೆಯ ಶಿಕ್ಷಣ ಇಲಾಖೆಯ ಅಧಿಕಾರಿಗಳು ಶ್ರಮವಹಿಸಿದ್ದರಿಂದ ಮಹತ್ವದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮವು ರಾಯಚೂರ ಜಿಲ್ಲೆಯಲ್ಲಿ ಯಶ ಕಂಡಿದೆ. ಏನಿದು ಕಾರ್ಯಕ್ರಮ?: ಶಾಲಾ ಶಿಕ್ಷಣವನ್ನು ಬಲಪಡಿಸಲು ಎಲ್ಲಾ ಮಕ್ಕಳು ಸಾರ್ವತ್ರಿಕ ಶಿಕ್ಷಣಕ್ಕೆ ಒಳಪಡಿಸುವುದು ಅಗತ್ಯವಾದ ಹಿನ್ನೆಲೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ನಿಟ್ಟಿನಲ್ಲಿ 2025-26ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಸರ್ಕಾರಿ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ಸಂಬಂಧ ಶೈಕ್ಷಣಿಕ ಸಂವಾದ ಮತ್ತು ಜಾಗೃತಿಯನ್ನು ಪೋಷಕರಲ್ಲಿ ಮೂಡಿಸಲು ತಾಲೂಕು/ವಲಯ ಹಂತದಲ್ಲಿ ಒಂದು ಹಾಗೂ ಹೋಬಳಿ ಮಟ್ಟದಲ್ಲಿ ಒಂದು ದಿನದ ಪ್ರೇರಣಾತ್ಮಕ ಶಾಲಾ ಕಾರ್ಯಕ್ರಮ ಏರ್ಪಡಿಸಲು ಈ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮದಡಿಯೋಜಿಸಲಾಗಿದೆ. ಈ ಬಗ್ಗೆ ಈಗಾಗಲೇ ಶಾಲಾ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲ ಸ್ತರದ ಅಧಿಕಾರಿಗಳಿಗೆ ತರಬೇತಿಯನ್ನು ಸಹ ನೀಡಲಾಗಿದೆ. ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ವಿಧಾನ ಮತ್ತು ಪೂರ್ವ ತಯಾರಿಗಾಗಿ ತರಬೇತಿ ಮಾರ್ಗಸೂಚಿ ಸೇರಿದಂತೆ ಕಾರ್ಯಕ್ರಮ ಅನುಷ್ಠಾನದ ಸಮಗ್ರ ರೂಪುರೇಷಗಳನ್ನು ಸಿದ್ಧಪಡಿಸಿ ಅನುಷ್ಠಾನಕ್ಕೆ ತರಲಾಗುತ್ತಿದೆ.

ತಾಲೂಕು, ಹೋಬಳಿ ಮಟ್ಟದಲ್ಲಿ ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯಕ್ರಮ ಏರ್ಪಡಿಸಲು ತರಬೇತಿ ನೀಡಲಾಗುತ್ತದೆ. ಪ್ರತಿ ಕಾರ್ಯಕ್ರಮಕ್ಕೆ ಪೋಷಕರು, ಎಸ್‌ಡಿಎಂಸಿ ಸದಸ್ಯರು, ಅಡುಗೆ ಸಿಬ್ಬಂದಿ ಮತ್ತು ಸಹಾಯಕರು, ಗ್ರಾಮ ಪಂಚಾಯತ್ ಅಥವಾ ವಾರ್ಡನ ಸದಸ್ಯರು, ಹಳೆಯ ವಿದ್ಯಾರ್ಥಿಗಳು, ಹತ್ತಿರದ ಸರ್ಕಾರಿ ಶಾಲೆಗಳ ಶಿಕ್ಷಕರು, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರನ್ನು ಆಹ್ವಾನಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವವರಿಗೆ ಸಮೀಕ್ಷಾ ಹಾಳೆ ನೀಡಿ ಅವರಿಂದ ಶಾಲೆ ಅಥವಾ ಕಾಲೇಜುಗಳಲ್ಲಿ ಗಮನಿಸಿರುವ ಮೂಲ ಸೌಕರ್ಯ, ದೊರೆಯುತ್ತಿರುವ ಶೈಕ್ಷಣಿಕ ಸೌಲಭ್ಯ, ಪ್ರೋತ್ಸಾಹ ಕಾರ್ಯಕ್ರಮಗಳು, ಕಲಿಕಾ ಗುಣಮಟ್ಟ ಮತ್ತು ವಾತಾವರಣ ಇತ್ಯಾದಿಗಳ ಅಭಿಪ್ರಾಯ ಸಂಗ್ರಹಿಸುವುದು, ಪಾಲ್ಗೊಂಡವರೊಂದಿಗೆ ಸಂವಾದ ನಡೆಸಿ ಅವರ ಸಲಹೆಗಳನ್ನು ಸ್ವೀಕರಿಸಲಾಗುತ್ತದೆ.

ಪ್ರಮುಖ ಭಾಗಿದಾರರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ ಅವರೊಂದಿಗೆ ಶೈಕ್ಷಣಿಕ ಸೌಲಭ್ಯಗಳು, ಕಲಿಕಾ ಬಲವರ್ಧನೆಯ ಕಾರ್ಯಕ್ರಮಗಳು ಮತ್ತು ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮದ ಬಗ್ಗೆ ಚರ್ಚಿಸಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ. ಜಿಲ್ಲಾಮಟ್ಟದ ಆನಲೈನ್ ತರಬೇತಿ, ಕಾರ್ಯಕ್ರಮದಲ್ಲಿ ಬಳಸುವ ನಮೂನೆಗಳು, ಕಾರ್ಯಕ್ರಮ ಅನುಷ್ಠಾನದಲ್ಲಿ ವಿಭಾಗೀಯ ಅಪರ ಆಯುಕ್ತರ ಪಾತ್ರ ಮತ್ತು ಮೇಲ್ವಿಚಾರಣೆಯ ಜವಾಬ್ದಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳ ಪಾತ್ರ ಮತ್ತು ಜವಾಬ್ದಾರಿಯ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ನಮ್ಮ ಶಾಲೆ ನಮ್ಮ ಜವಾಬ್ದಾರಿ-ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಬಲವರ್ಧನೆ ಕಾರ್ಯಕ್ರಮಕ್ಕೆ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿ ಚಾಲನೆ ನೀಡಿದ್ದು, ಮುಖ್ಯಮಂತ್ರಿ ಅವರು ತಾವು ಓದಿದ ಕುಪ್ಪೇಗಾಲದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಸಿದ್ದರಾಮನಹುಂಡಿಯ ಕೆ.ಪಿ.ಎಸ್ ಶಾಲೆಗೆ 10 ಲಕ್ಷ ರೂ.ಗಳ ದೇಣಿಗೆ ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು ಸ್ಮರಣೀಯವಾಗಿದೆ.

ಕಾರ್ಯಕ್ರಮದ ಉದ್ದೇಶಗಳೇನು: ಮುಖ್ಯವಾಗಿ ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳಲ್ಲಿಯೇ ಪ್ರವೇಶ ಪಡೆದುಕೊಳ್ಳುವಂತೆ ಪ್ರೇರಣೆ ನೀಡುವುದು, ಸಮುದಾಯದಲ್ಲಿ ಶಿಕ್ಷಣದ ಮಹತ್ವ, ಸರ್ಕಾರಿ ಶಾಲೆಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಬಗ್ಗೆ ಹಾಗೂ ಇಲಾಖೆಯ ಶೈಕ್ಷಣಿಕ ಕಾರ್ಯಕ್ರಮಗಳ ಪ್ರೋತ್ಸಾಹದಾಯಕ ಯೋಜನೆಗಳ ಕುರಿತು ಪೋಷಕರಲ್ಲಿ ಜಾಗೃತಿ ಮೂಡಿಸುವುದು, ಮಕ್ಕಳಲ್ಲಿರುವ ಪೌಷ್ಠಿಕತೆ ಮತ್ತು ರಕ್ತಹೀನತೆ ನಿವಾರಿಸಲು ಮಧ್ಯಾಹ್ನ ಉಪಾಹಾರ ಯೋಜನೆ, ಕ್ಷೀರಭಾಗ್ಯ ಯೋಜನೆ ಮತ್ತು ಪೂರಕ ಪೌಷ್ಠಿಕ ಆಹಾರವಾಗಿ ಮೊಟ್ಟೆ ಬಾಳೆ ಹಣ್ಣು ರಾಗಿ ಮಾಲ್ಟ್ ವಿತರಣೆಯ ಕಾರ್ಯಕ್ರಮಗಳ ಮೂಲಕ ಮಕ್ಕಳ ನಿರಂತರ ಕಲಿಕೆಗಾಗಿ ಸರ್ಕಾರಿ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನೀಡುತ್ತಿರುವ ಪೌಷ್ಠಿಕ ಆಹಾರದ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸುವುದು ಈ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮದ ಉದ್ದೇಶಗಳಾಗಿವೆ.

ಆಶಾದಾಯಕ ಪ್ರಗತಿ: ರಾಯಚೂರ ಜಿಲ್ಲೆಯ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮದ ತಾಲೂಕುವಾರು ಮತ್ತು ಜಿಲ್ಲಾವಾರು ಪ್ರಗತಿಯು ಆಶಾದಾಯಕವಾಗಿದೆ. ಸರ್ಕಾರಿ ಶಾಲೆಗಳ ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು, ದಾನಿಗಳು ಸೇರಿದಂತೆ ಇನ್ನಿತರರನ್ನು ಒಳಗೊಂಡು ಇದುವರೆಗೆ 1418 ವಾಟ್ಸಪ್ ಗ್ರೂಪ ರಚಿಸಲಾಗಿದೆ. ರಾಯಚೂರ ಜಿಲ್ಲೆಯ ದೇವದುರ್ಗ ಬ್ಲಾಕ್‌ನಲ್ಲಿ 351 ಶಾಲೆಗಳಿದ್ದು 223 ವಾಟ್ಸಪ್ ಗ್ರೂಪ್ ಮಾಡಿ ಶೇ.63.53ರಷ್ಟು ಪ್ರಗತಿಯಾಗಿದೆ. ಅದೇ ರೀತಿ ಲಿಂಗಸುಗೂರು ಬ್ಲಾಕ್‌ನಲ್ಲಿ 364 ಶಾಲೆಗಳಿದ್ದು 350 ವಾಟ್ಸಪ್ ಗ್ರೂಪ್ ರಚಿಸಿ ಶೇ.96.15ರಷ್ಟು ಪ್ರಗತಿಯಾಗಿದೆ. ಅದೇ ರೀತಿ ಮಾನ್ವಿ ಬ್ಲಾಕ್‌ನಲ್ಲಿ 317 ಶಾಲೆಗಳಿದ್ದು 294 ವಾಟ್ಸಪ್ ಗ್ರೂಪ್ ರಚಿಸಿ ಶೇ.92.74ರಷ್ಟು ಪ್ರಗತಿ ಸಾಧಿಸಲಾಗಿದೆ. ರಾಯಚೂರು ಬ್ಲಾಕ್‌ನಲ್ಲಿ 314 ಶಾಲೆಗಳಿದ್ದು ಅಂದಾಜು 300 ವಾಟ್ಸಪ್ ಗ್ರೂಪ್ ರಚಿಸಿ ಶೇ.95.54ರಷ್ಟು ಪ್ರಗತಿ ಸಾಧಿಸಲಾಗಿದೆ. ಅದೇ ರೀತಿ ಸಿಂಧನೂರು ಬ್ಲಾಕ್‌ನಲ್ಲಿ 338 ಶಾಲೆಗಳಿದ್ದು 251 ವಾಟ್ಸಪ್ ಗ್ರೂಪ್ ರಚಿಸಿ ಶೇ.74.26ರಷ್ಟು ಪ್ರಗತಿ ಸಾಧಿಸಲಾಗಿದೆ. ಈ ವಾಟ್ಸಪ್ ಗ್ರೂಪಗಳ ಮೂಲಕ ಉತ್ತಮ ರೀತಿಯಲ್ಲಿ ಸಂವಹನ ಸಾಧ್ಯವಾಗಿದ್ದು, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ಹಿನ್ನೆಲೆಯಲ್ಲಿ ಚರ್ಚೆ, ಹಣಕಾಸಿನ ನೆರವು, ಪೀಠೋಪಕರಣ, ಪಾಠೋಪಕರಣಗಳ ಕೊಡುಗೆಗೆ ಅನುಕೂಲವಾಗಿದೆ.

ನಮ್ಮ ಶಾಲೆ ನಮ್ಮ ಕೊಡುಗೆ ಪ್ರಗತಿ: ರಾಯಚೂರ ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ಸಂಬಂಧ ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು ಸೇರಿದಂತೆ ಇನ್ನಿತರ ದಾನಿಗಳಿಂದ ಹಣ ಸಂಗ್ರಹವಾಗಿದೆ. ನಮ್ಮ ಶಾಲೆ ನಮ್ಮ ಕೊಡುಗೆಯಡಿ ದೇವದುರ್ಗ ಬ್ಲಾಕಿನ 315 ಶಾಲೆಗಳ ಪೈಕಿ 155 ಶಾಲೆಗಳಿಂದ 19,74,000 ರೂ ಮೊತ್ತ ಸಂಗ್ರಹವಾಗಿದೆ. ಲಿಂಗಸುಗೂರು ಬ್ಲಾಕಿನಲ್ಲಿ 364 ಶಾಲೆಗಳ ಪೈಕಿ 84 ಶಾಲೆಗಳಿಂದ ಒಟ್ಟು 68,34,750 ರೂ., ಮಾನ್ವಿ ಬ್ಲಾಕಿನಲ್ಲಿ 317 ಶಾಲೆಗಳ ಪೈಕಿ 38 ಶಾಲೆಗಳಿಂದ 9,76,922 ರೂ., ರಾಯಚೂರು ಬ್ಲಾಕಿನ 314 ಶಾಲೆಗಳ ಪೈಕಿ 37 ಶಾಲೆಗಳಿಂದ 7,18,000 ರೂ ಹಾಗೂ ಸಿಂಧನೂರು ಬ್ಲಾಕಿನ 338 ಶಾಲೆಗಳ ಪೈಕಿ 141 ಶಾಲೆಗಳಿಂದ 16,59,804 ರೂ ಸೇರಿದಂತೆ ಜಿಲ್ಲೆಯಲ್ಲಿನ ಒಟ್ಟು 1684 ಶಾಲೆಗಳ ಪೈಕಿ 455 ಶಾಲೆಗಳಿಂದ 1,21,63,476 ರೂ. ಸಂಗ್ರಹವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಮಾಹಿತಿ ನೀಡಿದ್ದಾರೆ.

ಮಕ್ಕಳ ದಾಖಲಾತಿ ಹೆಚ್ಚಿಸುವಲ್ಲಿ ಪೂರಕ: ರಾಯಚೂರ ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ 2024-25ನೇ ಸಾಲಿನಲ್ಲಿ 1 ರಿಂದ 10ನೇ ತರಗತಿವರೆಗೆ ಒಟ್ಟು 2,51,000 ಮಕ್ಕಳು ಪ್ರವೇಶ ಪಡೆದುಕೊಂಡಿದ್ದರು. 2025-26ನೇ ಸಾಲಿನಲ್ಲಿ ಈ ಸಂಖ್ಯೆಯನ್ನು ಹೆಚ್ಚಳ ಮಾಡಬೇಕು ಎನ್ನುವುದು ನಮ್ಮ ಉದ್ದೇಶವಾಗಿದೆ. 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮವು ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣವನ್ನು ಹೆಚ್ಚಿಸುವಲ್ಲಿ ಪೂರಕವಾಗಿದೆ ಎನ್ನುತ್ತಾರೆ ರಾಯಚೂರ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಅವರು.

**-ಗವಿಸಿದ್ದಪ್ಪ ಹೊಸಮನಿ,**
**ವಾರ್ತಾ ಸಹಾಯಕರು,**
**ವಾರ್ತಾ ಇಲಾಖೆ,**
**ರಾಯಚೂರ**

## ಪ್ರಶಿಕ್ಷಣಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಶರಣಪ್ಪ ಮೇಟಿ ಅಭಿಮತ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು: ಪಟ್ಟಣದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಶಿಕ್ಷಣ (ಬಿ.ಈಡಿ) ಮಹಾವಿದ್ಯಾಲಯದಲ್ಲಿ ಇಂದು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಿಗೆ ಶಿಕ್ಷಣದಲ್ಲಿ ನಾಟಕ ಮತ್ತು ಕಲೆ ಎಂಬಾ ಪ್ರಾಯೋಗಿಕ ಕಾರ್ಯಕ್ರಮ ನಡೆಯಿತು. ಸಂಸ್ಥೆಯ ಅಧ್ಯಕ್ಷ ಶರಣಪ್ಪ ಮೇಟಿಯವರು ಡೊಳ್ಳು ಬಾರಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ಶಿಕ್ಷಣದಲ್ಲಿ ಕೇವಲ ಪಾಠ ಪ್ರವಚನಗಳು ಅಷ್ಟೇ ಅಲ್ಲ. ಅದರ ಜೋತೆ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಶಿಕ್ಷಕ ಅಭಿನಯದ ಮೂಲಕ ಪಾಠ ಮಾಡುವುದರಿಂದ ಕಲಿಕೆ ಸುಲಭವಾಗುತ್ತದೆ ಎಂದು ಪ್ರಶಿಕ್ಷಣಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಈ ವೇಳೆ, ಮಹಾವಿದ್ಯಾಲಯದ ಪ್ರಾಚಾರ್ಯರಾದ ಶ್ರೀ ಡಾ.ಚನ್ನಬಸಪ್ಪ ಮೇಟಿ, ಸಹಾಯಕ ಪ್ರಾಧ್ಯಾಪಕ ವೀರೇಶ ಹಿರೇಮಠ. ಡಾ.ದಾನಮ್ಮ ಚನ್ನಿಗಾವಿ, ಶಿಲ್ಪಾ ಮೇಟಿ. ಮಂಜುಳಾ ಪಾಟೀಲ. ಗಂಗಮ್ಮ ಮೇಘರಾಜ. ರಾಮಬಾಬು ಬಸವರಾಜ ಪಾಟೀಲ, ವೀರೇಶ ಮಠ, ಯಲ್ಲಪ್ಪ ಬೊಮ್ಮಣಿಗಿ, ಗ್ರಂಥಪಾಲಕ, ಶಿವಾನಂದ ಇಸ್ಲಾಂಪುರ ಸೇರಿದಂತೆ ಪ್ರಶಿಕ್ಷಣಾರ್ಥಿಗಳ ಇದ್ದರೂ.

## ಸಾರ್ವಜನಿಕ ಆಸ್ಪತ್ರೆಯಲ್ಲಿ ತುಂಬಾಕು ಮುಕ್ತ ಯುವ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ವಿಶ್ವ ತಂಬಾಕು ರಹಿತ ದಿನ ಕುರಿತು ತಂಬಾಕು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ತಾಲೂಕು ಆಸ್ಪತ್ರೆ ಆವರಣದಲ್ಲಿ ಸಾರ್ವಜನಿಕರಿಗೆ ಮಾತನಾಡಿದ ಎನ್.ಸಿ.ಡಿ ವೈದ್ಯರಾದ ಡಾ: ರುದ್ರಮುನಿ ಗದ್ದಿ ಅವರು ತಂಬಾಕು ತಿಕ್ಕುವುದು. ಜಗಿಯುವುದು. ಧೂಮಪಾನ. ಗುಟ್ಕಾ. ನಶೆ ತಿಕ್ಕವುದರಿಂದ ಬಾಯಿ ಕ್ಯಾನ್ಸರ್

ದಂತ ಕ್ಯಾನ್ಸರ್. ಗಂಟಲು ತೆಊಂದರೆ ಉಂಟಾಗುತ್ತದೆ. ಮತ್ತು ಶ್ವಾಸಕೋಶ ತೊಂದರೆಯಿಂದ ಸಾವು ಸಂಭವಿಸಬಹುದು. ಅಲ್ಲದೇ ಕ್ಷಯ ರೋಗ ಲಕ್ಷಣ ಕಂಡುಬರುತ್ತವೆ. ಯುವಕರು ಮನೋರಂಜನೆಗೆ ಇಂಥ ಹವ್ಯಾಸ ಆರಂಭಿಸಿ ಕೊನೆಗೆ ವ್ಯಸನಿಗಳಾಗುತ್ತಾರೆ. ಈ ಬಗ್ಗೆ ಯುವ ಸಮುದಾಯ ಆರೋಗ್ಯ ಕಾಪಾಡಲು ಎಚ್ಚರಿಕೆ ಹೆಜ್ಜೆ ಇಡಲು ಕೋರಿದರು. ದಂತ ಆರೋಗ್ಯಾಧಿಕಾರಿ ಡಾ: ಶೋಭಾ ನಾಯಕ್ ಮಾತನಾಡಿ ತಂಬಾಕು ಸೇವನೆಯಿಂದ ಅದರಲ್ಲಿರುವ ನಿಕೋಟಿನ್. ಕಾರ್ಬನ್ ಮಾನಾಕ್ಸೈಡ್. ಫಾರ್ಮಾಲಿನ್. ಕ್ಯಾಡಿಯಂ ವಿಷ ರಾಸಾಯನಿಕ ಅಂಶಗಳು ಮನುಷ್ಯನ ನರಮಂಡಲ. ಶ್ವಾಸಕೋಶ. ಯಕ್ರತ್ತು, ಮೆದುಳಿನ ಮೇಲೆ ಪರಿಣಾಮ ಬೀರುತ್ತವೆ. ಇದರಿಂದ ಅನೇಕ ಗಂಭೀರ ಕಾಯಿಲೆ ಉಂಟಾಗುತ್ತವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್. ಸಾಂಕ್ರಾಮಿಕ ರೋಗ ತಜ್ಞ ಅಶೋಕ್. ಮಲೇರಿಯಾ ಮೇಲ್ವಿಚಾರಕ ಬಸವಲಿಂಗ. ಕ್ಷಯ ರೋಗ ಮೇಲ್ವಿಚಾರಕ ರವಿ ಕುಮಾರ. ಕಂಪ್ಯೂಟರ್ ಆಪರೇಟರ ವಸೀಂ ರೆಹಮಾನ್.ಎಲ್. ಹೆಚ್.ವಿ ನಾಗರತ್ನ. ಕುಷ್ಠರೋಗ ಮೇಲ್ವಿಚಾರಕಿ ರೇಷ್ಮಾ ಬೇಗಂ. ಎನ್.ಸಿ.ಡಿ ಸಮಾಲೋಚಕಿ ನೀಲಾಂಬಿಕಾ. ಶುಷ್ರೂಶಕಿ ಶಾಂತಾ. ಚಂದ್ರಕಲಾ. ಹಾಗೂ ಸತ್ತರ್ ಪಾಶಾ. ಇಲಾಯುದ್ದೀನ್ ಇತರರು ಹಾಜರಿದ್ದರು.

## ಕನ್ನಡ ಹುಟ್ಟಿದ್ದು ತಮಿಳಿನಿಂದ ಎಂದು ವ್ಯಾಖ್ಯಾನಿಸಿರುವ ಕಮಲ್ ಹಾಸನ್ ಹೇಳಿಕೆ ವೆಂಕಟೇಶ್ ಬೋನಿಯರ್ ಖಂಡನೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ: ಕನ್ನಡ ಹುಟ್ಟಿದ್ದು ತಮಿಳಿನಿಂದ ಎಂದು ವ್ಯಾಖ್ಯಾನಿಸಿರುವ ಕಮಲ್ ಹಾಸನ್ ಇವರು ಕೂಡಲೇ ತಮ್ಮ ಹೇಳಿಕೆಯನ್ನು

ಹಿಂಪಡೆದು ಕನ್ನಡಿಗರಿಗೆ ಕ್ಷಮೆ ಕೇಳಬೇಕು. ಎಂದು ತೀರ್ವವಾಗಿ ಖಂಡಿಸಿ ಶಹಾಪೂರ ತಾಲ್ಲೂಕ ಕ.ರ.ವೇ ಒತ್ತಾಯ ಕನ್ನಡನಟ ಸ್ವಾಗ ನಟನಾಗಿ ಬೆಳೆಯುವುದಕ್ಕೆ ಕೇವಲ ಭಾಷೆ

9 30ರಣವಾಗಿರುವುದಿಲ್ಲ ಎಂಬುದನ್ನು ಮನದಟ್ಟ ಮಾಡಿಕೊಳ್ಳಬೇಕು. ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದೆ ಎಂದು ತಮಿಳು ನಟ

ಈ ಇವರು ವಿವಾದಿತ ಹೇಳಿಕೆಯನ್ನು ನೀಡಿರುವುದು ನಮ್ಮ 6.5 ಕೋಟಿ ಕನ್ನಡಾಭಿಮಾನಿಗಳಿಗೆ ತುಂಬಾ ನೋವುಂಟು

ಸಹಿ..... ಮಾಡಿರುತ್ತಾರೆ. ತನ್ನ ರಾಜಕೀಯ ಬೇಳೆ ಬೆಯಿಸಿಕೊಳ್ಳುವ ಉದ್ದೇಶದಿಂದ ಹಾಗೂ ತಮಿಳು ಜನರ ಮತಗಳ ಮೇಲೆ ಕಣ್ಣು ಇಟ್ಟಿರುವ ದಿನಾಂಕ: ಇವರು ತಮ್ಮ ಹೊಸ ಚಲಚಿತ್ರ "ಥಘ್" ಧ್ವನಿಸುರಳಿ ಬಿಡುಗಡೆ ಸಂದರ್ಭದಲ್ಲಿ ಅಸಂಬಂದ್ಧ ಹೇಳಿಕೆ 6.5 ಕನ್ನಡಿಗರ ಆಕ್ರೋಶಕ್ಕ

ಕಾರಣವಾಗಿದೆ. ಭಾರತದಲ್ಲಿ ಅತೀ ಹೆಚ್ಚು ಜ್ಞಾನಪೀಠ ಪ್ರಶಸ್ತಿಯನ್ನು ಪಡೆದಂತಹ ಏಕೈಕ ಭಾಷೆ ಎಂದರೆ ಅದು ಕನ್ನಡ ಭಾಷೆ ಮತ್ತು

ಕನ್ನಡ ಭಾಷೆಗೆ ತನ್ನದೇ ಆದ 4000 ವರ್ಷಗಳ ಇತಿಹಾಸವನ್ನು ಹೊಂದಿರುವ ನಮ್ಮ ಕನ್ನಡ ಭಾಷೆಗೆ ಅವಮಾನ ಮಾಡಿರುವ ನಟ ಕಮಲ್ ಹಾಸನ್ ಇವರು ಕೂಡಲೇ ತಮ್ಮ ಹೇಳಿಕೆಯನ್ನು ಹಿಂಪಡೆದು ಕನ್ನಡಿಗರಿಗೆ ಕ್ಷಮೆ ಕೇಳಬೇಕು. ಒಂದು ವೇಳೆ ಕನ್ನಡಿಗರಿಗೆ ಕ್ಷಮೆ ಕೇಳದೇ ಹೋದಲ್ಲಿ ಜೂನ್-6 ರಂದು ಶುಕ್ರವಾರ ಅವರ ಥಗ್‌ಲೈಫ್' ಚಿತ್ರವನ್ನು ಕರ್ನಾಟಕದ ಯಾವುದೇ ಚಿತ್ರಮಂದಿರಗಳಲ್ಲಿ

ಬಿಡುಗಡೆಗೊಳಿಸಲು ಕರ್ನಾಟಕ ರಕ್ಷಣಾ ವೇದಿಕೆಯು ಅವಕಾಶವನ್ನು ನೀಡುವುದಿಲ್ಲ ತಮ್ಮಲ್ಲಿ ಮನವಿ ಸಲ್ಲಿಸುತ್ತಿದ್ದೇವೆ.

## ಕುಡಿಯುವ ನೀರು ಪೂರೈಕೆಗೆ ಸ್ಥಳೀಯರ ಮನವಿ



**ಹುಮನಾಬಾದ್ ಪಟ್ಟಣದಲ್ಲಿ ಜೇರಪೇಟ್ ಬಡಾವಣೆ ನಿವಾಸಿಗಳು ಮಾಜಿ ಸಚಿವ ರಾಜಶೇಖರ ಪಾಟೀಲ್ ಗೆ ಭೇಟಿಯಾಗಿ ನೀರು ಪೂರೈಕೆಗೆ ಮನವಿ ಮಾಡಿದರು.**

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಕಳೆದ ಅನೇಕ ದಿನಗಳಿಂದ ನೀರು ಪೂರೈಕೆಯಾಗದ ಹಿನ್ನಲೆ ಪಟ್ಟಣದ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ವಾರ್ಡ್ ಸಂಖ್ಯೆ 16ರ ಜೇರಪೇಟ್ ಬಡಾವಣೆ ನಿವಾಸಿಗಳು ಶನಿವಾರ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಭೇಡಿ ಕುಡಿಯುವ ನೀರು ಪೂರೈಕೆಗೆ ಮನವಿ ಮಾಡಿದರು.

ಜೇರಪೇಟ್ ಬಡಾವಣೆ ನಿವಾಸಿಗಳು ಮಾತನಾಡಿ, ಕಳೆದ ಸಾಕಷ್ಟು ದಿನಗಳಿಂದ ನಮ್ಮ ಬಡಾವಣಗೆ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ. ಇದರಿಂದ ಸಾಕಷ್ಟು ತೊಂದರೆ ಅನುಭವಿಸುವಂತ ವಾತಾವರಣ ನಿರ್ಮಾಣವಾಗಿದೆ. ಹೀಗಾಗಿ ನಮ್ಮ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲಗೆ ಮನವಿ ಮಾಡಿದರು. ಬಳಿಕ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಪುರಸಭೆ ಮುಖ್ಯಾಧಿಕಾರಿ ಮೀನಕುಮಾರಿ ಬೋರಳಕರ್ ಹಾಗೂ ಪುರಸಭೆ ಸದಸ್ಯ ಅಫ್ಸರಮಿಯ ಜತೆಗೆ ಸಮಾಲೋಚನೆ ನಡೆಸಿ ಪಟ್ಟಣದ ನಿವಾಸಿಗಳಿಗೆ ತೊಂದರೆಯಾಗದಂತೆ ಸೂಕ್ತ ಸಮಯಕ್ಕೆ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂದರು.

> 
> ಪುರಸಭೆ ಮುಖ್ಯಾಧಿಕಾರಿ ಕೇಂದ್ರ ಸ್ಥಾನದಲ್ಲಿದ್ದು, ಸಿಬ್ಬಂದಿಗಳಿಗೆ ಸೂಚನೆ ನೀಡುವ ಮೂಲಕ ಎಲ್ಲ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಶೀಘ್ರವಾಗಿ ಕುಡಿಯುವ ನೀರು ಪೂರೈಕೆ ಮಾಡಬೇಕು. ಜತೆಗೆ ಸಾರ್ವಜನಿಕರು ಕೂಡಾ ಅಗತ್ಯ ಸಹಕಾರ ನೀಡಬೇಕು.
> **-ರಾಜಶೇಖರ ಪಾಟೀಲ್**
> **ಮಾಜಿ ಸಚಿವ, ಹುಮನಾಬಾದ್**

ಮುಖ್ಯಾಧಿಕಾರಿ ಮೀನಾಕುಮಾರಿ ಬೋರಾಳಕರ್ ಮಾತನಾಡಿ, ಬಿರುಗಾಳಿ ಸಹಿತ ಸತತ ಸುರಿಯುತ್ತಿರುವ ಮಳೆಗೆ ಬಹುತೇಕ ಕಡೆಗಳಲ್ಲಿ ವಿದ್ಯುತ್ ಕಡಿತವಾಗಿದೆ. ಇದರಿಂದಾಗಿ ಕುಡಿಯುವ ನೀರು ಪೂರೈಕೆ ಮಾಡಲು ತೊಂದರೆ ಆಗುತ್ತಿದೆ. ಪುರಸಭೆ ಸಿಬ್ಬಂದಿಗಳಿಗೆ ಸೂಚನೆ ನೀಡಿ ಎಲ್ಲವೂ ಸರಿಪಡಿಸಿಕೊಂಡು ನೀರು ಪೂರೈಕೆಗೆ ಪ್ರಯತ್ನ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಅಫ್ಸರಮಿಯ, ಗುಂಡಪ್ಪ ಹೊನ್ನಿಕೇರಿ, ದತ್ತು ಲದ್ದಿ, ಜಿಪಂ. ಮಾಜಿ ಸದಸ್ಯ ಲಕ್ಷ್ಮಣರಾವ ಬುಳ್ಳಾ, ಸುರೇಶ ಘಾಂಗ್ರೆ, ರವಿಚಂದ್ರನ್ ಸೇರಿ ಜೇರಪೇಟ್ ಬಡಾವಣೆ ನಿವಾಸಿಗಳಿದ್ದರು.

## ಇಸ್ಮಾಯಿಲ್ ಷಾ ಖಾದ್ರಿ ಉರುಸ್ ಜೂ. 26ರಿಂದ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ತಾಲೂಕಿನ ಘೋಡವಾಡಿ ಗ್ರಾಮದಲ್ಲಿ ಜೂ. 26ರಿಂದ ಜೂ. 28ರ ವರೆಗೆ ನಡೆಯಲಿರುವ ಇತಿಹಾಸ ಪ್ರಸಿದ್ಧ ಇಸ್ಮಾಯಿಲ್ ಷಾ ಖಾದ್ರಿಯ 564ನೇ ಉರುಸ್ ಕಾರ್ಯಕ್ರಮದ ಹಿನ್ನಲೆ ಶನಿವಾರ ಮಾಜಿ ಸಚಿವ ರಾಜಶೇಖರ ಪಾಟೀಲಗೆ ಉರುಸ್ ಸಮಿತಿ ಪದಾಧಿಕಾರಿಗಳು ಸನ್ಮಾನಿಸಿ ಆಮಂತ್ರಣ ನೀಡಿದರು.

ಈ ಸಂದರ್ಭದಲ್ಲಿ ಷಾಬೋದ್ದಿನ್, ಗುಲಾಮ್‌ದಸ್ತಗೀರ್, ಖಾದರಬಾಯ್, ಅಜರ ರಂಜಾನಿ, ಷಾಖೀರ್, ಟಿಪ್ಪು, ಪೀರಸಾಬ್ ಇದ್ದರು.



ಹುಮನಾಬಾದ್ ಪಟ್ಟಣದ ಶಿವನಗರ ಬಡಾವಣೆಯಲ್ಲಿ ಶುಕ್ರವಾರ ನಡೆದ ಶರಣಪ್ಪ ನಂದಿ ಅವರ ಗೃಹ ಪ್ರವೇಶ ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ನಂದಿ ಪರಿವಾರಸ್ಥರು ವಿಶೇಷವಾಗಿ ಸನ್ಮಾನಿಸಿ, ಗೌರವಿಸಿದರು. ಜಿಪಂ. ಮಾಜಿ ಸದಸ್ಯರಾದ ವೀರಣ್ಣ ಪಾಟೀಲ್, ಗುಂಡುರೆಡ್ಡಿ, ಸಂಗಮೇಶ ಪಾಟೀಲ್ ಸೇರಿದಂತೆ ನಂದಿ ಪರಿವಾರದ ಸದಸ್ಯರು ಉಪಸ್ಥಿತರಿದ್ದರು.

## ಜೂನ್ 2 ರಿಂದ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ.31. ತಾಲೂಕಿನಲ್ಲಿ 2025-2026 ನೇಸಾಲಿನಲ್ಲಿ ಮುಂಗಾರು ಹಂಗಾಮು ಬಿತ್ತನೆ ಸಿದ್ಧತೆ ಬರದಿಂದ ಸಾಗುತ್ತಿದೆ ಪ್ರಸಕ್ತ ಸಾಲಿನಲ್ಲಿ ಬಿತ್ತನೆ ಗುರಿ 84762 ಹೆಕ್ಟೆರು ಇರುತ್ತದೆ ತೊಗರಿ 65100 ಹೆ, ಹೆಸರು 8900 ಹೆ, ಉದ್ದು 6000 ಹೆ, ಭತ್ತ 1500 ಹೆ, ಮೆಕ್ಕೆಜೋಳ 800 ಹೆ, ಇರುತ್ತದೆ. ದಿ. 30-05-2025 ರಂದು ತಾಲೂಕಿನ ಕೃಷಿ ಪರಿಕರ ಮಾರಾಟ ಗಾರರಿಗೆ ಸಭೆಯನ್ನು ಕರೆದು ಯಾವುದೇ ರಸ ಗೊಬ್ಬರ ಸರಕಾರ ನಿಗದಿ ಮಾಡಿರುವುದಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡದಂತೆ ಎಚ್ಚರಿಗೆ ನೀಡಲಾಯಿತು.

ದಿ.02-06-2025 ತಾಲೂಕಿನ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜವನ್ನು ವಿತರಣೆ ಮಾಡಲಾಗುವುದು ಇಗಾಗಲೆ ತಾಲೂಕಿನಾದ್ಯಂತ ತೊಗರಿ 300 ಕ್ವಿ, ಹೆಸರು 100 ಕ್ವಿ, ಉದ್ದು 30 ಕ್ವಿ, ಒಟ್ಟು 430 ಕ್ವಿಂಟಾಲ ಬಿತ್ತನೆ ಬೀಜವನ್ನು ದಾಸ್ತಾನು ಮಾಡಲಾಗಿದೆ. ರೈತರಿಗೆ ಸಂಪೂರ್ಣ ಸಹಕಾರ ನೀಡಲು ನಮ್ಮ ಇಲಾಖೆ ಸನ್ನದಾಗಿದೆ. ಎಂದು ಹಂಪಣ್ಣ, ವಾಯ್.ಎಲ್ ಸಹಾಯಕ ಕೃಷಿ ನಿರ್ದೇಶಕರು ಸೇಡಂ ರವರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿ ಬಸ್ ಪಾಸ್‌ಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31-ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದ ವತಿಯಿಂದ 2025-26ನೇ ಸಾಲಿನ ವಿದ್ಯಾರ್ಥಿ ಬಸ್ ಪಾಸ್ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್ ತಿಳಿಸಿದ್ದಾರೆ. ವಿದ್ಯಾರ್ಥಿ ಬಸ್ ಪಾಸ್ ವಿತರಣೆಯನ್ನು ಸಂಪೂರ್ಣವಾಗಿ ಗಣಕೀಕೃತಗೊಳಿಸಲು ಸರ್ಕಾರದ ನಿರ್ದೇಶನವಿದ್ದು, ಕಳೆದ ಸಾಲಿನಂತೆ ಪ್ರಸಕ್ತ ಸಾಲಿನಲ್ಲಿಯೂ ಸಹ ಸಂಪೂರ್ಣ ಗಣಕೀಕೃತವಾಗಿ ವಿದ್ಯಾರ್ಥಿ ಪಾಸ್‌ಗಳನ್ನು ವಿತರಣೆ ಮಾಡಲಾಗುವುದು. ಈ ಸಂಬಂಧ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಾಸ್‌ಗಳನ್ನು ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ (URL-sevasindhu.karnataka.gov.in) ಮೂಲಕ ಅರ್ಜಿ ಸಲ್ಲಿಸಿ, ಕರ್ನಾಟಕ-ಒನ್ [ಎ-ಬಟಿಜ] ಕೇಂದ್ರಗಳ ಮುಖಾಂತರ ಪಾಸ್ ಪಡೆಯಲು ಅವಕಾಶ ನೀಡಲಾಗಿದೆ.

ಬಳ್ಳಾರಿ ವಿಭಾಗದ ವ್ಯಾಪ್ತಿಯ ಬಳ್ಳಾರಿ ನಗರದಲ್ಲಿ 02 ಕೇಂದ್ರ ಮತ್ತು ಸಿರುಗುಪ್ಪ, ಕುರುಗೋಡು, ಕಂಪ್ಲಿ, ಸಂಡೂರು ಭಾಗದಲ್ಲಿ ಅಧೀಕೃತ ಕರ್ನಾಟಕ-ಒನ್ ಕೇಂದ್ರಗಳಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆ ಮಾಡಲು ಗುರುತಿಸಿಲಾಗಿದೆ.

ಕರ್ನಾಟಕ-1 ಕೇಂದ್ರಗಳ ವಿವರ: ಬಳ್ಳಾರಿ ನಗರದ ಗಡಿಗಿ ಚೆನ್ನಪ್ಪ ವೃತ್ತದ ಮಹಾನಗರ ಪಾಲಿಕೆ ಕಚೇರಿಯ ಪಕ್ಕದ ಕಟ್ಟಡ(ಪ್ರಸ್ತುತ ಹಳೇ ತಾಲ್ಲೂಕು ಕಚೇರಿ ಹಿಂಭಾಗದ ಭೂಮಿ ಕೇಂದ್ರ), ರಾಯಲ್ ಸರ್ಕಲ್‌ನ ಹೊಸ ಕಾರ್ಪೋರೇಷನ್ ಬಿಲ್ಡಿಂಗ್ ಕರ್ನಾಟಕ-ಒನ್ ಕೇಂದ್ರ(ಪ್ರಸ್ತುತ ಕಪ್ಪಗಲ್ ರಸ್ತೆ).

ಸಿರುಗುಪ್ಪ ಪಟ್ಟಣದ ಆದೋನಿ ರಸ್ತೆಯ ಕರ್ನಾಟಕ-ಒನ್ ಕೇಂದ್ರ (ಪ್ರಸ್ತುತ 8ನೇ ವಾರ್ಡ್ ಪಾರ್ವತಿ ನಗರ), ಕುರುಗೋಡು ಪಟ್ಟಣದ ಖಾದಿ ಭಂಡಾರ ಕಟ್ಟಡದ ಕರ್ನಾಟಕ-ಒನ್ ಕೇಂದ್ರ(ಪ್ರಸ್ತುತ ಸರ್ಕಾರಿ ಪ್ರೌಢಶಾಲೆ ಹತ್ತಿರದ ಬಸ್ ನಿಲ್ದಾಣದ ಎದುರು), ಕಂಪ್ಲಿ ಪಟ್ಟಣದ ಚಂದ್ರಕಲಾ ಟಾಕೀಸ್ ಹತ್ತಿರದ ಕರ್ನಾಟಕ-ಒನ್ ಕೇಂದ್ರ ಮತ್ತು ಸಂಡೂರು ಪಟ್ಟಣದ ಪುರಸಭೆ ಬಸ್ ನಿಲ್ದಾಣ ಎದುರುಗಡೆಯ ಶ್ರೀನಿವಾಸ ಕಾಂಪ್ಲೆಕ್ಸ್ ಕರ್ನಾಟಕ-ಒನ್ ಕೇಂದ್ರ. ಈ ಮೇಲಿನ ಕೇಂದ್ರಗಳಲ್ಲಿ ಜೂನ್ 02 ರಿಂದ ವಿದ್ಯಾರ್ಥಿ ಬಸ್ ಪಾಸ್ ಪಡೆಯಬಹುದಾಗಿದೆ.

ಅರ್ಜಿ ಸಲ್ಲಿಸುವ ವಿಧಾನ: ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಐಡಿ (URL-sevasindhu.karnataka.gov.in) ಆಗಿದ್ದು, ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಇರುವುದಿಲ್ಲ.

ವಿದ್ಯಾರ್ಥಿಗಳು ಕರ್ನಾಟಕ-ಒನ್, ಗ್ರಾಮ-ಒನ್ ಮತ್ತು ಬೆಂಗಳೂರು-ಒನ್ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಗಳ ಮೂಲಕವು ಅರ್ಜಿ ಸಲ್ಲಿಸಬಹುದಾಗಿದೆ. ಈ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು ಸರ್ಕಾರದ ಆದೇಶದಂತೆ ರೂ.30/- ಸೇವಾ ಶುಲ್ಕವನ್ನು ಕೇಂದ್ರಗಳ ಸಿಬ್ಬಂದಿಗಳು ಪಡೆಯಲು ಅವಕಾಶವಿದೆ. ಸ್ಟ್ಯಾಟ್ಸ್, ಯುಯುಸಿಎಂಎಸ್, ಪಿಯುಇ ಸಂಖ್ಯೆಯನ್ನು ಹೊಂದಿರದ ವಿದ್ಯಾರ್ಥಿಗಳು ವಾಸಸ್ಥಳ ವಿಳಾಸ ಹಾಗೂ ಇತರೆ ಮಾಹಿತಿ ಬಗ್ಗೆ ವಿದ್ಯಾ ಸಂಸ್ಥೆಯ ಮುಖ್ಯಸ್ಥರಿಂದ ಧೃಡೀಕರಣ ಪತ್ರ ಪಡೆದು ಕಡ್ಡಾಯವಾಗಿ ಸಲ್ಲಿಸಬೇಕು. ವಿದ್ಯಾರ್ಥಿ ಬಸ್ ಪಾಸ್ ವಿತರಿಸಲು ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀ ಆಗಿರುತ್ತದೆ.

ವಿದ್ಯಾರ್ಥಿ ರಿಯಾಯಿತಿ ಬಸ್ ಪಾಸ್ ದರಗಳ ವಿವರ: ಪ್ರಾಥಮಿಕ ಶಾಲೆ (10 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.150, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.150.

ಪ್ರೌಢ ಶಾಲೆ ಬಾಲಕರು (10 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.750 ಮತ್ತು ಪ್ರೌಢಶಾಲೆ ಬಾಲಕಿಯರು ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.550, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.150. ಕಾಲೇಜು ಮತ್ತು ಡಿಪ್ಲೋಮಾ (10 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.1,050, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.150. ಐಟಿಐ (12 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.1,310, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.160. ವೃತ್ತಿಪರ ಕೋರ್ಸ್‌ಗಳು (10 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.1,550, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.150. ಸಂಜೆ ಕಾಲೇಜು ಮತ್ತು ಪಿ.ಹೆಚ್.ಡಿ (10 ತಿಂಗಳು): ಸಾಮಾನ್ಯ ವಿದ್ಯಾರ್ಥಿಗಳಿಗೆ ರೂ.1,350, ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಿಗೆ ರೂ.150.

ಈ ಮೇಲಿನ ದರದಂತೆ ವಿದ್ಯಾರ್ಥಿಯು ಕೆ-ಒನ್ ಪಾಸ್ ಕೌಂಟರ್‌ಗಳಲ್ಲಿ ಪಾವತಿಸಿ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು ಪಡೆಯಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫ್ಯಾಶನ್ ಡಿಸೈನ್ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31-ನಗರದ ಸಿದ್ಧ ಉಡುಪು ಸಂಶೋಧನೆ ತರಬೇತಿ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರ (ಜಿ.ಆರ್.ಟಿ.ಡಿ.ಸಿ) ಸಂಸ್ಥೆಯಲ್ಲಿ 2025-26 ನೇ ಸಾಲಿಗೆ ಬಿ.ಎಸ್ಸಿ ಪ್ರಥಮ ವರ್ಷದ ಫ್ಯಾಶನ್ ಡಿಸೈನ್ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶಾತಿಗೆ ಯಾವುದೇ ದ್ವಿತೀಯ ಪಿ.ಯು.ಸಿ (ಕಲೆ, ವಾಣಿಜ್ಯ, ವಿಜ್ಞಾನ, ಶಿಕ್ಷಣ ಮತ್ತು ಯಾವುದೇ ಡಿಪ್ಲೋಮಾ) ವಿಭಾಗದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ಮೊದಲನೇ ರೈಲ್ವೇ ಗೇಟ್ ಹತ್ತಿರದ ಜಿಲ್ಲಾ ಕ್ರೀಡಾಂಗಣ ಮೈದಾನ ರಸ್ತೆಯ ಜಿ.ಆರ್.ಟಿ.ಡಿ.ಸಿ ಕಾಲೇಜಿನ ಪ್ರಾಚಾರ್ಯರ ಕಚೇರಿ ಅಥವಾ ಮೊ. 9741264655, 9844862576, 9844474235, 8123126127 ಗೆ ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.30-ಇಲ್ಲಿನ ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ಪದವಿ ಪೂರ್ವ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳು ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ ವಿಳಾಸ: https://sw.kar.nic.in ಲ್ಲಿ ಆಗಸ್ಟ್ 31ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹಾಗೂ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಎಲ್ಲಾ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ ರಾಯಚೂರುರವರ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೋಳೂರು: ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ನೂತನ

## ಕಟ್ಟಡ ಉದ್ಘಾಟನೆ ನೆರವೇರಿಸಿದ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31-ಕುರುಗೋಡು ತಾಲ್ಲೂಕಿನ ಕೋಳೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯವನ್ನು ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಅವರು ಶನಿವಾರ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಯಾವುದೇ ಅಡ್ಡ ಪರಿಣಾಮಗಳಿಲ್ಲದ ಆಯುರ್ವೇದ ಚಿಕಿತ್ಸಾಲಯದ ಸೇವೆಗಳನ್ನು ಸಮರ್ಪಕವಾಗಿ ಸಾರ್ವಜನಿಕರು ಉಪಯೋಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರತಿ ಖಾಯಿಲೆಗೂ ಆಯುರ್ವೇದ ವೈದ್ಯಪದ್ಧತಿಯಲ್ಲಿ ಉತ್ತಮವಾದ ಚಿಕಿತ್ಸೆ ಉಚಿತವಾಗಿ ಲಭ್ಯವಿದ್ದು, ಸಾರ್ವಜನಿಕರು ಚಿಕಿತ್ಸಾಲಯದ ಸೇವೆಯನ್ನು ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೋಳೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ದೊಡ್ಡಬಸಮ್ಮ, ಉಪಾಧ್ಯಕ್ಷ ಚೆನ್ನಪ್ಪ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಎಂ.ವಿರುಪಾಕ್ಷ, ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ.ಕೆ.ಪಿ.ಕಲ್ಯಾಣಿ ಸೇರಿದಂತೆ ಕೋಳೂರು ಗ್ರಾಮ ಪಂಚಾಯತಿಯ ಸರ್ವ ಸದಸ್ಯರು, ಗ್ರಾಮದ ಮುಖಂಡರು, ಸಾರ್ವಜನಿಕರು ಮತ್ತು ಚಿಕಿತ್ಸಾಲಯದ ಸಿಬ್ಬಂದಿ ವರ್ಗ ಇದ್ದರು.

## ಟ್ರಾಮಾ ಕೇರ್ ಆಸ್ಪತ್ರೆಯಲ್ಲಿ 'ವಿಶ್ವ ತಂಬಾಕು ರಹಿತ ದಿನ' ನಿಮಿತ್ತ ಜಾಗೃತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31-'ವಿಶ್ವ ತಂಬಾಕು ರಹಿತ ದಿನಾಚರಣೆ' ಅಂಗವಾಗಿ ನಗರದ ಟ್ರಾಮಾ ಕೇರ್ ಆಸ್ಪತ್ರೆಯ ಆವರಣದಲ್ಲಿ ಶನಿವಾರ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಸುಮಾರು ಒಂದು ತಿಂಗಳಿನಿಂದ ಆಸ್ಪತ್ರೆಗೆ ಹೊರ ಮತ್ತು ಒಳರೋಗಿಗಳ ಭೇಟಿ ಬರುವ ಸಾರ್ವಜನಿಕರು ಹೊಂದಿದ್ದ ತಂಬಾಕು ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗುತ್ತಿತ್ತು.

ಈ ಸಂದರ್ಭದಲ್ಲಿ ಟ್ರಾಮಾ ಕೇರ್ ಆಸ್ಪತ್ರೆಯ ಅಧೀಕ್ಷಕ ಡಾ.ಶಿವನಾಯ್ಕ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಇತರರು ಇದ್ದರು.

## ಸರ್ಕಾರಿ ಪಾಲಿಟೆಕ್ನಿಕ್ ಡಿಪ್ಲೋಮಾ ಪ್ರಥಮ ವರ್ಷಕ್ಕೆ ಪ್ರವೇಶಾತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31:ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025-26ನೇ ಸಾಲಿಗೆ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್ ಪ್ರವೇಶಾತಿಗೆ ಆಫ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಕಾಲೇಜಿನಲ್ಲಿ ಪಡೆದುಕೊಂಡು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಕಚೇರಿಗೆ ಜೂನ್ 02 ಸಂಜೆ 05 ಗಂಟೆಯವರೆಗೆ ಸಲ್ಲಿಸಬಹುದು. ಜೂನ್ 03 ರಂದು ಬೆಳಿಗ್ಗೆ 11 ಗಂಟೆಗೆ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟ, ಅಂದು ಸಂಜೆ 04 ರ ವರೆಗೆ ತಿದ್ದುಪಡಿಗೆ ಅವಕಾಶ, ಸಂಜೆ 05 ಗಂಟೆಯವರೆಗೆ ಅಂತಿಮ ಮೆರಿಟ್ ಪಟ್ಟಿ ಪ್ರಕಟಿಸಲಾಗುವುದು. ಜೂನ್ 04 ರಿಂದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ಪ್ರಾಚಾರ್ಯರ ಕಚೇರಿ ಅಥವಾ ದೂ.08392-242228 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಸಿ ತಳಿ ಬೆಳೆಗಳ ಸಂರಕ್ಷಣೆ: ರೈತರು ವಿವರ ನಮೂದಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ31-ರಾಜ್ಯ ಸರ್ಕಾರವು 2025 ರ ಆಯವ್ಯಯದಲ್ಲಿ ಘೋಷಿತ ಕಾರ್ಯಕ್ರಮವಾದ ದೇಶಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದಡಿ ದೇಶಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ದೇಶಿ ತಳಿಗಳನ್ನು ಬೆಳೆದು ಸಂರಕ್ಷಿಸುತ್ತಿರುವ ಜಿಲ್ಲೆಯ ರೈತರು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ತಾವು ಬೆಳೆಯುವ ದೇಶಿ ತಳಿಗಳ ವಿವರವನ್ನು ನೋಂದಾಯಿಸಬೇಕು.

ಕಣ್ಮರೆಯಾಗುತ್ತಿರುವ ಹಾಗೂ ನಶಿಸಿ ಹೋಗುತ್ತಿರುವ ಸ್ಥಳೀಯ ಬೆಳೆಗಳ ತಳಿಗಳನ್ನು ಸಂಗ್ರಹಿಸುವ ಮತ್ತು ಸಂರಕ್ಷಿಸುವ ಉದ್ದೇಶಕ್ಕೆ ಕೈಜೋಡಿಸಬೇಕು. ಕೃಷಿ ಇಲಾಖೆಯ ಅಧಿಕೃತ ಪೋರ್ಟಲ್ ನಲ್ಲಿ ನೋಂದಣಿ ಕಡ್ಡಾಯವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಎಂ. ಸೋಮಸುಂದರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31- ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನ ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡಲಾಗುತ್ತಿದ್ದು, ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಅಥವಾ sevasindhuservices.karnataka.gov.in ಗೆ ಬೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ.080392-275751, ಸಹಾಯವಾಣಿ ಸಂ. 8050770006, 8050370006 ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂಬಾಕು ಉತ್ಪನ್ನಗಳಿಂದ ದೂರವಿರಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ31-ಸಾರ್ವಜನಿಕರು ತಂಬಾಕು ಉತ್ಪನ್ನಗಳ ಬಳಕೆಯಿಂದ ದೂರವಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿ ಮುಂಭಾಗದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಂಬಾಕು ಸುಮಾರು 7000 ರಾಸಾಯನಿಕ ಅಂಶಗಳಿಂದ ಕೂಡಿದ್ದು, ತಂಬಾಕಿನ ಯಾವುದೇ ಪದಾರ್ಥಗಳನ್ನು ಸೇವಿಸುವುದರಿಂದ ಮನುಷ್ಯನ ಆರೋಗ್ಯದಲ್ಲಿ ಕಿಡ್ನಿಗಳ ವೈಫಲ್ಯ, ನರಗಳ ದೌರ್ಬಲ್ಯ, ಕ್ಯಾನ್ಸರ್‌ನಂತಹ ಮಾರಾಣಾಂತಿಕ ಖಾಯಿಲೆಗಳು ಉದ್ಭವಿಸುತ್ತವೆ ಎಂದು ಅವರು ತಿಳಿಸಿದರು.

ತಂಬಾಕು ಉತ್ಪನ್ನಗಳ ಬಳಕೆಯನ್ನು ಗಣನೀಯವಾಗಿ ಕಡಿಮೆಗೊಳಿಸಲು ರಾಜ್ಯ ಸರ್ಕಾರವು ಅನೇಕ ಯೋಜನೆಗಳನ್ನು ರೂಪಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ನಿಷೇಧ, ಶಿಕ್ಷಣ ಸಂಸ್ಥೆಗಳ 100 ಮೀ. ಅಂತರದಲ್ಲಿ ತಂಬಾಕು ಮಾರಾಟ ನಿಷೇಧ, ಈ ನಿಯಮ ಉಲ್ಲಂಘಿಸಿದಲ್ಲಿ ಕೋಟ್ಪಾ-2003 ಕಾಯ್ದೆಯನ್ವಯ ದಂಡವು ವಿಧಿಸಲಾಗುತ್ತದೆ ಎಂದು ಹೇಳಿದರು.

ಆರೋಗ್ಯ ಇಲಾಖೆಯ ತಂಬಾಕು ನಿಯಂತ್ರಣ ಕೋಶದ ಜೊತೆಗೂಡಿ ಅನೇಕ ಜನಜಾಗೃತಿ ಕಾರ್ಯಕ್ರಮ, ತರಬೇತಿ ಕಾರ್ಯಕ್ರಮ, ತಂಬಾಕು ಕೋಟ್ಪಾ-2003 ಕಾರ್ಯಾಚರಣೆ ಕೈಗೊಂಡು ತಂಬಾಕು ನಿಯಂತ್ರಣ ಮಾಡುವ ನಿರಂತರ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಕಾರ್ಯಕ್ರಮ ಅಧಿಕಾರಿಗಳಾದ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, ತಂಬಾಕು ಉತ್ಪನ್ನಗಳ ಬಳಕೆ ನಿಯಂತ್ರಣಕ್ಕಾಗಿ ರಾಜ್ಯ ಸರ್ಕಾರವು ಈಗಾಗಲೇ ಕಟ್ಟುನಿಟ್ಟಿನ ಕ್ರಮ ವಹಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆಗೆ ರೂ.200 ರಿಂದ ರೂ.1000 ರವರೆಗೆ ದಂಡ ವಿಧಿಸಲು ಕಟ್ಟುನಿಟ್ಟಿನ ಸೂಚನೆ ಹೊರಡಿಸಿದ್ದು, ಸರ್ಕಾರದ ನಿಯಮಗಳನ್ನು ಪಾಲಿಸುವ ಮೂಲಕ ಬಳ್ಳಾರಿ ಜಿಲ್ಲೆಯನ್ನು ತಂಬಾಕು ಮುಕ್ತ ಜಿಲ್ಲೆಯನ್ನಾಗಿ ಮಾಡಲು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ ಅವರು ಪ್ರತಿಜ್ಞಾವಿಧಿ ಭೋದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯ-ರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ವೈದ್ಯಾಧಿಕಾರಿಗಳಾದ ಡಾ.ಜಬೀನ್ ತಾಜ್, ಡಾ.ಶ್ರಾವಣಿ, ಅಧಿಕಾರಿಗಳಾದ ರಾಘವೇಂದ್ರ, ಗೋವಿಂದಪ್ಪ, ವಿರುಪಾಕ್ಷಿ, ಅಂಬದಾಸ್, ಶಿವಕುಮಾರ್, ತಿಪ್ಪೇಸ್ವಾಮಿ, ಖಾಸಿಂ, ಉಮಾ ಮಹೇಶ್ವರಿ, ಸವಿತಾ, ಶರತ್ ಬಾಬು, ಶಾಂತಮ್ಮ, ಸಿಂಧು, ನವೀನ್, ಅಜಯ್, ವೀರಭದ್ರ, ನೇತ್ರಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಸಿಬ್ಬಂದಿ ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿ ಕಚೇರಿಯ ಸಿಬ್ಬಂದಿ, ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಿಬ್ಬಂದಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಿಬ್ಬಂದಿ ಭಾಗವಹಿಸಿದ್ದರು.

# ಜೂನ್ 03 ರಂದು ವಸತಿ ಶಾಲೆ ಆಯ್ಕೆಗೆ ಕೌನ್ಸಲಿಂಗ್ ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 31-ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಸಕ್ತ ಸಾಲಿನ 6ನೇ ತರಗತಿ ದಾಖಲಾತಿಗೆ ಈಗಾಗಲೇ ಪ್ರವೇಶ ಪರೀಕ್ಷೆ ನಡೆದಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಜೂನ್ 03 ರಂದು ಕೌನ್ಸಲಿಂಗ್ ಪ್ರಕ್ರಿಯೆ ಏರ್ಪಡಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

ನಗರದ ಹೊಸಪೇಟೆ ರಸ್ತೆಯ ಅಲ್ಲಿಪುರದ ಬಿಐಟಿಎಂ ಕಾಲೇಜು ಹತ್ತಿರ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಜೂ 03 ರಂದು ಬೆಳಿಗ್ಗೆ 10 ಗಂಟೆಗೆ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ಮೂಲಕ ಪ್ರವೇಶದ ಸೀಟ್‌ನ್ನು (ವಸತಿ ಶಾಲೆಯನ್ನು) ಆಯ್ಕೆ ಮಾಡಿಕೊಳ್ಳಬಹುದಾಗಿದೆ.

ಕೌನ್ಸಲಿಂಗ್‌ಗೆ ಬೇಕಾದ ದಾಖಲೆಗಳು: ಆಧಾರ್‌ಕಾರ್ಡ್, ವಿದ್ಯಾರ್ಥಿಯ 5 ಭಾವಚಿತ್ರ, 5ನೇ ತರಗತಿ ಅಂಕಪಟ್ಟಿ, ಹಾಲ್ ಟಿಕೆಟ್ (ಪ್ರವೇಶ ಪತ್ರ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿಶೇಷ ಕೋಟಾದಲ್ಲಿ ಆಯ್ಕೆಯಾದ ಪ್ರಮಾಣ ಪತ್ರ ಸೇರಿದಂತೆ ಎಲ್ಲಾ ದಾಖಲೆಗಳನ್ನು ದ್ವಿಪ್ರತಿಯ ಝೆರಾಕ್ಸ್‌ಗಳನ್ನು 530 ಹಾಜರುಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಇ) ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.9844040035, ಸಂಡೂರು ತಾಲ್ಲೂಕಿನ ತೋರಣಗಲ್ಲು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.9480933730, ಕಂಪ್ಲಿ ಮತ್ತು ಕುರುಗೋಡು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.7353346069 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯಮಿ ಕೆ.ಎಂ.ಸೈಯದ್ ಗೆ ಡಾಕ್ಟರೇಟ್ ಪದವಿ ಪ್ರಧಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೆಪಿಸಿಸಿ ಸಂಯೋಜಕ, ಉದ್ಯಮಿ ಕೆ.ಎಂ.ಸೈಯದ್ ಗೆ ಸಮಾಜ ಸೇವೆಯನ್ನು ಪರಿಗಣಿಸಿ ಏಷ್ಯಾ ಇಂಟರ್ನ್ಯಾಷನಲ್ ಕಲ್ಚರ್ ರಿಸರ್ಚ್ ಯುನಿವರ್ಸಿಟಿ ಅವರು ತಮಿಳುನಾಡಿನ ಹೊಸೂರಿನ ಫಾರ್ಚುನ್ ಹೋಟೆಲ್ ನಲ್ಲಿ ಡಾಕ್ಟರೇಟ್ ಪದವಿಯನ್ನು ಶನಿವಾರದಂದು ಕಾರ್ಯಕ್ರಮದಲ್ಲಿ ಪ್ರಧಾನ ಮಾಡಿದರು.

ಅಮೆರಿಕದ ವಿಜುಡಂ ಪೀಸ್ ಯುನಿವರ್ಸಿಟಿ ಅವಾರ್ಡ್ ಸರಮನಿ ಅಸೋಸಿಯೇಟ್ ಯುತ್ ಏಷ್ಯಾ ಇಂಟರ್ನ್ಯಾಷನಲ್ ಕಲ್ಚರ್ ರಿಸರ್ಚ್ ಯೂನಿವರ್ಸಿಟಿ ವತಿಯಿಂದ ಡಾಕ್ಟರೇಟ್ ಪದವಿಯನ್ನು ನೀಡಲಾಗುತ್ತದೆ.

ಕೆ.ಎಂ.ಸೈಯದ್ ಅವರು ಸೈಯದ್ ಫೌಂಡೇಶನ್ ಮೂಲಕ ರಾಜ್ಯಾದ್ಯಂತ ಅನೇಕ ಸಮಾಜ ಸೇವೆಯನ್ನು ಕೈಗೊಂಡಿದ್ದಾರೆ, ಕೊಪ್ಪಳ ವಿಧಾನಸಭಾ ಕ್ಷೇತ್ರದಲ್ಲಿ ಅನ್ನದಾತರಿಗೆ ಉಚಿತ ಬೋರ್ ವೆಲ್ ಕೊರಸಿ ರೈತರಿಗೆ, ಬಡವರಿಗೆ, ಹಿಂದುಳಿದವರಿಗೆ ನೀರ್ ಸಾಬ್ ಎಂದೇ ಖ್ಯಾತಿ ಹೊಂದಿದ್ದಾರೆ.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಾಗ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿ ಸೈಯದ್ ಅವರು ಸೈ ಎನ್ನಿಸಿಕೊಂಡಿದ್ದಾರೆ,

ಪ್ರತಿ ವರ್ಷ ನಡೆಯುವ ಸಾಮೂಹಿಕ ವಿವಾಹದಲ್ಲಿ ಮಾಂಗಲ್ಯ,ಬಟ್ಟೆಯನ್ನು ಕೊಡಿಸುವ ಮೂಲಕ ಜನಮಾನಸದಲ್ಲಿ ಉಳಿದಿದ್ದಾರೆ, ನಾಟಕಗಳು, ಕ್ರಿಕೆಟ್, ಜಾತ್ರೆ, ಉರುಸ್,ಹಬ್ಬ ಹರಿದಿನಗಳಲ್ಲಿ ಬಡವರಿಗೆ ಸಹಾಯ ಮಾಡುವ ಮೂಲಕ ಕೊಡಗೈ ದಾನಿ ಎನಿಸಿಕೊಂಡಿದ್ದಾರೆ.

ಈ ಎಲ್ಲಾ ಸಾಮಾಜಿಕ ಸೇವೆಯನ್ನು ಪರಿಗಣಿಸಿ ಡಾಕ್ಟರೇಟ್ ಪದವಿಯನ್ನು ನೀಡಿ ಗೌರವಿಸಲಾಗಿದೆ.

ಡಾಕ್ಟರೇಟ್ ಪದವಿ ಪ್ರಧಾನ ಸಮಾರಂಭದಲ್ಲಿ ತಮಿಳುನಾಡಿನ ಮಾಜಿ ಶಾಸಕ ಮನೋಕರನ್, ನಿವೃತ್ತ ನ್ಯಾಯಾಧೀಶರು, ನಿವೃತ್ತ ಎಸಿಪಿ ಡಾ.ಎಸ್.ಬಿ.ಚಬ್ಬಿ, ನಿವೃತ್ತ ಡಿಸಿಪಿ ಬಿ.ಎಸ್.ಅಂಗಡಿ, ಡಾ. ಅರುಣ್ ಚಿನ್ನದೊರೈ, ಶ್ರೀ ಸ್ವಾಮಿ ಡಾ.ಎಸ್. ರವಿಚಂದ್ರನ್, ಯುವ ಕಾಂಗ್ರೆಸ್ ಮುಖಂಡ ಡಾ.ದೊಡ್ಡಪ್ಪ ಪೂಜಾರ್, ಡಾ.ಗುಣಶೇಖರನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.31-ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ 2.0ರ ಅಡಿಯಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಕೈಗೊಳ್ಳಲು ಸ್ವಸಹಾಯ ಗುಂಪು (NULM SHG) ಸದ್ಯಸರನ್ನು ಕಮ್ಯುನಿಟಿ ಮೊಬಿಲೈಜರ್ (Community Mobilizer) ಹುದ್ದೆಗೆ ನೇಮಕಾತಿಗಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿತ್ತು. ಇದುವರೆಗೂ ನಿರಿಕ್ಷೀತ ಮಟ್ಟದಲ್ಲಿ ಅರ್ಜಿಗಳ ಸಲ್ಲಿಕೆಯಾಗದೇ ಇರುವ ಹಿನ್ನೆಲೆಯಲ್ಲಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಜೂನ್ 10 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

# ಮನಸಾಕ್ಷಿಯೇ ಸರ್ವಶ್ರೇಷ್ಠ ನ್ಯಾಯಾಲಯ : ನ್ಯಾ.ಸಂದೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.31–ಮನಸಾಕ್ಷಿಗೆ ಅನುಗುಣವಾಗಿ ಕೆಲಸ ಮಾಡಿದರೆ ಅದುವೇ ಸರ್ವಶ್ರೇಷ್ಠನ್ಯಾಯಾಲಯ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಬಾಗಲಕೋಟೆ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶರಾದ ಎಚ್.ಪಿ.ಸಂದೇಶ ಹೇಳಿದರು.

ಜಿಲ್ಲಾ ನ್ಯಾಯಾಲಯದಲ್ಲಿ ನೂತನವಾಗಿ ಸೃಜಿಸಲ್ಪಟ್ಟ 4 ಮತ್ತು 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜನರಲ್ಲಿರುವ ನಂಬಿಕೆಯನ್ನು ಹುಸಿಗೊಳಿಸದ ರೀತಿಯಲ್ಲಿ ಕೆಲಸ ಮಾಡಿದಾಗ ಮಾತ್ರ ಸಂತೃಪ್ತಿ ಸಿಗುತ್ತದೆ. ಈ ಭಾಗದ ಮುಳುಗಡೆಯಿಂದ ಸಾಕಷ್ಟು ಜನ ಸಂತ್ರಸ್ತರಾಗಿದ್ದು, ಅವರಿಗೂ ಸೂಕ್ತ ಪರಿಹಾರ ಒದಗಿಸಬೇಕಿದೆ. ಈ ನಿಟ್ಟಿನಲ್ಲಿ ನೊಂದ ಜನಕ್ಕೆ ತ್ವರಿತವಾಗಿ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಹೆಚ್ಚುವರಿ ನ್ಯಾಯಾಲಯ ಪ್ರಾರಂಭಿಸಲಾಗಿದ್ದು, ಭೂಸ್ವಾಧಿನಕ್ಕೆ ಸಂಬಂಧಿಸಿದ ಪ್ರಕರಣಗಳಿಗೆ ಆದ್ಯತೆ ಕೊಡಬೇಕೆಂದು ಹೇಳಿದರು.

ಬಾಗಲಕೋಟೆ ಜಿಲ್ಲೆಯಲ್ಲಿ ಒಟ್ಟು 7 ಹೆಚ್ಚುವರಿ ನ್ಯಾಯಾಲಯಗಳ ಪ್ರಸ್ತಾವನೆಯಿದ್ದು, ಇದರಲ್ಲಿ 4 ನ್ಯಾಯಾಲಯಕ್ಕೆ ಸರಕಾರದಿಂದ ಮಂಜೂರಾತಿ ದೊರೆತಿದೆ. ಅದರಲ್ಲಿ 3 ನ್ಯಾಯಾಲಯ ಪ್ರಾರಂಭಿಸಲಾಗಿದ್ದು, ಇನ್ನೊಂದು ನ್ಯಾಯಾಲಯ ಶೀಘ್ರದಲ್ಲಿಯೇ ಪ್ರಾರಂಭಿಸಲಾಗುತ್ತದೆ. ಮುಂದಿನ ದಿನಗಳಲ್ಲಿ ಉಳಿದ ನ್ಯಾಯಾಲಗಳ ಪ್ರಾರಂಭಕ್ಕೆ ಕ್ರಮವಹಿಸಲಾಗುವುದು ಎಂದು ಹೇಳಿದ ಸಂದೇಶ, ಗುಳೇದಗುಡ್ಡ ನ್ಯಾಯಾಲಯಕ್ಕೆ 4 ಎಕರೆ, ಇಲಕಲ್ಲ ನ್ಯಾಯಾಲಯಕ್ಕೆ 6 ಎಕರೆ ಹಾಗೂ ಕೆರೂರಿಗೆ ಈಗಾಗಲೇ ಒಂದೂವರೆ ಎಕರೆ ಭೂವಿಯಿದ್ದು ಹೆಚ್ಚುವರಿಯಾಗಿ 2 ಎಕರೆ ಜಮೀನು ಪಡೆಯಲಾಗಿದೆ ಎಂದು ತಿಳಿಸಿದರು.

ನಮ್ಮ ವೃತ್ತಿಯ ಜೊತೆ–ಗೆ ಸಮಾಜಕ್ಕೆ ಧ್ವನಿಯಾಗುವ ಕಾರ್ಯ ಮಾಡಬೇಕು. ಜನ ನಮ್ಮನ್ನು ನೆನೆಸುವಂತಾಗಬೇಕು. ಯಾರು ಅನ್ಯಾಯಕ್ಕೆ ಒಳಗಾಗಿ ನ್ಯಾಯಾಲಯಕ್ಕೆ ಬರುತ್ತಾರೋ ಅವರ ನಂಬಿಕೆಯನ್ನು ಉಳಿಸಿಕೊಳ್ಳುವಂತಹ ಕೆಲಸ ಆಗಬೇಕು. ನಂಬಿಕೆಯನ್ನು ಉಳಿಸಿಕೊಳ್ಳದಿದ್ದರೆ, ನ್ಯಾಯಾಲಯದ ಸಫಲತೆ ಕಂಡುಕೊಳ್ಳದಿದ್ದರೆ, ನ್ಯಾಯಾಂಗದ ಅವಶ್ಯಕತೆ ಇಲ್ಲ ಎಂಬ ಭಾವನೆ ಬರುತ್ತದೆ ಎಂದು ಅವರು ಹೇಳಿದರು.

ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಹಂಚಾಟಿ ಸಂಜೀವಕುಮಾರ ಮಾತನಾಡಿ, ನ್ಯಾಯಾಧೀಶರು ಮತ್ತು ವಕೀಲರು ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ. ಇರುವಂತಹ ವ್ಯವಸ್ಥೆಯ ಅಡಿಯಲ್ಲಿ ತೀರ್ಮಾನ ಕೈಗೊಳ್ಳಲು ಚಿಂತನ ಮಂಥನ ಅವಶ್ಯಕತೆಯಿದೆ. ದಕ್ಷ ಮತ್ತು ನಿಪುಣ ನ್ಯಾಯಾಧೀಶರು ಆಗಬೇಕು. ಸಂತ್ರಸ್ತರಿಗೆ ತುರ್ತು ನ್ಯಾಯ ಒದಗಿಸುವಂತಾಗಬೇಕು. ನ್ಯಾಯಾಧೀಶ ಮತ್ತು ವಕೀಲರಲ್ಲಿ ಸೂಕ್ಷ್ಮತೆ ಇರಬೇಕು. ಇಲ್ಲವಾದಲ್ಲಿ ಸಮಾಜಕ್ಕೆ ಯಾವುದೇ ರೀತಿಯ ಕೊಡುಗೆ ನೀಡಲು ಸಾಧ್ಯವಾಗುವದಿಲ್ಲ ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಕೆ.ದುರ್ಗಾದಾಸ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ನಾರಾಯಣ ಕುಲಕರ್ಣಿ, ವಕೀಲರ ಸಂಘದ ಉಪಾಧ್ಯಕ್ಷ ಪ್ರಶಾಂತ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಎಲ್ಲ ನ್ಯಾಯಾಧೀಶರು, ವಕೀಲರು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ವಿಶ್ವ ತಂಬಾಕು ವಿರೋಧಿ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಉಮಾಮಹೇಶ್ವರಿ ಶಿಕ್ಷಣ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಮಾಡಲಾಯಿತು

ಲಿಂಗಸೂಗೂರು ಪಟ್ಟಣದ ಉಮಾಮಹೇಶ್ವರಿ ಶಿಕ್ಷಣ ಸಂಸ್ಥೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಧ್ಯವರ್ಜಿನ ಶಿಬಿರಗಳ ಸಂಘದ ಸದಸ್ಯರ ಮಕ್ಕಳಿಗೆ ಸ್ಕಾಲರ್ಶಿಪ್ ಬಗ್ಗೆ ಹಾಗೂ ಪರಿಸರ ಕಾರ್ಯಕ್ರಮ ವಿದ್ಯಾರ್ಥಿ ಜೀವನದ ಪ್ರಮುಖವಾದ ಅಂಶಗಳು ಮಾಹಿತಿ ನೀಡಿದರು ಸರಕಾರಿ ವೈದ್ಯಾಧಿಕಾರಿಗಳಾದ ರವಿ ಬಳೆಗಾರ್ ತಂಬಾಕಿನಿಂದ ಆಗುವ ದುಷ್ಪರಿಣಾಮಗಳು ಹಾಗೂ ಹದಿಹರದ ವಯಸ್ಸಿನಲ್ಲಿ ಮಕ್ಕಳ ದಾರಿ ತಪ್ಪುವ ಬಗ್ಗೆ ಅದರಿಂದ ಆಗುವ ಅನಾನುಕೂಲಗಳ ಬಗ್ಗೆ ಮಾಹಿತಿ ನೀಡದರು. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕಾಲೇಜಿನ ಸಹ ಆಡಳಿತ ಅಧಿಕಾರಿಗಳಾದ ಅಮರೇಶ ಸ್ವಾಮಿ ತೋರಣದಿನ್ನಿ ಅಧ್ಯಕ್ಷತೆ ವಹಿಸಿ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ಮೊಹಮ್ಮದ್ ರಫಿ ಹಾಗೂ ತಾಲೂಕಿನ ಯೋಜನೆ ಅಧಿಕಾರಿ ಅಡಿವಯ್ಯ ಹಾಗೂ

ಶಾಲೆಯ ವಿದ್ಯಾರ್ಥಿಗಳು ಹಾಗೂ ವಲಯದ ಮೇಲ್ವಿಚಾರಕರಾದ ಆಂಥೋನಿ ಕೃಷಿ ಅಧಿಕಾರಿ ಮಹಮ್ಮದ್ ಅಲಿ ನಾಗಡದಿನ್ನಿ ಸೇವಾ ಪ್ರತಿನಿಧಿ ಉಪಸ್ಥಿತರಿದ್ದರು.

# ತಂಬಾಕು ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸುವುದು ಅಗತ್ಯ–ದಿಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.31–ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.




ನವನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶನಿವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಹಯೋಗದಲ್ಲಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಪ್ರತಿಯೊಬ್ಬರಲ್ಲೂ ಅರಿವು ಮೂಡಿಸಬೇಕು ಎಂದರು.

ಪ್ರಸ್ತುತ ದಿನಗಳಲ್ಲಿ 13–14 ವರ್ಷದ ಮಕ್ಕಳು ಕೂಡ ತಂಬಾಕು ಸೇವನೆ ಚಟಕ್ಕೆ ಒಳಗಾಗುತ್ತಿರುವುದು ಆಘಾತಕಾರಿ ವಿಷಯವಾಗಿದೆ. ಮಕ್ಕಳು ಬೇಗನೆ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಶಾಲೆ ಕಾಲೇಜಿನ ಮಕ್ಕಳಿಗೂ ಇದರ ಬಗ್ಗೆ ಅರಿವು ಮೂಡಿಸುವುದು ಉತ್ತಮ ಎಂದು ಹೇಳಿದ ದಿಡ್ಡಿ, ತಂಬಾಕು ಸೇವನೆ ಹಾಗೂ ಮದ್ಯಪಾನ ಇನ್ನಿತರ ದುಶ್ಚಟದಿಂದ ಆರೋಗ್ಯದ ಮೇಲೆ ಉಂಟಾಗುವ ಗಂಭೀರ ಪರಿಣಾಮದ ಬಗ್ಗೆ ಅರಿವು ಮೂಡಿಸಬೇಕು. ಸಾರ್ವಜನಿಕರು ದುಶ್ಚಟಗಳಿಂದ ಹೊರಬಂದು ಕುಟುಂಬದ ಪೋಷಣೆ ಕಡೆ ಗಮನಹರಿಸಿ, ಉತ್ತಮ ಜೀವನ ನಡೆಸುವಂತೆ ಮಾಡುವುದೇ ಈ ಕಾರ್ಯಕ್ರಮದ ಧ್ಯೇಯವಾಗಿದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಂಜುನಾಥ ಮಾತನಾಡಿ, ತಂಬಾಕಿನಲ್ಲಿರುವ ನಿಕೋಟಿನ್ ಅಂಶವು ಮತ್ತೆ ಮತ್ತೆ ತಂಬಾಕು ಬಳಸಲು ಜನರನ್ನು ಪ್ರೇರೆಪಿಸುತ್ತದೆ. ಪುರುಷರಲ್ಲಿ ತಂಬಾಕು ಸೇವನೆ ಸಾಮಾನ್ಯ. ಆದರೆ ಇತ್ತೀಚಿನ ದಿನಗಳಲ್ಲಿ ಹೆಣ್ಣುಮಕ್ಕಳು ಸಹ ತಂಬಾಕು ಸೇವನೆಯಂತಹ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ವಿಪರ್ಯಾಸ ಸಂಗತಿಯಾಗಿದೆ. ತಂಬಾಕು ಸೇವನೆಯ ದುಶ್ಚಟಗಳಿಂದಾಗುವ ನಿರಂತರ ಆರೋಗ್ಯದ ಸಮಸ್ಯೆಗಳ ಬಗ್ಗೆ ನಾಗರಿಕರಲ್ಲಿ ಅರಿವು ಮೂಡಿಸಿ ತಂಬಾಕು ಸೇವನೆಯನ್ನು ತಡೆಯುವುದೇ ಜಾಥಾದ ಉದ್ದೇಶ ಎಂದರು. ಜಾಥಾ ಜಿಲ್ಲಾ ಆಸ್ಪತ್ರೆ ಆವರಣದಿಂದ ನಾನಾ ಕಡೆಗಳಲ್ಲಿ ಸಂಚರಿಸಿ ಎಲ್.ಐ.ಸಿ ವೃತ್ತಕ್ಕೆ ಮುಕ್ತಾಯಗೊಂಡಿತು. ಜಾಥಾದಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಘೋಷಣಾ ಫಲಕಗಳನ್ನು ಹಿಡಿದು ಘೋಷ ವ್ಯಾಕ್ಯಗಳನ್ನು ಕೂಗಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಮಹೇಶ ಕೋಣಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಕುಟುಂಬ ಕಲ್ಯಾಣ ಅಧಿಕಾರಿಗಳು ಡಿ.ಬಿ.ಪಟ್ಟಣಶೆಟ್ಟ, ಡಾ.ಕುಸುಮಾ ಮಾಗಿ, ಜಿಲ್ಲಾ ತಂಬಾಕು ಸಲಹೆಗಾರ ಶಶಿಕುಮಾರ ಕುಮಟಳ್ಳಿ ಸೇರಿದಂತೆ ಜಿಲ್ಲಾ ಸಮೀಕ್ಷಣಾಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿ, ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಅಲ್ಪಸಂಖ್ಯಾತರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.31–ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರ ವಸತಿ ನಿಲಯಗಳಲ್ಲಿ 2025–26ನೇ ಸಾಲಿಗೆ ಖಾಲಿ ಇರುವ ಸ್ಥಾನಗಳಿಗೆ ಪಿಯುಸಿ, ಐಟಿಐ, ಡಿಪ್ಲೋಮಾ ಹಾಗೂ ಪ್ರಥಮ ವರ್ಷದ ಪದವಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳ ಮನೆ ಹಾಗೂ ಕಾಲೇಜು ಮಧ್ಯೆ ಕನಿಷ್ಟ 5 ಕಿಮೀ ದೂರವಿದ್ದು, ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ವಿದ್ಯಾರ್ಥಿಗಳು ಜಾತಿ, ಆದಾಯ ಪ್ರಮಾಣ ಪತ್ರ, ಕಳೆದ ಸಾಲಿನ ಅಂಕಪಟ್ಟಿ, ಫೀ ರಶೀದಿ, ಅಂತರ ಪ್ರಮಾಣ ಪತ್ರ, 2 ಫೋಟೋಗಳೊಂದಿಗೆ ಜೂನ್ 28 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಅರ್ಜಿ ನಮೂನೆಯನ್ನು ಣಣಠಿ:// ,ಃಠಿ.ಇಚಿಡಿಟಚಿಣಚಿಞಚಿ.ರಠಿತ.ಟಿ ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ, ಪಾಂಶುಪಾಲರಿಂದ ದೃಢೀಕರಿಸಿ, ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿಗಳನ್ನು ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕೀಲರು ನೈತಿಕ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು–ನ್ಯಾ.ಬೆನಕಟ್ಟಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.31–ನ್ಯಾಯವಾದಿಗಳು ನೈತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ವಿಜಯಪುರ ಜಿಲ್ಲಾ 3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಕೆ.ಎಚ್.ಬೆನಕಟ್ಟಿ ಹೇಳಿದರು.

ನಗರದ ಬಿವಿವಿ ಸಂಘದ ಎಸ್.ಸಿ.ನಂದಿಮಠ ಕಾನೂನು ಮಹಾವಿದ್ಯಾಲಯದ 2024–25 ನೇ ಸಾಲಿನ ಪ್ರತಿಭಾ ಪುರಸ್ಕಾರ ಮತ್ತು ಎಲ್.ಎಲ್.ಬಿ.ಅಂತಿಮ ವರ್ಷದ ವಿದ್ಯಾರ್ಥಿಗಳು ಬೀಳ್ಕೊಡುಗೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ನಂದಿಮಠ ಕಾನೂನು ಮಹಾವಿದ್ಯಾಲಯ ರಾಜ್ಯದಲ್ಲಿಯೇ ಮಾದರಿಯಾಗಿದ್ದು, ಉತ್ತಮ ನ್ಯಾಯವಾದಿಗಳನ್ನು ಕೊಡುಗೆಯಾಗಿ ನೀಡುವಲ್ಲಿ ಪ್ರಮುಖ ಪಾತ್ರವಹಿಸಿದೆ ಎಂದರು.

ಕಾನೂನು ವಿದ್ಯಾರ್ಥಿಗಳು ಒಳ್ಳೆಯ ನ್ಯಾಯವಾದಿಯಾಗಬೇಕಾದರೆ ಸತತ ಅಧ್ಯಯನ, ಶ್ರದ್ಧೆ ಮತ್ತು ಶಿಸ್ತು ಅತೀ ಅವಶ್ಯಕವಾಗಿದೆ. ಕೇವಲ ಹೆಚ್ಚು ಅಂಕಗಳಿಸುವದೇ ಯಶಸ್ಸು ಅಲ್ಲ. ವಿದ್ಯಾರ್ಥಿಗಳು ಯಾವುದೇ ಹಂತದಲ್ಲಿಯೂ ಮುನ್ನಡೆ ಸಾಧಿಸಬಹುದು. ವಕೀಲ ವೃತ್ತಿಯು ಒಂದು ಶ್ರೇಷ್ಠ ವೃತ್ತಿಯಾಗಿದ್ದು ಈ ವೃತ್ತಿಯನ್ನು ಆಯ್ಕೆಮಾಡಿಕೊಂಡವರು ಯಶಸ್ವಿ ವಕೀಲರಾಗಲು ಕೇವಲ ಕಾನೂನು ವಿಷಯ ಮಾತ್ರವಲ್ಲದೇ ಎಲ್ಲ ವಿಷಯಗಳ ಕುರಿತು ಹೆಚ್ಚಿನ ಜ್ಞಾನಾರ್ಜನೆ ಮಾಡುವುದು ಮುಖ್ಯವಾಗಿದೆ ಎಂದು ಅವರು ಹೇಳಿದರು.

ಬಿ.ವ್ಹಿ.ವ್ಹಿ.ಸಂಘದ ಆಡಳಿತಾಧಿಕಾರಿ ಪ್ರೊ. ವ್ಹಿ.ಆರ್.ಶಿರೋಳ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಕಾನೂನು ವಿದ್ಯಾರ್ಥಿಗಳಿಗೆ ವಿಫುಲ ಅವಕಾಶಗಳು ಲಭ್ಯವಿದ್ದು ವಿದ್ಯಾರ್ಥಿಗಳು ಶಿಕ್ಷಕರ ಮಾರ್ಗದರ್ಶನ ಪಡೆದುಕೊಂಡು ಕಠಿಣ ಪರಿಶ್ರಮ ಮತ್ತು ಸತತ ಅಧ್ಯಯನದ ಮೂಲಕ ಉತ್ತಮ ವಕೀಲರಾಗಿ ರೂಪುಗೊಳ್ಳಲಿ ಎಂದು ಹಾರೈಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಮಾತನಾಡಿ, ಕಾನೂನು ಮಹಾವಿದ್ಯಾಲಯ ಉತ್ತಮ ಗುರುವೃಂದ ಮತ್ತು ಶ್ರೇಷ್ಠವಾದ ಗ್ರಂಥಾಲಯವನ್ನು ಹೊಂದಿದ್ದು ಇದರ ಸದುಪಯೋಗ ಪಡೆದು–ಕೊಂಡು ಶ್ರದ್ಧೆಯಿಂದ ಅಭ್ಯಾಸ ಮಾಡಿ ಶ್ರೇಷ್ಠ ವಕೀಲರಾಗಿ, ನ್ಯಾಯಾಧೀಶರಾಗಿ ಸಮಾಜ ಸೇವೆ ಮಾಡಬೇಕೆಂದು ಹೇಳಿದರು.

ಸುನೀಲ ಗೋಡಿ ಪ್ರಾರ್ಥಿಸಿದರು. ಪ್ರಾಚಾರ್ಯೆ ಡಾ.ಎಂ.ಪಿ.ಚಂದ್ರಿಕಾ ಸ್ವಾಗತಿಸಿ, ಪರಿಚಯಿಸಿದರು. ಡಾ ಸುಧೀಂದ್ರ ವಾರ್ಷಿಕ ವರದಿ ವಾಚಿಸಿದರು. ಪ್ರೊ. ಶ್ರೀಮತಿ ಶ್ರದ್ಧಾ ಕಮತಗಿ, ಪ್ರೊ. ಆರ್. ಎಸ್.ಕುಂಬಾರ ಹಾಗೂ ಪ್ರೊ. ಎನ್.ಎಂ.ದೇಸಾಯಿ ಪಾರಿತೋಷಕ ವಿತರಣೆ ನಡೆಸಿಕೊಟ್ಟರು. ವಿದ್ಯಾರ್ಥಿ ಕಾರ್ಯದರ್ಶಿ ಲಕ್ಷ್ಮಣ ಪಾದನಕಟ್ಟಿ ವಂದಿಸಿದರು. ಕೃಷ್ಣಾ ಪೂಜಾರ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲ ಬೋಧಕ–ಭೋದಕೇತರ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಿಸಲಾಯಿತು.

# ಶಿಕ್ಷಕ ಶಿವಲಿಂಗ ಹೇಡೆಗೆ ಪಿಎಚ್.ಡಿ. ಪದವಿ

ಮಲ್ಲಮ್ಮ ನುಡಿ ವಾರ್ತೆ

ಔರಾದ್: ತಾಲೂಕಿನ ಸಂತಪೂರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಶಿವಲಿಂಗ ಹೇಡೆ ಅವರಿಗೆ ಗುಲಬರ್ಗಾ ವಿಶ್ವವಿದ್ಯಾಲಯ ಪಿಎಚ್.ಡಿ. ಪದವಿ ನೀಡಿದೆ.

ಡಾ.ಜಯಶ್ರೀ ದಂಡೆ ಅವರ ಮಾರ್ಗದರ್ಶನದಲ್ಲಿ '12ನೇ ಶತಮಾನದ ಶರಣರು : ಬೀದರ ಜಿಲ್ಲೆಯ ಮೌಖಿಕ ಸಾಹಿತ್ಯ' ವಿಷಯ ಕುರಿತು ಮಂಡಿಸಿದ



ಮಹಾಪ್ರಬಂಧವನ್ನು ವಿಶ್ವವಿದ್ಯಾಲಯ ಪಿಎಚ್.ಡಿ. ಪದವಿಗೆ ಮಾನ್ಯ ಮಾಡಿದೆ.

# ಚರಂತಿಮಠ ಜನ್ಮ ದಿನಾಚರಣೆ: ರಕ್ತದಾನ, ಹಣ್ಣು ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ31–ಮಾಜಿ ಶಾಸಕ ವೀರಣ್ಣ ಚರಂತಿಮಠ ಅವರ ಜನ್ಮದಿನದ ಅಂಗವಾಗಿ ಶನಿವಾರ ಬಿವಿವಿ ಸಂಘದ ವಿವಿಧ ಮಹಾವಿದ್ಯಾಲಯಗಳಲ್ಲಿ ರಕ್ತದಾನ, ಸಸಿನೆಡುವುದು ಹಾಗೂ ರೋಗಿಗಳಿಗೆ ಹಣ್ಣು ಹಂಪಲ ವಿತರಿಸಲಾಯಿತು. ವಿದ್ಯಾಗಿರಿಯಲ್ಲಿರುವ ಬಿ.ವಿ.ವಿ.ಎಸ್. ಇನ್ಸಟ್ಯೂಟ್ ಆಫ್ ಮ್ಯಾನೇಜಮೆಂಟ್ ಸ್ಟಡಿ ಸಂಸ್ಥೆಯ ಆವರಣದಲ್ಲಿ ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ ಸಸಿ ನೆಟ್ಟು ಮಾತನಾಡಿ, ವೀರಣ್ಣ ಚರಂತಿಮಠ ಅವರ ದೂರದೃಷ್ಟಿ, ಚಿಂತನಪರ ಕಾರ್ಯಗಳಿಗೆ ಎಲ್ಲರೂ ಕೈಜೋಡಿಸೋಣ ಎಂದರು.

ಪದನಿಮಿತ್ಯ ಕಾರ್ಯದರ್ಶಿ ಡಾ.ಎಸ್.ಗಾಂವಕರ್, ಸಂಸ್ಥೆಯ ನಿರ್ದೇಶಕ ಡಾ.ಪ್ರಕಾಶ ವಡವಡಗಿ, ಬಿ.ಆರ್.ಪಾಟೀಲ, ಬೋಧಕ ಬೋಧ–ಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬಿ.ವಿ.ವಿ.ಎಸ್.ಹೋಮಿಯೋಪಥೀಕ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ದಾನಗಳಲ್ಲಿ ಶ್ರೇಷ್ಠದಾನ ರಕ್ತದಾನವಾಗಿದ್ದು, ರಕ್ತದ ಅವಶ್ಯವಿರುವ ವ್ಯಕ್ತಿಗಳಿಗೆ ರಕ್ತದಾನ ಮಾಡುವುದರ ಮೂಲಕ ಎಲ್ಲರೂ ಅಮೂಲ್ಯವಾದ ಜೀವ ರಕ್ಷಣೆಗೆ ಮುಂದಾಗಬೇಕು ಎಂದರು.


ಪ್ರಾಚಾರ್ಯ ಡಾ.ಅರುಣ ಹೂಲಿ, ಹಾನಗಲ್ ಕುಮಾರೇಶ್ವರ ಆಸ್ಪತ್ರೆಯ ರಕ್ತ ಭಂಡಾರದ ವೈದ್ಯಾಧಿಕಾರಿ ಡಾ.ಕೇಶವ ಕುಲಕರ್ಣಿ, ಡಾ.ರವಿ ಕೋಟೆನ್ನವರ, ಡಾ.ಪವನ ಕುಲಕರ್ಣಿ, ಡಾ.ಅಖಿಲಾ ಹಲ್ಲೂರ, ಡಾ.ವಿಜಯಲಕ್ಷ್ಮೀ ಪಾಟೀಲ, ಡಾ.ಅಮರೇಶ ಬಳಗಾನೂರ, ಡಾ.ಸುಧೀರ ಬೆಟಗೇರಿ, ಡಾ.ರುದ್ರೇಶ ಕೊಪ್ಪಲ, ಡಾ.ಮೇಘಾ ತಳವಾರ, ಡಾ.ಪೂಜಾ ಆಲಗೂರ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಬಿ.ವಿ.ವಿ.ಎಸ್.ಆಯುರ್ವೇದ ಮಹಾ ವಿದ್ಯಾಲಯದ ವತಿಯಿಂದ ಜಿಲ್ಲಾ ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲ್ ವಿತರಿಸಲಾಯಿತು, ಪ್ರಾಚಾರ್ಯ ಡಾ.ಎಂ.ಎಸ್.ಹಿರೇಮಠ. ಡಾ. ಆರ್.ಐ.ಜಂಬಗಿ, ಡಾ.ವಿ.ಎಸ್. ಚೌದರಿ, ಡಾ.ವಿ.ಎಸ್.ಹಿರೇಮಠ, ಡಾ.ಜಿ.ಎಸ್.ಕುಲಕರ್ಣಿ, ಡಾ.ಎಸ್.ಎಸ್ ಸಾರವಾಡ, ಡಾ.ಜೆ.ಪಿ.ಗಿರಿಸಾಗರ, ಡಾ.ವಾಯ್. ಎಸ್.ಕುಲಕರ್ಣಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಇಂದು ಬಸವ ವಚನ ಗ್ರಂಥ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31 :– ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ಅವರ 50ನೇ ಜನ್ಮದಿನ ಹಾಗೂ 25ನೇ ವಿವಾಹ ಮಹೋತ್ಸವ ನಿಮಿತ್ತ ತಾಲ್ಲೂಕಿನ ಕೊಳಾರ(ಕೆ) ಕೈಗಾರಿಕಾ ಪ್ರದೇಶದಲ್ಲಿರುವ ಬಸವ ಪ್ರಸಾದ ಇಂಡಸ್ಟ್ರೀಸ್ ನಲ್ಲಿ ಜೂನ್ 1 ಸಂಜೆ 6ಕ್ಕೆ ಬಸವ ವಚನ ಗ್ರಂಥ ಬಿಡುಗಡೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಗ್ರಂಥ ಬಿಡುಗಡೆ ಮಾಡುವರು. ಸಿದ್ಧಾರೂಢ ಮಠದ ಡಾ.ಶಿವಕುಮಾರ ಸ್ವಾಮೀಜಿ, ಕೂಡಲಸಂಗಮದ ಮಾತೆ ಡಾ. ಗಂಗಾದೇವಿ, ವಿಜಯಪುರ ಜ್ಞಾನಯೋಗಾಶ್ರಮದ ಅಧ್ಯಕ್ಷ ಬಸವಲಿಂಗ ಸ್ವಾಮೀಜಿ,



ಇಳಕಲ್‌ನ ಗುರುಮಹಾಂತ ಸ್ವಾಮೀಜಿ, ಹುಲಸೂರಿನ ಶಿವಾನಂದ ಸ್ವಾಮೀಜಿ, ಕೌಠಾ(ಬಿ) ದ ಸಿದ್ಧರಾಮ ಶರಣರು ಬೆಲ್ದಾಳ, ಬರ್ದಿಪುರದ ಅವಧೂತಗಿರಿ ಮಹಾರಾಜ, ಭಾಲ್ಕಿಯ ಗುರುಬಸವ ಪಟ್ಟದ್ದೇವರು, ಮೆಹಕರದ ರಾಜೇಶ್ವರ ಶಿವಾಚಾರ್ಯ, ಬಿ.ಕೆ. ಪ್ರತಿಮಾ ಬಹೇಜಿ, ಮನ್ನಾಎಖ್ಖೆಳ್ಳಿಯ ಮಾತೆ ಮೈತ್ರಾದೇವಿ, ಬಸವ ಸೇವಾ ಪ್ರತಿಷ್ಠಾನದ ಡಾ. ಗಂಗಾಂಬಿಕೆ ಅಕ್ಕ, ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಸಾನಿಧ್ಯ ವಹಿಸುವರು.

ಗಣ್ಯರಾದ ಡಾ. ಗೀತಾ ಈಶ್ವರ ಬಿ. ಖಂಡ್ರೆ, ಆಯೇಶಾ ಬೇಗಂ ರಹೀಂಖಾನ್, ಪ್ರೇಮಾ ರಾಜಶೇಖರ ಪಾಟೀಲ, ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ, ಉಮಾದೇವಿ ಪ್ರಕಾಶ ಖಂಡ್ರೆ, ರೇಷ್ಮಾ ಕೌರ್ ಬಲಬೀರಸಿಂಗ್, ಶೋಭಾ ಉಮಾಕಾಂತ ನಾಗಮಾರಪಳ್ಳಿ ದಂಪತಿ, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಪ್ರಭು ಚವಾಣ್, ಡಾ. ಶೈಲೇಂದ್ರ ಬೆಲ್ದಾಳೆ, ಶರಣು ಸಲಗರ, ಸಿದ್ದು ಪಾಟೀಲ, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ, ವಿಧಾನ ಪರಿಷತ್ ಸದಸ್ಯರಾದ ಮಾರುತಿರಾವ್ ಮುಳೆ, ಡಾ. ಚಂದ್ರಶೇಖರ ಪಾಟೀಲ ಹಾಗೂ ಭೀಮರಾವ್ ಪಾಟೀಲ ಅವರನ್ನು ಸತ್ಕರಿಸಲಾಗುವುದು ಎಂದು ಹೇಳಿಕೆ ತಿಳಿಸಿದೆ.

# ಬ್ಯಾಂಕಿನ ಅಭಿವೃದ್ಧಿಗೆ ನೌಕರರ ಪಾತ್ರ ಅಪಾರ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಒಂದು ಹಣಕಾಸಿನ ಸಂಸ್ಥೆಯು ಅಭಿವೃದ್ಧಿಯನ್ನು ಸಾಧಿಸಬೇಕಾದರೆ ಆ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಅಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಪೂರಕವಾಗಿ ಕೆಲಸ ಮಾಡಬೇಕು ಇಂದು ನಿವೃತ್ತರಾಗುತ್ತಿರುವ ಈ ಸಂಸ್ಥೆ ಇಬ್ಬರೂ ನೌಕರರು ಅತ್ಯಂತ ಪ್ರಾಮಾಣಿಕತೆಯಿಂದ ತಮ್ಮ ಸೇವೆಯನ್ನು ಸಲ್ಲಿಸಿದ್ದಾರೆ ಆಡಳಿತ ಮಂಡಳಿ ಅವರ ಸೇವೆಯನ್ನು ಸದಾ ಸ್ಮರಿಸುತ್ತದೆ ಎಂದು ನಿರ್ದೇಶಕ ಇಬ್ರಾಹಿಂ ಮನ್ಸೂರ ಹೇಳಿದರು.



ಶನಿವಾರ ಪಟ್ಟಣದ ಮುಸ್ಲಿಂ ಬ್ಯಾಂಕ್ ಸಭಾಂಗಣದಲ್ಲಿ ಹಮ್ಮಿಕೊಂಡ ವಯೋನಿವೃತ್ತರಾದ ವ್ಯವಸ್ಥಾಪಕ ಎ.ಎಚ್.ಢಾಲಾಯತ್ ಹಾಗೂ ಸಿಪಾಯಿ ಕೆ.ಎಚ್.ಕೆಂಭಾವಿ ಇವರ ಬಿಳ್ಕೊಡುವ ಸಮಾರಂಭದಲ್ಲಿ ಅವರು ಮಾತನಾಡಿದರು. ನೌಕರರು ನಿವೃತ್ತರಾಗುವುದು ಒಂದು ಸಹಜ ಪ್ರಕ್ರಿಯೆ ಆದರೆ ಅವರು ತಮ್ಮ ಸೇವಾ ಅವಧಿಯಲ್ಲಿ ಮಾಡಿದ ಪ್ರಾಮಾಣಿಕ ಸೇವೆಯನ್ನು ಸದಾ ನೆನಪಿಸುವ ಹಾಗಿರಬೇಕು. ಇಂದು ನಿವೃತ್ತರಾಗುತ್ತಿರುವ ವ್ಯವಸ್ಥಾಪಕ ಡಾಲಾಯತ್ ಅವರು ಈ ಬ್ಯಾಂಕಿನಲ್ಲಿ 30 ವರ್ಷಗಳ ಸಾರ್ಥಕ ಸೇವೆಯನ್ನು ಸಲ್ಲಿಸಿದ್ದಾರೆ ಗ್ರಾಹಕರೊಂದಿಗೆ ಅವರಿಗಿದ್ದ ಅತ್ಯುತ್ತಮ ಸಂಬಂಧಗಳಿಂದಾಗಿ ನಮ್ಮ ಬ್ಯಾಂಕು ಹೆಚ್ಚಿನ ಅಭಿವೃದ್ಧಿ ಸಾಧಿಸಲು ಸಾಧ್ಯವಾಗಿದೆ ಅದೇ ರೀತಿಯಾಗಿ ಸಿಪಾಯಿ ಕೆಂಭಾವಿಯವರು 18 ವರ್ಷ ಸೇವೆಯನ್ನು ಸಲ್ಲಿಸಿದ್ದಾರೆ ಇವರಿಬ್ಬರಿಗೂ ನಾವು ಕೃತಜ್ಞರಾಗಿದ್ದೇವೆ ಅವರ ವಿಶ್ರಾಂತ ಬದುಕು ನೆಮ್ಮದಿ ದಾಯಕವಾಗಿರಲೆಂದು ಆಡಳಿತ ಮಂಡಳಿ ಪರವಾಗಿ ಹಾರೈಸುತ್ತೇನೆ ಎಂದರು. ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕ ಎಸ್.ಹೆಚ್. ಪಟೇಲ, ಸಾಮಾಜಿಕ ಕಾರ್ಯಕರ್ತ ಎಸ್.ಎ.ನಾಲಬಂದ. ಎಂ.ಎಚ್. ಬೀಳಗಿ, ಭಾಷಾ ಸಾಬ ಆರಬೋಳ, ಬ್ಯಾಂಕ್ ಸಿಬ್ಬಂದಿ ಎಚ್.ಎಂ.ಹಂಡೇಬಾಗ ಮಾತನಾಡಿದರು. ಸನ್ಮಾನ ಸ್ವೀಕರಿಸಿ ನಿವೃತ್ತ ವ್ಯವಸ್ಥಾಪಕ ಎ.ಎಚ್. ಡಾಲಾಯತ್ ಹಾಗೂ ಕೆಂಭಾವಿ ಮಾತನಾಡಿ ನಮ್ಮ ಸೇವೆಯ ಉದ್ದಕ್ಕೂ ಆಡಳಿತ ಮಂಡಳಿ ಹಾಗೂ ಸಹೋದ್ಯೋಗಿಗಳ ಸಂಪೂರ್ಣ ಸಹಕಾರ ನಮಗೆ ಸಿಕ್ಕಿದೆ ಅವರಿಗೆ ನಾವು ಕೃತಜ್ಞರಾಗಿದ್ದೇವೆ ಎಂದರು. ನಿವೃತ್ತ ನೌಕರರಾದ ಡಾಲಾಯತ್ ಹಾಗೂ ಕೆಂಭಾವಿ ಇವರನ್ನು ಬ್ಯಾಂಕಿನ ಆಡಳಿತ ಮಂಡಳಿ ಸಿಬ್ಬಂದಿ ವರ್ಗ ಪಟ್ಟಣದ ಹಲವಾರು ಸಂಘ–ಸಂಸ್ಥೆಗಳು ಹಾಗೂ ವ್ಯಕ್ತಿಗಳಿಂದ ಸನ್ಮಾನಿಸಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಬ್ಯಾಂಕಿನ ನೂತನ ವ್ಯವಸ್ಥಾಪಕ ಎಲ್. ಆರ್.ನಾಗೂರ ಇವರಿಗೆ ಅಧಿಕಾರ ಹಸ್ತಾಂತರ ಮಾಡಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಬ್ಯಾಂಕಿನ ಚೇರ್ಮನ್ ಚಂದಾಹುಸೇನ ಖಾಂಜಾದೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ರಫೀಕ್ ಬೇಪಾರಿ, ಆಡಳಿತ ಮಂಡಳಿಯ ನಿರ್ದೇಶಕರಾದ ದಾದಾಪೀರ ಚೌದ್ರಿ, ಮಹೆಬೂಬ ಕೆಂಭಾವಿ, ಮಹಮ್ಮದ್ ಇಸ್ಮಾಯಿಲ (ತನ್ವೀರ್) ಮನಗೂಳಿ, ಸಿಕಂದರಭಾಷಾ ಡೋಣಿ, ಫಯಾಜ ಉತ್ನಾಳ, ಮೊಹಮ್ಮದ ಶಫೀಕ ಇನಾಮದಾರ, ಮುರ್ತುಜಾ (ಮುನ್ನಾ) ಅರ್ಜುಣಗಿ, ಮೊಹಮ್ಮದ್ ಆದಾಮ್ ಅತ್ತಾರ,, ಸಕೀನಾಬಿ ಲಾಹೋರಿ, ಮಾಜಾನಬಿ ಚನ್ನೂರ, ಗಣ್ಯರಾದ ಗನಿಸಾಬ ಲಾಹೋರಿ, ಮಾಸೂಮಸಾಬ ಕೆಂಭಾವಿ, ಮೆಹಬೂಬ ಚೋರಗಸ್ತಿ, ಹಸನಸಾಬ ಮನಗೂಳಿ ,ಸಿಬ್ಬಂದಿಗಳಾದ ಎಲ್.ಆರ್.ನಾಗೂರ, ಎಚ್. ಎಮ್. ಹಂಡೆಬಾಗ, ಶ್ರೀಮತಿ ಟಿ.ಎ.ನವಾಜಕಟ್ಟಿ, ಆರ್.ಕೆ. ನಡುವಿನಮನಿ, ಎಂ.ಜೆ.ಪಟೇಲ, ಬಿ.ಎ.ಬೀಳಗಿ ಮತ್ತಿತರರು ಇದ್ದರು.

# ತಂಬಾಕು ಮತ್ತು ಧೂಮಪಾನ ಸೇವನೆಯಿಂದ ಕ್ಯಾನ್ಸರ್‌ಗೆ ಯುವಕರೆ ಹೆಚ್ಚು ಬಲಿ:ನ್ಯಾಯಾಧೀಶ ಶ್ರೀನಿವಾಸ ನವಲೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ. 31: ತಂಬಾಕು ಮತ್ತು ಧೂಮಪಾನ ಸೇವನೆಯಿಂದ ಸಮಾಜದಲ್ಲಿ ಹೆಚ್ಚಿನ ಯುವಕರು ಕ್ಯಾನ್ಸರ್ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಇದು ವಿಷಾಧನೀಯ ಸಂಗತಿ ಎಂದು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಹೇಳಿದರು.

ಶನಿವಾರದಂದು ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಮತ್ತು ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯ ಎನ್.ಎಸ್.ಎಸ್. ಘಟಕ ಕಲಬುರಗಿ ಇವರುಗಳು ಸಂಯುಕ್ತಾಶ್ರಯದಲ್ಲಿ "ಮೇ.31 ವಿಶ್ವ ತಂಬಾಕು ರಹಿತ ದಿನಾಚರಣೆ"ಯನ್ನು ಆಕರ್ಷಕ ಉತ್ಪನ್ನಗಳು ಕರಾಳ ಉದ್ದೇಶಗಳು" ಎಂಬ ಧ್ಯೇಯವಾಕ್ಯದ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮುಖಾಂತರ ಉದ್ಘಾಟಿಸಿ ಮಾತನಾಡಿದರು.

ಬೆಳೆದ ಮಕ್ಕಳು ದುಶ್ಚಟಗಳಿಗೆ ಬಲಿಯಾದಾಗ ಕುಟುಂಬಗಳು ತೀವ್ರವಾದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿ ಅನೇಕ ನೋವುಗಳನ್ನು ಅನುಭವಿಸುತ್ತಿರುವುದು ಕಣ್ಣಾರೆ ಕಂಡರು ಸಹ ಉಳಿದ ಯುವ ಸಮೂಹ ಎಚ್ಚರಗೊಳ್ಳದಿರುವುದು ದುರದೃಷ್ಟ ಎಂದು ಹೇಳಿದರು.

ಭಾರತದಲ್ಲಿ ತಂಬಾಕು ಉತ್ಪನ್ನವನ್ನು ಮೊದಲಿಗೆ ಪರಿಚಯಸಿದವರು ಪೋರ್ಚಗಿಸರು. ಅವರು ಪರಿಚಯಿಸಿದ ತಂಬಾಕು ಭಾರತೀಯರು ಬೆಳೆಯುವುದಲ್ಲದೇ ಉತ್ಪನ್ನಗಳನ್ನು ಸೇವನೆ ಮಾಡಲು ಆರಂಭಿಸಿದರು. ವಿಜ್ಞಾನ ಮತ್ತು ತಂತ್ರಜ್ಞಾನ ಆವಿಷ್ಕಾರದಲ್ಲಿ ಆದ ಬದಲಾವಣೆಯಿಂದ ನಂತರ ದಿನಮಾನಗಳಲ್ಲಿ ತಂಬಾಕಿನ ಉತ್ಪನ್ನಗಳ ಕುರಿತು ಹಲವಾರು ಅಧ್ಯಯನ ಮತ್ತು ಸಂಶೋಧನಾ ವರದಿಗಳಿಂದ ತಂಬಾಕಿನಲ್ಲಿ ಹೆಚ್ಚಿನ ಪ್ರಮಾಣದ ನಿಕೋಟಿನ್ ಅಂಶವಿರುವುದರಿಂದ ಇದು ಆರೋಗ್ಯಕ್ಕೆ ಕ್ಯಾನ್ಸರ್ ಉಂಟುಮಾಡುವ ಹಾನಿಕರ ಉತ್ಪನ್ನ ಎಂದು ವರದಿಗಳು ಮಾಹಿತಿಯನ್ನು ಬಹಿರಂಗ ಪಡಿಸಿದವು.

ನಂತರ ಸುಪ್ರೀಂ ಕೋರ್ಟ್ ಮಧ್ಯ ಪ್ರವೇಶಿಸಿ ತಂಬಾಕು, ಸಿಗರೇಟಿನ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಉತ್ಪನ್ನಗಳ ಮಾಹಿತಿಯನ್ನು ಹಾಗೂ ಅದರಿಂದಾಗುವ ಸಮಸ್ಯೆಗಳ ಕುರಿತು ಅವುಗಳ ಪಟ್ಟಣದ ಮೇಲೆ ಮುದ್ರಿಸಬೇಕೆಂದು ಸುಪ್ರಿಂ ಕೋರ್ಟ್ ಆದೇಶ ನೀಡಿತು ಎಂದರು.

ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಜ್ಞಾನರ್ಜನೆ ಮುಖ್ಯಧ್ಯೇಯವನ್ನು ಮಾಡಿಕೊಂಡು ಸಮಾಜದಲ್ಲಿ ಏನಾದರೂ ಸಾಧನೆ ಮಾಡಿ ಆರೋಗ್ಯವೇ ಭಾಗ್ಯ ಎಂಬ ಗಾಧೆಯಂತೆ ಪ್ರತಿಯೊಬ್ಬರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಅವರು ಹೇಳಿದರು.

ಮುಖ್ಯಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪಾ ಖ್ಯಾತನಾಳ ಅವರು ಮಾತನಾಡಿ, ತಂಬಾಕು ಮತ್ತು ಸಿಗರೇಟಿನಂತಹ ಹಾನಿಕರ ವಸ್ತುಗಳ ಸೇವನೆಯಿಂದ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿ ಕ್ಯಾನ್ಸರ್ ರೋಗಗಳಿಗೆ ಬಲಿಯಾಗುವ ಸಂಭವವಿರುತ್ತದೆ ಎಂದರು.

ಪ್ರಸುತ್ತ ದಿನಗಳಲ್ಲಿ ಯುವಜನಾಂಗ ತಮ್ಮ ನಟ ನಟಿಯರ ಚಿತ್ರಗಳಿಂದ ಪ್ರೇರೆಪಣೆಗೊಂಡು ದುಶ್ಚಟಗಳಿಗೆ ಬಲಿಯಾಗುತ್ತಿರುವುದು ತುಂಭಾ ವಿಷಾಧನೀಯ ಸಂಗತಿಯಾಗಿದ್ದು, ಅದಕ್ಕಾಗಿ ಎಲ್ಲ ಇಲಾಖೆಗಳ ಸಮನ್ವಯ ಸಹಕಾರದಿಂದ ಇದರ ಕುರಿತು ಯುವ ಸಮೂಹದಲ್ಲಿ ಅರಿವು ಮೂಡಿಸುವ ಮೂಲಕ ಸ್ವಾಸ್ಥ್ಯ ಸಮಾಜನಿರ್ಮಾಣ ಮಾಡಬೇಕೆಂದರು.

ಕಲಬುರಗಿ ಕೆ.ಪಿ.ಇ. ಸೊಸೈಟಿ ಪ್ರಧಾನ ಕಾರ್ಯದರ್ಶಿಗಳಾದ ಶಾಂತಪ್ಪ ಸೂರನ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಯೌವ್ವನದಲ್ಲಿ ಯಾವುದೇ ಚಟಗಳಿಗೆ ಅಂಟಿಕೊಳ್ಳಬಾರದು ತಂಬಾಕು ಆರೋಗ್ಯಕ್ಕೆ ಹಾನಿಕರ ಎಂದು ತಿಳಿದುಕೊಂಡು ಯುವಜನಾಂಗ ದುಶ್ಚಟಗಳಿಂದ ಮುಕ್ತರಾಗಬೇಕು, ಶಾಲಾ ಕಾಲೇಜುಗಳು ವಿಶ್ವವಿದ್ಯಾಲಯಗಳು ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು, ಸಿಗರೇಟ್‌ನ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಯುವಜನಾಂಗದವರಿಗೆ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು. ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ. ರಾಕೇಶ ಕಾಂಬಳೆ ಮಾತನಾಡಿ, ತಂಬಾಕು ಉತ್ಪನ್ನ ಕಂಪನಿಗಳು, ತಮ್ಮ ಉತ್ಪನ್ನದ ಹೆಚ್ಚಿನ ಮಾರಾಟದ ಆಸೆಗಾಗಿ ಹಲವಾರು ಹಾನಿಕರ ವಸ್ತುಗಳು ಬಳಸಿ ಹೆಚ್ಚಿನ ಪ್ರಮಾಣದಲ್ಲಿ ಜಾಹೀರಾತು ಪ್ರಚಾರ ನೀಡಿ ತಂಬಾಕು ಮಾರಟ ಮಾಡುತ್ತವೆ. ಇದನ್ನು ಸರ್ಕಾರ ತಡೆಯಲು ಕ್ರಮಕೈಗೊಳ್ಳಬೇಕೆಂದು ಪ್ರಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಕುಮಾರಿ ಆರತಿ ಧನುಶ್ರೀ "ವಿಶ್ವ ತಂಬಾಕು ರಹಿತ ದಿನಾಚರಣೆ" ಅಂಗವಾಗಿ ಪ್ರತಿಜ್ಞೆ ವಿಧಿ ಭೋದಿಸಿದರು

ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಚಂದ್ರಶೇಖರ ಶೀಲವಂತ ಅವರು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಅಲ್-ಬದರ್, ಹೆಚ್.ಕೆ.ಇ, ಇ.ಎಸ್.ಐ. ದಂತ ಮಹಾವಿದ್ಯಾಲಯದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಸ್ಪರ್ಧೆಯಲ್ಲಿ ವಿಜೇತರಾದ ಪ್ರಥಮ ಸ್ಥಾನ ಗಳಿಸಿದ ಡಾ, ಸೈಯದ್ ಥೈಹೆರ್ ಫಾತಿಮಾ, ದ್ವಿತೀಯ ಡಾ. ಪ್ರಶಾಂತ ಎಸ್, ತೃತೀಯ, ಡಾ. ಸುಷ್ಮಾ ಬಿ.ಎಂ. ಮತ್ತು ಘೋಷಣೆಗಳ ಸ್ಪರ್ಧೆಯಲ್ಲಿ ವಿಜೇತರಾದ ಎನ್.ವಿ.ನೂತನ್ ವಿದ್ಯಾಲಯಕ್ಕೆ ಪ್ರಶಸ್ತಿ ಪತ್ರಗಳನ್ನು ನೀಡಿ ಗೌರವಿಸಲಾಯಿತು. ವೇದಿಕೆ ಮೇಲೆ ಕಲಬುರಗಿಯ ವಕೀಲರ ಸಂಘದ ಅಧ್ಯಕ್ಷರಾದ ಎಸ್.ವಿ. ಪಸಾರ್, ತಂಬಾಕು ನಿಯಂತ್ರಣ ಸಲಹೆಗಾರ್ತಿ ಸುಜಾತ ಪಾಟೀಲ, ವಕೀಲ ಅಲ್ಲಾವುದ್ದಿನ್ ಸಗರ, ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಎನ್.ಎಸ್.ಎಸ್. ಘಟಕದ ವಿದ್ಯಾರ್ಥಿಗಳು. ಭಾಗವಹಿಸಿದ್ದರು.



# ಸರ್ಕಾರಿ ಶಾಲೆಗಳನ್ನು ಉಳಿಸಲು ಎಐಡಿಎಸ್‌ಓ ನೇತೃತ್ವದಲ್ಲಿ ಸಹಿ ಸಂಗ್ರಹ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.31: ಸರ್ಕಾರಿ ಶಾಲೆಗಳ ಉಳಿಸಲು ಬೆಂಬಲವಾಗಿ ನಿಂತ ಸಾರ್ವಜನಿಕರು ಆರು ಸಾವಿರಕ್ಕೂ ಹೆಚ್ಚು ಸರಕಾರಿ ಶಾಲೆಗಳನ್ನು ಮುಚ್ಚುವುದನ್ನು ವಿರೋಧಿಸಿ ಉಳೆನೂರು ಮತ್ತು ಉಳೇನೂರು ಗ್ರಾಮದ ಬಸ್ ನಿಲ್ದಾಣದ ಬಳಿ ಎಐಡಿಎಸ್‌ಓ ನೇತೃತ್ವದಲ್ಲಿ ಸಹಿ ಸಂಗ್ರಹ ಅಭಿಯಾನ.

ಸಂಯೋಜನೆ ಹೆಸರಿನಲ್ಲಿ 6200 ಸರ್ಕಾರಿ ಶಾಲೆಗಳನ್ನು ಮುಚ್ಚುವುದನ್ನು ವಿರೋಧಿಸಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ನೇತೃತ್ವದಲ್ಲಿ ಉಳೇನೂರು ಗ್ರಾಮದಲ್ಲಿ ನಡೆದ ಸಹಿ ಸಂಗ್ರಹ ಅಭಿಯಾನ.

ಅಭಿಯಾನದಲ್ಲಿ ಉಳೇನೂರಿನ ಸ್ಥಳೀಯ ಸಮಿತಿಯ ಮುಖಂಡ ಮತ್ತು ಎಐಡಿಎಸ್‌ಓ ಜಿಲ್ಲಾ ಸಂಚಾಲಕ ಗಂಗರಾಜ ಅಳ್ಳಳ್ಳಿ ಮಾತನಾಡಿ ನಮ್ಮ ದೇಶದಲ್ಲಿ ಸ್ವಾತಂತ್ರ್ಯ ನಂತರ ಅಧಿಕಾರಕ್ಕೆ ಬಂದ ಎಲ್ಲಾ ಪಕ್ಷಗಳು ಶಿಕ್ಷಣವನ್ನು ಖಾಸಗೀಕರಣ ಮಾಡಲು ಮುಂದಾಗಿವೆ. ಈಗಿರುವ ಕಾಂಗ್ರೆಸ್ ಸರ್ಕಾರವು ಈಗ 6000 ಕ್ಕೂ ಹೆಚ್ಚು ಶಾಲೆಗಳನ್ನು ಮುಚ್ಚಲು ಮುಂದಾಗುತ್ತಿದೆ, ಇದನ್ನು ವಿರೋಧಿಸಿ 50 ಲಕ್ಷ ಸಹಿ ಸಂಗ್ರಹ ನಡೆ-ಯುತ್ತಿದ್ದು ರಾಜ್ಯದಾದ್ಯಂತ ಜನಗಳು ಮತ್ತು ಪೋಷಕರು ನಮ್ಮೊಟ್ಟಿಗೆ ಹೋರಾಟವನ್ನು ಸಂಘಟಿಸುವ ಮೂಲಕ ಈಗಾಗಲೇ ಮುಚ್ಚುವ ಪಟ್ಟಿಯಲ್ಲಿರುವ ಶಾಲೆಗಳ ಪೈಕಿ 3 ಶಾಲೆಗಳು ಉಳಿಸಿದ್ದಾರೆ. ಉಳೆನೂರು ಸುತ್ತ ಬೆನ್ನೂರು ತಾಂಡಾ, ಶಾಲಿಗನೂರು, ಈಳಿಗನೂರು ಕ್ಯಾಂಪ್, ಬುದಗುಂಪ ಸೇರಿದಂತೆ ಕಾರಟಗಿ ಭಾಗದಲ್ಲಿಯೇ 10 ಶಾಲೆಗಳು ಮುಚ್ಚುವ ಪಟ್ಟಿಯಲ್ಲಿವೆ. ರಾಜ್ಯ ಸರ್ಕಾರ ಕಡಿಮೆ ದಾಖಲಾತಿ ಹೆಸರಿನಲ್ಲಿ ಶಾಲೆಗಳನ್ನು ಮುಚ್ಚುತ್ತಿರುವುದು ಬಡವರ ಮಕ್ಕಳ ಶಿಕ್ಷಣವನ್ನು ಕಸಿದುಕೊಳ್ಳುವ ಬಡವರ ವಿರೋಧಿ ನಡೆಯನ್ನು ವಿರೋಧಿಸಿ ನಾವೆಲ್ಲರೂ ಹೋರಾಡಬೇಕೆಂದು ಕರೆ ನೀಡಿದರು.

ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರಾದ ರವಿಕಿರಣ್ ಅವರು ಈ ಸಹಿ ಸಂಗ್ರಹ ಅಭಿಯಾನವನ್ನು ಉಳೇನೂರಿನ ಜನತೆ ಬೆಂಬಲಿಸಿ ಯಶಸ್ವಿಗೊಳಿಸಲು ಮನವಿ ಮಾಡಿದರು. ಸಿಂಧು.ಕೆ. ಕಾರ್ಯಕರ್ತರಾದ ಸದಾಶಿವ, ಬಾಬು, ದೀಪ, ದುರ್ಗಮ್ಮ, ವಿಜಯಲಕ್ಷ್ಮಿ ದೇವಮ್ಮ, ರಮೇಶ್, ಲಕ್ಷ್ಮಣ, ಶಾಂತಮ್ಮ, ರುದ್ರೇಶ್, ಹುಲ್ಲೇಶ್, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಈ ಅಭಿಯಾನದಲ್ಲಿ ಭಾಗವಹಿಸಿದ್ದರು.

# ರೈಲ್ವೆ ರಿಯಾಯಿತಿ ಪಾಸ್ ಪುನರ್ ಆರಂಭಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಮೇ.31:-ಈ ಹಿಂದೆ ಪತ್ರಕರ್ತರಿಗೆ ನೀಡುತ್ತಿದ್ದ ರಿಯಾಯಿತಿ ರೈಲ್ವೆ ಪಾಸ್ ಕೋವಿಡ್ ಸಂದರ್ಭದಲ್ಲಿ ನಿಲ್ಲಿಸಲಾಗಿತ್ತು ಅದನ್ನು ಪುನರ್ ಆರಂಭ ಮಾಡುವಂತೆ ರೈಲ್ವೆ ರಾಜ್ಯ ಸಚಿವರಿಗೆ ಇಂದು ಮನವಿ ಸಲ್ಲಿಸಲಾಯಿತು. ಬೀದರಗೆ ಇಂದು ಆಗಮಿಸಿರುವ ರೈಲ್ವೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರನ್ನು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಬೀದರ್ ಜಿಲ್ಲಾ ಘಟಕ ನಿಯೋಗ ಸಚಿವರನ್ನು ಭೇಟಿ ಮಾಡಿ ರೈಲ್ವೆ ಇಲಾಖೆ ರಿಯಾಯಿತಿ ಪಾಸ್ ಪುನರ್ ಆರಂಭಿಸುವಂತೆ ಆಗ್ರಹಿಸಿ ಮನವಿ ನೀಡಲಾಯಿತು.

ರೈಲ್ವೆ ರಿಯಾಯಿತಿ ಪಾಸ್ ಮರು ಚಾಲನೆ ಮಾಡಿದರೆ ಎಲ್ಲಾ ಪತ್ರಕರ್ತರಿಗೆ ಅನುಕೂಲವಾಗುತ್ತದೆ ಈ ಹಿಂದೆ ನೀಡುತ್ತಿದ್ದ ಸೌಲಭ್ಯ ಪುನರ್ ಆರಂಭಿಸುವಂತೆ ನಾವೆಲ್ಲರೂ ರೈಲ್ವೆ ಸಚಿವರಿಗೆ ಮನವಿ ಮೂಲಕ ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ ವಿಜಯಕುಮಾರ್ ಪಾಟೀಲ್. ಪ್ರಧಾನ ಕಾರ್ಯದರ್ಶಿ ಶಶಿಕುಮಾರ್ ಪಾಟೀಲ್. ರಾಜ್ಯ ಪರಿಸರದ ಬಸವರಾಜ್ ಪವಾರ್. ಇನ್ನೊಬ್ಬ ರಾಜ್ಯ ಪರಿಸರ ಸದಸ್ಯರಾದ ಅಶೋಕ್‌ಕುಮಾರ್ ಕರಂಜಿ. ಮಾಳಪ್ಪ ಅಡಸಾರೆ, ಶ್ರೀನಿವಾಸ್ ಚೌಧರಿ. ಕಾರ್ಯದರ್ಶಿ ಪ್ರದೀಪ ಬಿರಾದಾರ್. ಶರತ್

ಕುಮಾರ್ ಘಂಟೆ. ಸ್ವಾಮಿದಾಸ್. ಅಮರೇಶ್ ಚಿದ್ರೆ ಸೇರಿದಂತೆ ಮತ್ತಿತರರು ಮನವಿ ಪತ್ರದಲ್ಲಿ ಸಹಿ ಮಾಡಿ ಹಾಜರಿದ್ದರು.

# ಹೈದರಾಬಾದ್ - ಬೀದರ್ ನಡುವೆ ವಂದೇ ಭಾರತ್ ಆರಂಭಿಸಿ; ಕೇಂದ್ರ ಸಚಿವರಿಗೆ ಮನವಿ ಸಲ್ಲಿಸಿದ ಬಂಡೆಪ್ಪ ಖಾಶೆಂಪುರ್

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 31 : ಬೀದರ್ ನಿಂದ ಹೈದರಾಬಾದ್ ನಗರಕ್ಕೆ ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಪ್ರಾರಂಭಿಸಬೇಕು ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವರಾದ ವಿ ಸೋಮಣ್ಣರವರಿಗೆ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಮನವಿ ಮಾಡಿದ್ದಾರೆ.

ವಿವಿಧ ರೈಲ್ವೆ ಯೋಜನೆಗಳ ಶಂಕುಸ್ಥಾಪನೆಗಾಗಿ ಶನಿವಾರ ಬೀದರ್ ರೈಲ್ವೆ ನಿಲ್ದಾಣಕ್ಕೆ ಆಗಮಿಸಿದ್ದ ಕೇಂದ್ರ ಸಚಿವ ವಿ ಸೋಮಣ್ಣರವರನ್ನು ಭೇಟಿಯಾದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು, ತಾವು ಬರೆದಿದ್ದ ಮನವಿ ಪತ್ರವನ್ನು ಸಲ್ಲಿಸಿ, ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲ್ವೆ ಸೇವೆಯ ಅವಶ್ಯಕತೆಯ ಬಗ್ಗೆ ಕೇಂದ್ರ ಸಚಿವರಿಗೆ ಮನವರಿಕೆ ಮಾಡುವ ಪ್ರಯತ್ನ ಮಾಡಿದರು.

'ನೀವು ನಮ್ಮ ಬೀದರ್ ಜಿಲ್ಲೆಗೆ ಭೇಟಿ ನೀಡುತ್ತಿದ್ದೀರಿ ಎಂದು ಕೇಳಿ ನನಗೆ ತುಂಬಾ ಸಂತೋಷವಾಯಿತು. ಬೀದರ್ ಜನರ ಪರವಾಗಿ ನಾನು ನಿಮ್ಮನ್ನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ. ಈ ಸ್ವಾಗತದ ಜೊತೆಗೆ, ಸಾರ್ವಜನಿಕ ಹಿತಾಸಕ್ತಿಯ ವಿಷಯಕ್ಕೆ ಸಂಬಂಧಿಸಿದಂತೆ ನಾನು ನಿಮ್ಮ ಮುಂದೆ ಒಂದು ವಿನಮ್ರ ವಿನಂತಿಯನ್ನು ಇಡಲು ಬಯಸುತ್ತೇನೆ. ಕರ್ನಾಟಕದ ಉತ್ತರ ತುದಿಯಲ್ಲಿರುವ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಭಾಗವಾಗಿರುವ ನಮ್ಮ ಬೀದರ್ ಜಿಲ್ಲೆ ಹೈದರಾಬಾದ್ ನಗರದಿಂದ ಕೇವಲ 130 ಕಿ.ಮೀ ದೂರದಲ್ಲಿದೆ. ಬೀದರ್‌ನಿಂದ ಗಮನಾರ್ಹ ಸಂ-ಖ್ಯೆಯ ಜನರು ಉದ್ಯೋಗ, ಶಿಕ್ಷಣ, ಆರೋಗ್ಯ ರಕ್ಷಣೆ, ವ್ಯಾಪಾರ ಮತ್ತು ಇತರ ಸೇವೆಗಳಿಗಾಗಿ ಪ್ರತಿದಿನ ಹೈದರಾಬಾದ್‌ಗೆ ಪ್ರಯಾಣಿಸುತ್ತಾರೆ. ಬೀದರ್ ಮತ್ತು ಹೈದರಾಬಾದ್ ನಡುವೆ ಈಗಾಗಲೇ ಇಂಟರ್‌ಸಿಟಿ ರೈಲುಗಳು ಕಾರ್ಯನಿರ್ವಹಿಸುತ್ತಿದ್ದರೂ, ಇವುಗಳಿಗೆ ಹೋಲಿಸಿದರೆ, ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಹೆಚ್ಚು ವೇಗವಾಗಿರುತ್ತವೆ ಮತ್ತು ಸುಧಾರಿತ ಸೌಲಭ್ಯಗಳು ಮತ್ತು ಆಧುನಿಕ ಸೌಲಭ್ಯಗಳನ್ನು ಹೊಂದಿವೆ. ಬೀದರ್ ಮತ್ತು ಹೈದರಾಬಾದ್ ನಡುವೆ ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ (ಹೈ-ಸ್ಪೀಡ್ ರೈಲು) ಸೇವೆಯನ್ನು ಪರಿಚಯಿಸಲು ವ್ಯವಸ್ಥೆ ಮಾಡಿದರೆ, ಅದು ಅಪಾರ ಪ್ರಯೋಜನಕಾರಿಯಾಗುತ್ತದೆ. ಅಂತಹ ಸೇವೆಯು ಬೀದರ್ ಮತ್ತು ಹೈದರಾಬಾದ್ ನಡುವೆ ವ್ಯಾಪಾರ ಮತ್ತು ಪ್ರವಾಸೋದ್ಯಮವನ್ನು ಉತ್ತೇಜಿಸುವುದಲ್ಲದೆ, ಬಹು ವಲಯಗಳಲ್ಲಿ ಬೆಳವಣಿಗೆಯನ್ನು ಬೆಂಬಲಿಸುತ್ತದೆ. ಆರ್ಥಿಕವಾಗಿಯೂ ಸಹ, ಇದು ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ. ಇದಲ್ಲದೆ, ಬೀದರ್‌ನಿಂದ ಹೈದರಾಬಾದ್‌ಗೆ ಪ್ರಯಾಣಿಸುವ ಜನರಿಗೆ ಮತ್ತು ಕೆಲಸ, ಆರೋಗ್ಯ ರಕ್ಷಣೆ ಅಥವಾ ಇತರ ತುರ್ತು ಅಗತ್ಯಗಳಿಗಾಗಿ ಹೈದರಾಬಾದ್‌ಗೆ ಪ್ರಯಾಣಿಸುವವರಿಗೆ ಇದು ಸಮಯವನ್ನು ಉಳಿಸುತ್ತದೆ. ಆದ್ದರಿಂದ, ಬೀದರ್ ಜಿಲ್ಲೆಯ ಜನರ ಪರವಾಗಿ, ಬೀದರ್ ಮತ್ತು ಹೈದರಾಬಾದ್ ನಗರಗಳ ನಡುವೆ ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಪರಿಚಯಿಸಬೇಕೆಂದು ನಾನು ನಿಮ್ಮನ್ನು ವಿನಂತಿಸುತ್ತೇನೆ' ಎಂಬ ಅರ್ಥದಲ್ಲಿ ಇಂಗ್ಲಿಷ್‌ನಲ್ಲಿ ಬರೆದಿದ್ದ ಮನವಿ ಪತ್ರವನ್ನು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ಕೇಂದ್ರ ಸಚಿವ ವಿ ಸೋಮಣ್ಣರವರಿಗೆ ಸಲ್ಲಿಸಿದರು.



ಈ ವೇಳೆ ಮಾತನಾಡಿದ ಕೇಂದ್ರ ಸಚಿವ ವಿ ಸೋಮಣ್ಣರವರು, ಹೈದರಾಬಾದ್, ಬೀದರ್, ಕಲಬುರಗಿ ನಡುವೆ ಒಂದು ಮೇಮೋ ಟ್ರೈನ್ ಸೇವೆ ನೀಡುವ ಕಾತುರತೆಯಲ್ಲಿ ನಾವು ಇದ್ದೇವೆ. ಇದಕ್ಕೆ 1700 ಕೋಟಿ ರೂ. ನಾವು ಖರ್ಚು ಮಾಡುತ್ತಿದ್ದೇವೆ. ಇದೊಂದು ದೊಡ್ಡಮಟ್ಟದ ಕೆಲಸವಾಗಿದೆ. ಇದೆಲ್ಲಾ ಆದ ಕೂಡಲೇ ಒಂದೇ ಭಾರತ್ ರೈಲು ತನ್ನಷ್ಟಕ್ಕೆ ತಾನೇ ಬರುತ್ತದೆ. ಈಗಾಗಲೇ ಕಲಬುರಗಿ, ಬೀದರ್, ಹೈದರಾಬಾದ್ ನಡುವೆ ಒಂದೇ ಭಾರತ್ ಸೇವೆ ಆರಂಭಿಸುವ ಯೋಜನೆ ಒಂದು ಹಂತಕ್ಕೆ ಬಂದಿದೆ. ಈ ವಿಷಯದಲ್ಲಿ ಎಲ್ಲವೂ ಒಳ್ಳೆಯದಾಗಲಿದೆ ಎಂದರು.ಈ ಸಂದರ್ಭದಲ್ಲಿ ಸಚಿವರು, ಶಾಸಕರು, ಸ್ಥಳೀಯ ಜನಪ್ರತಿನಿಧಿಗಳು, ರೈಲ್ವೆ ಇಲಾಖೆಯ ಅಧಿಕಾರಿಗಳು ಸೇರಿದಂತೆ ಅನೇಕರಿದ್ದರು.

ಕರ್ನಾಟಕ ಸರ್ಕಾರ

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಬೀದರ**

ಸಂಖ್ಯೆ:ಎನ್‌ಎಚ್‌ಎಂ/ಜಿಆಕುಕಸಂಬೀ/ಐಡಿಎಸ್‌ಪಿ/ಸಿಬ್ಬಂದಿ/ಸಿಆರ್01/2025-26 ದಿನಾಂಕ : 30/05/2025

**:: ಪ್ರಕಟಣೆ ::**

ಎನ್‌ಎಚ್‌ಎಂ ಯೋಜನೆಯ ಜಿಲ್ಲಾ ಸರ್ವೇಕ್ಷಣಾ ಘಟಕ (ಐ.ಡಿ.ಎಸ್.ಪಿ) ಕಾರ್ಯಕ್ರಮದಡಿಯಲ್ಲಿ ಬ್ಲಾಕ್ ಮಟ್ಟದ ಸಾರ್ವಜನಿಕ ಆರೋಗ್ಯ ಘಟಕದಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ತಾಲೂಕಾ ಎಪಿಡಮಲೋಜಿಸ್ಟ್ (BPHU) ಹುದ್ದೆ ಭರ್ತಿಗಾಗಿ ಈ ಕೆಳಗೆ ವಿವರಿಸಿದ ವಿದ್ಯಾರ್ಹತೆವುಳ್ಳ ಅಭ್ಯರ್ಥಿಗಳಿಗೆ ದಿನಾಂಕ : **09/06/2025 ರಂದು ಬೆಳಿಗ್ಗೆ 10.30 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ** ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳ ಕಚೇರಿ ಆವರಣ ಬೀದರನಲ್ಲಿ ಖುದ್ದಾಗಿ ಹಾಜರಾಗಿ ಅರ್ಜಿ ಸಲ್ಲಿಸುವುದು ಮತ್ತು ದಿನಾಂಕ: **13/06/2025ರಂದು** ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ನೇರ ಸಂದರ್ಶನ ಹಾಜರಾಗತಕ್ಕದ್ದು. (ನಿಗದಿತ ದಿನಾಂಕ **09/06/2025ರಂದು** ಮಾತ್ರ ಅರ್ಜಿಗಳನ್ನು ಸ್ವೀಕರಿಸಲಾಗುವುದು.)

1) Name of the Post : **BPHU EPIDEMIOLOGIST,** 2) No. of posts: **04**, 3) Place of Working: **Aurad BPHU Bhalki, BPHU Humnabad, BPHU Basavakalyan.** 4) Remuneration : Rs. 30,000/- As per the State NHM Norms & HR Policy , 5) Age 45 Yrs. 6) **Qualification & Experience :** Medical Graduate with Post Graduate Degree/Diploma in Preventive and Social Medicine / Public Health or Epidemiology (Such as MD, MPH, DPH, MAE etc) **OR** Any AYUSH/ Dentel Sciences Graduate with MPH (Master in Public Health) with 1 Year experience in Public Health **OR** M.Sc (Epidemiology) with 2 years experience in Public Health/ (Desirable) **OR** B.Sc. In Life Sciences (Nursing/ Biology/ Microbiology/ Development Biology & Physiology)/BDS/BPT with **i)** Mesters of Public Health (MPH-Epidemiology)/ Diploma in Public Health (DPH-Epidemiology) along with 1 year Experience in Public Health OR **ii)** Master in Applied Epidemiology (MAE) From recognized University of India along with two years of experience in Public Health; **OR** iii) PhD in Clinical Sciences/Medical Sc/Preventive Medicine / Human Physiology/ Pathophysiology/ Epidemiology. ಸದರಿ ನೇಮಕಾತಿಯು **80:20** ಅನುಪಾತ ಅಂಕಗಳು (80% ಪ್ರತಿಶತ ನಿಗದಿತ ಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳು ಮತ್ತು ಶೇ.20% ಪ್ರತಿಶತ ಸಂದರ್ಶನದಲ್ಲಿ ಗಳಿಸಿದ ಅಂಕಗಳು) ಹಾಗೂ ರೋಸ್ಟರ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು ಸದರಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ದಿನಾಂಕ **09/06/2025** ರಂದು ತಮ್ಮ ಶೈಕ್ಷಣಿಕ ವಿದ್ಯಾರ್ಹತೆಯ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಒಂದು ಜೊತೆ ಜೆರಾಕ್ಸ್ ಪ್ರತಿಗಳು ಮತ್ತು ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಖುದ್ದಾಗಿ ಹಾಜರಾಗಿ ಅರ್ಜಿ ಸಲ್ಲಿಸುವುದು ಮತ್ತು ದಿನಾಂಕ: **13/06/2025 ರಂದು** ಸಂದರ್ಶನಕ್ಕೆ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಅಂಚೆ ಮುಖಾಂತರ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ಐಡಿಎಸ್‌ಪಿ ವಿಭಾಗಕ್ಕೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ದಿನಾಂಕ: **04/12/2023** ರಂದು ಸದರಿ ಹುದ್ದೆಯ ಭರ್ತಿಗಾಗಿ ಹೊರಡಿಸಿದ ಪ್ರಕಟಣೆಯನ್ನು ರದ್ದುಗೊಳಿಸಲಾಗಿದೆ.

**ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬೀದರ.**

ವಾ.ಸಾ.ಸಂ.ಇ/ಬೀದರ/52/ಕೆ.ಎಸ್.ಎಂ.ಸಿ.&ಎ/2025-26

**Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.**